VOLUME: 16 | 15 JULY 2026 | ಬುಧವಾರ | RS: 2 | PAGE: 06 ISSUE: 153 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

'ತುಂಬಾಡ್ 2' ನಿರ್ಮಾಣ ಆಗಲಿರುವ ಸುದ್ದಿ ಹಳತೇ ಆಗಿದೆ. ಆದರೆ ಸಿನಿಮಾನಲ್ಲಿ ನಟಿಸಲಿರುವ ನಟ ಯಾರೆಂಬುದರ ಬಗ್ಗೆ ಸಾಕಷ್ಟು ಗೊಂದಲಗಳು ಸೃಷ್ಟಿ ಆಗಿದ್ದವು. ಸಮಂತಾ ಋತ್ ಪ್ರಭು ಹೆಸರು ಮುಖ್ಯವಾಗಿ ಕೇಳಿ ಬಂದಿತ್ತು. ಸಮಂತಾರ ಪತಿಯೇ 'ತುಂಬಾಡ್ 2' ನಿರ್ಮಾಣ ಮಾಡಲಿದ್ದಾರೆ ಎಂಬ ಸುದ್ದಿಯೂ ಗಟ್ಟಿಯಾಗಿ ಹರಿದಾಡಿತ್ತು.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಸರ್ಕಾರಿ ಪ್ರಯೋಜಿತ ಎಐ ವಿವಿ ಘೋಷಣೆ

ಬೆಂಗಳೂರು: ಕರ್ನಾಟಕವನ್ನು ಕೃತಕ ಬುದ್ಧಿಮತ್ತೆ (ಎಐ) ಕ್ಷೇತ್ರದಲ್ಲಿ ಜಾಗತಿಕ ಮುಂಚೂಣಿಗೆ ತರುವ ಮಹತ್ವಾಕಾಂಕ್ಷಿ ಯೋಜನೆಯ ಭಾಗವಾಗಿ, ದೇಶದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ (ಎಐ) ವಿಶ್ವವಿದ್ಯಾಲಯವನ್ನು ಬೆಂಗಳೂರಿನಲ್ಲಿ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದ್ದಾರೆ.

ನಗರದ ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರದಲ್ಲಿ ನಡೆದ ಗೂಗಲ್ ಕನೆಕ್ಟ್ ಇಂಡಿಯಾ–2026 ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಡಳಿತ, ಶಿಕ್ಷಣ, ಆರೋಗ್ಯ, ಕೃಷಿ ಮತ್ತು ಸಾರ್ವಜನಿಕ ಸೇವೆಗಳಲ್ಲಿ ಎಐ ತಂತ್ರಜ್ಞಾನವನ್ನು ವ್ಯಾಪಕವಾಗಿ ಅಳವಡಿಸಿ ಕರ್ನಾಟಕವನ್ನು 'ಎಐ–ನೇಟಿವ್' ರಾಜ್ಯವನ್ನಾಗಿ ರೂಪಿಸುವ ಗುರಿ ಸರ್ಕಾರ ಹೊಂದಿದೆ ಎಂದು ಹೇಳಿದರು.

> ಎಐ ವಿಶ್ವವಿದ್ಯಾಲಯವು ಪ್ರತಿಭಾವಂತ ವಿದ್ಯಾರ್ಥಿಗಳನ್ನು ರೂಪಿಸುವುದು, ಅತ್ಯಾಧುನಿಕ ಸಂಶೋಧನೆಗೆ ಉತ್ತೇಜನ ನೀಡುವುದು ಹಾಗೂ ಶಿಕ್ಷಣ ಸಂಸ್ಥೆಗಳು, ಕೈಗಾರಿಕೆಗಳು ಮತ್ತು ಸರ್ಕಾರದ ನಡುವೆ ಸಹಯೋಗವನ್ನು ಬಲಪಡಿಸುವ ಕೇಂದ್ರವಾಗಲಿದೆ ಎಂದು ಅವರು ತಿಳಿಸಿದರು.

ಶಿಕ್ಷಣ ಕ್ಷೇತ್ರದಲ್ಲಿ ಎಐ ಆಧಾರಿತ ಬೋಧನೆ, ಆರೋಗ್ಯ ಕ್ಷೇತ್ರದಲ್ಲಿ ರೋಗಗಳ ಮುಂಚಿತ ಪತ್ತೆ ಮತ್ತು ಉತ್ತಮ ವೈದ್ಯಕೀಯ ಸೇವೆ, ಕೃಷಿಯಲ್ಲಿ ರೈತರಿಗೆ ಎಐ ಆಧಾರಿತ ಸಲಹಾ ವ್ಯವಸ್ಥೆ, ಸರ್ಕಾರಿ ಸೇವೆಗಳಲ್ಲಿ ವೇಗ ಮತ್ತು ಪಾರದರ್ಶಕತೆ ಹಾಗೂ ಸಣ್ಣ ಉದ್ಯಮಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವಲ್ಲಿ ಎಐ ಪ್ರಮುಖ ಪಾತ್ರ ವಹಿಸಲಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಬೆಂಗಳೂರು ಭಾರತದ ನಾವೀನ್ಯತೆಯ ರಾಜಧಾನಿಯಾಗಿದ್ದು, ವಿಶ್ವದ ಅತ್ಯಂತ ಸಕ್ರಿಯ ತಂತ್ರಜ್ಞಾನ ಪರಿಸರ ವ್ಯವಸ್ಥೆಗಳಲ್ಲಿ ಒಂದಾಗಿದೆ. ಇಲ್ಲಿ ತಂತ್ರಜ್ಞಾನ ಕೇವಲ ಕಚೇರಿಗಳಿಗೆ ಸೀಮಿತವಾಗಿಲ್ಲ; ಅದು ವಿದ್ಯಾರ್ಥಿಗಳ ತರಗತಿಗಳಿಂದ ಹಿಡಿದು ಸಂಶೋಧನಾ ಪ್ರಯೋಗಾಲಯಗಳು, ನವೋದ್ಯಮಗಳು ಮತ್ತು ಜಾಗತಿಕ ಕಂಪನಿಗಳವರೆಗೆ ವ್ಯಾಪಿಸಿದೆ ಎಂದು ಅವರು ಹೇಳಿದರು.

ಕರ್ನಾಟಕ ಇಂದು ಭಾರತದ ಒಟ್ಟು ಸಾಫ್ಟ್‌ವೇರ್ ರಫ್ತಿನ ಸುಮಾರು 40 ಶೇಕಡಾ ಕೊಡುಗೆ ನೀಡುತ್ತಿದೆ. ಬೆಂಗಳೂರು 17,000ಕ್ಕೂ ಹೆಚ್ಚು ನವೋದ್ಯಮಗಳಿಗೆ (ಸ್ಟಾರ್ಟ್‌ಅಪ್‌ಗಳಿಗೆ) ನೆಲೆಯಾಗಿದ್ದು, ಜಾಗತಿಕ ಸಾಮರ್ಥ್ಯ ಕೇಂದ್ರಗಳ ಪ್ರಮುಖ ತಾಣವಾಗಿದೆ ಎಂದು ಅವರು ವಿವರಿಸಿದರು.

ಗೂಗಲ್ ಸಂಸ್ಥೆಯೊಂದಿಗೆ ಕರ್ನಾಟಕದ ಸಹಭಾಗಿತ್ವವನ್ನು ಇನ್ನಷ್ಟು ಬಲಪಡಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಮುಖ್ಯಮಂತ್ರಿ, ಶಿಕ್ಷಣ, ಆರೋಗ್ಯ, ಕೃಷಿ, ಸಣ್ಣ ಉದ್ಯಮಗಳು ಹಾಗೂ ಸಂಚಾರ ವ್ಯವಸ್ಥೆಯಲ್ಲಿ ಎಐ ಆಧಾರಿತ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಸಂಸ್ಥೆಗೆ ಆಹ್ವಾನ ನೀಡಿದರು.

## ಅನಧಿಕೃತ ಜಾಹೀರಾತುಗಳಿಗೆ ಬ್ರೇಕ್

ಬೆಂಗಳೂರು: ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳ ಕಂದಾಯ ವಿಭಾಗದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು, ಅನಧಿಕೃತ ಜಾಹೀರಾತುಗಳನ್ನು ಯಾವುದೇ ಮುಲಾಜಿಲ್ಲದೆ ತೆರವುಗೊಳಿಸುವಂತೆ ಹಾಗೂ ಸುಮಾರು 23 ಲಕ್ಷ ಆಸ್ತಿಗಳಿಗೆ ಮನೆ–ಮನೆಗೆ ಇ–ಖಾತೆ ವಿತರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು. ಸಭೆಯಲ್ಲಿ ಮಾತನಾಡಿದ ಅವರು, ಜಿಬಿಎ ವ್ಯಾಪ್ತಿಯ ಎಲ್ಲ ಆಸ್ತಿಗಳಿಗೆ ಖಾತೆ ಮಾಡಿಕೊಟ್ಟು ಆಸ್ತಿ ತೆರಿಗೆ ಸಂಗ್ರಹವನ್ನು ಪರಿಣಾಮಕಾರಿಯಾಗಿ ಹೆಚ್ಚಿಸಬೇಕು. ತೆರಿಗೆ ವ್ಯಾಪ್ತಿಯಿಂದ ಹೊರಗಿರುವ ಆಸ್ತಿಗಳನ್ನು ಗುರುತಿಸಿ ತೆರಿಗೆ ವ್ಯಾಪ್ತಿಗೆ ತರಬೇಕು. ಕಡಿಮೆ ತೆರಿಗೆ ಪಾವತಿಸುತ್ತಿರುವ ಪ್ರಕರಣಗಳನ್ನು ಪತ್ತೆಹಚ್ಚಿ ಪರಿಷ್ಕರಣೆ ಮೂಲಕ ಸೂಕ್ತ ತೆರಿಗೆ ಸಂಗ್ರಹಿಸಬೇಕು ಎಂದು ನಿರ್ದೇಶನ ನೀಡಿದರು.

ಬಿ–ಖಾತೆಯಿಂದ ಎ–ಖಾತೆಗೆ ಪರಿವರ್ತನೆ ಪ್ರಕ್ರಿಯೆಗೆ ವೇಗ ನೀಡಬೇಕು. ಜಿಐಎಸ್, ಡ್ರೋನ್ ಸೇರಿದಂತೆ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಬೆಸ್ಕಾಂ, ಜಲಮಂಡಳಿ ಸೇರಿದಂತೆ ವಿವಿಧ ಇಲಾಖೆಗಳ ಮಾಹಿತಿಯನ್ನು ಏಕೀಕರಿಸಿ ನೋಂದಣಿಯಾಗದ ಆಸ್ತಿಗಳನ್ನು ಗುರುತಿಸುವಂತೆ ಸೂಚಿಸಿದರು.

ನಗರದಲ್ಲಿ ಹೊಸ ಜಾಹೀರಾತು ನೀತಿ ಜಾರಿಯಾದ ಬಳಿಕ ಪರವಾನಗಿ ಇಲ್ಲದೆ ಅಳವಡಿಸಿರುವ ಡಿಜಿಟಲ್ ಜಾಹೀರಾತುಗಳನ್ನು ಯಾವುದೇ ವಿನಾಯಿತಿ ನೀಡದೆ ತೆರವುಗೊಳಿಸಬೇಕು. ಪರವಾನಗಿ ಪಡೆದಿದ್ದರೂ ಅನುಮೋದಿತ ಉದ್ದೇಶಕ್ಕೆ ವಿರುದ್ಧವಾಗಿ ಬಳಸುತ್ತಿರುವ ಜಾಹೀರಾತುದಾರರ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ತಿಳಿಸಿದರು.



ಜುಲೈ 1ರಿಂದ 10ರವರೆಗೆ ನಡೆದ ವಿಶೇಷ ಕಾರ್ಯಾಚರಣೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ನಗರದ ಐದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 490.55 ಕಿಲೋಮೀಟರ್ ಉದ್ದದ ಪಾದಚಾರಿ ಮಾರ್ಗಗಳ ಮೇಲಿನ ಒತ್ತುವರಿಯನ್ನು ತೆರವುಗೊಳಿಸಿದೆ ಎಂದು ಜಿಬಿಎ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

# ಒತ್ತುವರಿ ತೆರವು ಮುಂದೂಡಿಕೆ

ಬೆಂಗಳೂರು: ಜುಲೈ 1ರಿಂದ 10ರವರೆಗೆ ನಡೆದ ವಿಶೇಷ ಕಾರ್ಯಾಚರಣೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ನಗರದ ಐದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 490.55 ಕಿಲೋಮೀಟರ್ ಉದ್ದದ ಪಾದಚಾರಿ ಮಾರ್ಗಗಳ ಮೇಲಿನ ಒತ್ತುವರಿಯನ್ನು ತೆರವುಗೊಳಿಸಿದೆ.

ಜಿಬಿಎ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, ಬೆಂಗಳೂರು ಪಶ್ಚಿಮ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅತಿ ಹೆಚ್ಚು 122.62 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಒತ್ತುವರಿಯಿಂದ ಮುಕ್ತಗೊಳಿಸಲಾಗಿದೆ. ಬೆಂಗಳೂರು ಉತ್ತರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 115.35 ಕಿ.ಮೀ. ತೆರವುಗೊಳಿಸುವ ಮೂಲಕ ಎರಡನೇ ಸ್ಥಾನ ಪಡೆದಿದೆ.

ಇನ್ನು ಬೆಂಗಳೂರು ದಕ್ಷಿಣ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 94.01 ಕಿ.ಮೀ., ಬೆಂಗಳೂರು ಪೂರ್ವ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 88 ಕಿ.ಮೀ. ಹಾಗೂ ಬೆಂಗಳೂರು ಕೇಂದ್ರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 70 ಕಿ.ಮೀ. ಉದ್ದದ ಪಾದಚಾರಿ ಮಾರ್ಗಗಳ ಮೇಲಿನ ಅತಿಕ್ರಮಣವನ್ನು ತೆರವುಗೊಳಿಸಲಾಗಿದೆ.

> ಈ ಕುರಿತು ಪ್ರತಿಕ್ರಿಯಿಸಿರುವ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, "ನಿಜವಾದ ಬದಲಾವಣೆಗೆ ಕೆಲವೊಮ್ಮೆ ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಲೇಬೇಕು. ಜನರ ಸಹಕಾರದಿಂದ ಸುರಕ್ಷಿತ, ಸ್ವಚ್ಛ ಮತ್ತು ವಾಸಯೋಗ್ಯ ಬೆಂಗಳೂರನ್ನು ನಿರ್ಮಿಸಲು ಸಾಧ್ಯ. ಬದಲಾವಣೆ ಆರಂಭದಲ್ಲಿ ಟೀಕೆಗೆ ಗುರಿಯಾಗಬಹುದು. ಆದರೆ ಅದು ಲಕ್ಷಾಂತರ ಜನರ ಜೀವನವನ್ನು ಸುಧಾರಿಸಿದರೆ ಆ ಪ್ರಯತ್ನ ಸಾರ್ಥಕವಾಗುತ್ತದೆ" ಎಂದು ಹೇಳಿದ್ದಾರೆ.

ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ಆರಂಭವಾದಾಗ ಕೆಲವು ವಲಯಗಳಿಂದ ಟೀಕೆಗಳು ವ್ಯಕ್ತವಾಗಿದ್ದರೂ, ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ಸಂಚಾರಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಕಾರ್ಯಾಚರಣೆ ಮುಂದುವರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, "ನಿಜವಾದ ಬದಲಾವಣೆಗೆ ಕೆಲವೊಮ್ಮೆ ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಲೇಬೇಕು. ಜನರ ಸಹಕಾರದಿಂದ ಸುರಕ್ಷಿತ, ಸ್ವಚ್ಛ ಮತ್ತು ವಾಸಯೋಗ್ಯ ಬೆಂಗಳೂರನ್ನು ನಿರ್ಮಿಸಲು ಸಾಧ್ಯ. ಬದಲಾವಣೆ ಆರಂಭದಲ್ಲಿ ಟೀಕೆಗೆ ಗುರಿಯಾಗಬಹುದು. ಆದರೆ ಅದು ಲಕ್ಷಾಂತರ ಜನರ ಜೀವನವನ್ನು ಸುಧಾರಿಸಿದರೆ ಆ ಪ್ರಯತ್ನ ಸಾರ್ಥಕವಾಗುತ್ತದೆ" ಎಂದು ಹೇಳಿದ್ದಾರೆ.

ಪಾದಚಾರಿಗಳಿಗೆ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವುದು, ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಣದಿಂದ ಮುಕ್ತಗೊಳಿಸುವುದು ಹಾಗೂ ನಗರದಲ್ಲಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಇಂತಹ ವಿಶೇಷ ಕಾರ್ಯಾಚರಣೆಗಳನ್ನು ಮುಂದುವರಿಸಲಾಗುವುದು ಎಂದು ಜಿಬಿಎ ತಿಳಿಸಿದೆ.

"ಡಿ.ಕೆ.ಶಿವಕುಮಾರ್ ಅವರು ಸಿದ್ದರಾಮಯ್ಯರನ್ನು ಬದಲಾಯಿಸಲು ನೀಡಿರುವ ರಾಜಕೀಯ ಭರವಸೆಯನ್ನು ಈಡೇರಿಸಿಕೊಳ್ಳಲು ಬೇರೆ ದಾರಿ ಹುಡುಕಿಕೊಳ್ಳಲಿ.ಬಡ ರೈತರ ಹೊಟ್ಟೆಯ ಮೇಲೆ ಹೊಡೆಯಬಾರದು. ಪ್ರಧಾನಿ ನರೇಂದ್ರ ಮೋದಿ ಈ ಯೋಜನೆಗೆ ಒಪ್ಪಿಗೆ ನೀಡಿದ್ದಾರೆ ಎಂದು ಹೇಳುತ್ತಿರುವುದು ಸತ್ಯಕ್ಕೆ ದೂರವಾದ ಮಾತು" ಎಂದು ದೇವೇಗೌಡರು ವಾಗ್ದಾಳಿ ನಡೆಸಿದರು. ಬಿಡದಿ ಟೌನ್‌ಶಿಪ್ ಯೋಜನೆಯನ್ನು ಸಂಪೂರ್ಣವಾಗಿ ಕೈಬಿಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ 11 ಪುಟಗಳ ಪತ್ರ ಬರೆದಿರುವುದಾಗಿ ದೇವೇಗೌಡರು ತಿಳಿಸಿದರು.

# ಟೌನ್‌ಶಿಪ್ ಯೋಜನೆ ಕೈಬಿಡಲು ಆಗ್ರಹ

ಬೆಂಗಳೂರು:ಳ ರಾಮನಗರ ಜಿಲ್ಲೆಯ ಬಿಡದಿ ಟೌನ್‌ಶಿಪ್ ಯೋಜನೆ ವಿವಾದ ತೀವ್ರ ರಾಜಕೀಯ ಸ್ವರೂಪ ಪಡೆದುಕೊಂಡಿದ್ದು, ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ರೈತರ ಜಮೀನಿನ ಮೇಲೆ ಟೌನ್‌ಶಿಪ್ ಯೋಜನೆ ಜಾರಿಗೊಳಿಸುವ ಮೂಲಕ ಕಾಂಗ್ರೆಸ್ ಹೈಕಮಾಂಡ್‌ಗೆ ನೀಡಿದ ರಾಜಕೀಯ ಭರವಸೆಯನ್ನು ಈಡೇರಿಸಲು ಸಿಎಂ ಮುಂದಾಗಿದ್ದಾರೆ ಎಂದು ಅವರು ಆರೋಪಿಸಿದರು.

ಜೆಪಿ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ದೇವೇಗೌಡರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಕಾಂಗ್ರೆಸ್ ಹೈಕಮಾಂಡ್‌ಗೆ ನೀಡಿದ ಭರವಸೆಯನ್ನು ಈಡೇರಿಸುವ ಉದ್ದೇಶದಿಂದಲೇ ಬಿಡದಿಯ ಸುಮಾರು 7 ಸಾವಿರ ಎಕರೆ ಪ್ರದೇಶವನ್ನು ಟೌನ್‌ಶಿಪ್‌ಗೆ ಬಳಸಲು ಪ್ರಯತ್ನಿಸಲಾಗುತ್ತಿದೆ ಎಂದು ದೂರಿದರು.

"ಡಿ.ಕೆ.ಶಿವಕುಮಾರ್ ಅವರು ಸಿದ್ದರಾಮಯ್ಯರನ್ನು ಬದಲಾಯಿಸಲು ನೀಡಿರುವ ರಾಜಕೀಯ ಭರವಸೆಯನ್ನು ಈಡೇರಿಸಿಕೊಳ್ಳಲು ಬೇರೆ ದಾರಿ ಹುಡುಕಿಕೊಳ್ಳಲಿ.ಬಡ ರೈತರ ಹೊಟ್ಟೆಯ ಮೇಲೆ ಹೊಡೆಯಬಾರದು. ಪ್ರಧಾನಿ ನರೇಂದ್ರ ಮೋದಿ ಈ ಯೋಜನೆಗೆ ಒಪ್ಪಿಗೆ ನೀಡಿದ್ದಾರೆ ಎಂದು ಹೇಳುತ್ತಿರುವುದು ಸತ್ಯಕ್ಕೆ ದೂರವಾದ ಮಾತು" ಎಂದು ದೇವೇಗೌಡರು ವಾಗ್ದಾಳಿ ನಡೆಸಿದರು.

ಬಿಡದಿ ಟೌನ್‌ಶಿಪ್ ಯೋಜನೆಯನ್ನು ಸಂಪೂರ್ಣವಾಗಿ ಕೈಬಿಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ 11 ಪುಟಗಳ ಪತ್ರ ಬರೆದಿರುವುದಾಗಿ ದೇವೇಗೌಡರು ತಿಳಿಸಿದರು. ಸರ್ಕಾರ ಯೋಜನೆಯನ್ನು ಹಿಂಪಡೆಯದಿದ್ದರೆ



ವಿಧಾನಸೌಧದ ಗಾಂಧಿ ಪ್ರತಿಮೆ ಎದುರು ಧರಣಿ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಯೊಬ್ಬರು ಕೂಡ ಯೋಜನಾ ಪ್ರದೇಶಕ್ಕೆ ಭೇಟಿ ನೀಡಿ ಇಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡಬಾರದು ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸರ್ಕಾರ ಈ ಅಭಿಪ್ರಾಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಅವರು ಹೇಳಿದರು. ಸಣ್ಣ ರೈತರ ಬದುಕಿಗೆ ಸಂಕಷ್ಟ ಯೋಜನೆಯಿಂದ ಸಾವಿರಾರು ಸಣ್ಣ ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ದೇವೇಗೌಡರು ಅಂಕಿ–ಅಂಶಗಳನ್ನು ಬಿಡುಗಡೆ ಮಾಡಿದರು. ಯೋಜನಾ ವ್ಯಾಪ್ತಿಯಲ್ಲಿ 2,555 ರೈತರಿಗೆ 1ರಿಂದ 5 ಗುಂಟೆ, 1,653 ರೈತರಿಗೆ 10ರಿಂದ 20 ಗುಂಟೆ, 2,257 ರೈತರಿಗೆ 20ರಿಂದ 40 ಗುಂಟೆ ಹಾಗೂ 1,342 ರೈತರಿಗೆ 1ರಿಂದ 2 ಎಕರೆ ಜಮೀನು ಮಾತ್ರ ಇದೆ ಎಂದು ವಿವರಿಸಿದರು.

## ಭಾರತೀಯ ಹಡಗುಗಳ ಮೇಲೆ ದಾಳಿ

ಮಂಗಳೂರು: ಒಮನ್ ಕರಾವಳಿಯಲ್ಲಿ ಸರಕು ಸಾಗಣೆ ಹಡಗಿನ ಮೇಲೆ ನಡೆದ ಕ್ಷಿಪಣಿ ದಾಳಿಯ ಬಳಿಕ ಒಮಾನ್ ನೌಕಾಪಡೆಯಿಂದ ರಕ್ಷಿಸಲ್ಪಟ್ಟ ಭಾರತೀಯರ ಪೈಕಿ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಯುವ ನಾವಿಕರೊಬ್ಬರು ಸೇರಿದ್ದಾರೆ. ಅವರು ಸದ್ಯ ಒಮನ್‌ನಲ್ಲಿ ತಮ್ಮ ಹಡಗು ಕಂಪನಿಯ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಸುರಕ್ಷಿತರಾಗಿದ್ದು, ಅಗತ್ಯ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಭಾರತಕ್ಕೆ



ಮರಳಲಿದ್ದಾರೆ ಎಂದು ತಿಳಿದುಬಂದಿದೆ.

ಕೇಂದ್ರ ವಿದೇಶಾಂಗ ಸಚಿವಾಲಯದ ಮಾಹಿತಿ ಪ್ರಕಾರ, ಸೈಪ್ರಸ್ ಧ್ವಜ ಹೊಂದಿದ್ದ ಜಿಎಫ್‌ಎಸ್ ಗ್ಯಾಲಕ್ಸಿ ಸರಕು ಸಾಗಣೆ ಹಡಗು ಒಮನ್ ಕರಾವಳಿಯಲ್ಲಿ ದಾಳಿಗೆ ಒಳಗಾಗಿತ್ತು. ಹಡಗಿನಲ್ಲಿ ಒಟ್ಟು 11 ಭಾರತೀಯರು ಇದ್ದು, ಅವರಲ್ಲಿ 10 ಮಂದಿಯನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಓರ್ವ ಭಾರತೀಯ ನಾವಿಕ ಇನ್ನೂ ನಾಪತ್ತೆಯಾಗಿದ್ದು, ಶೋಧ ಕಾರ್ಯ ಮುಂದುವರಿದಿದೆ.

ರಕ್ಷಿಸಲ್ಪಟ್ಟ ನಾವಿಕರ ಮಾಹಿತಿ ಪ್ರಕಾರ, ದಾಳಿಯಲ್ಲಿ ಒಬ್ಬ ಸಿಬ್ಬಂದಿ ತೀವ್ರವಾಗಿ ಗಾಯಗೊಂಡಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ಮತ್ತೊಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ. ಕಂಪನಿಯು ಅಗತ್ಯ ಕಾನೂನು ಮತ್ತು ಆಡಳಿತಾತ್ಮಕ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಭಾರತಕ್ಕೆ ವಾಪಸ್ ಕಳುಹಿಸುವ ಭರವಸೆ ನೀಡಿದೆ.

ಬಂಟ್ವಾಳ ಮೂಲದ 25 ವರ್ಷದ ನಾವಿಕ ಕಳೆದ ಮೂರು ವರ್ಷಗಳಿಂದ ಹಡಗು ಕಂಪನಿಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರು ನೀಡಿದ ಮಾಹಿತಿ ಪ್ರಕಾರ, ಭಾನುವಾರ ಮುಂಜಾನೆ ಸುಮಾರು 2 ಗಂಟೆ ವೇಳೆಗೆ ನಡೆದ ಕ್ಷಿಪಣಿ ದಾಳಿಯಿಂದ ಹಡಗಿನ ಎಂಜಿನ್ ಕೊಠಡಿ ಬೆಂಕಿಗೆ ಆಹುತಿಯಾಯಿತು. ಆ ವೇಳೆ ಹಡಗಿನಲ್ಲಿ ಒಟ್ಟು 24 ಸಿಬ್ಬಂದಿ ಇದ್ದರು.

ದಾಳಿಯ ನಂತರ ಇಬ್ಬರು ಸಿಬ್ಬಂದಿ ನಾಪತ್ತೆಯಾಗಿದ್ದು, ಗಾಯಗೊಂಡಿದ್ದ ಮತ್ತೊಬ್ಬ ಸಿಬ್ಬಂದಿಯನ್ನು ಎಂಜಿನ್ ಕೊಠಡಿಯಿಂದ ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು. ನಾಪತ್ತೆಯಾದ ಸಿಬ್ಬಂದಿಗಾಗಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ದಾಳಿ ಸಂಭವಿಸಿದಾಗ ಹಡಗು ಯುನೈಟೆಡ್ ಅರಬ್ ಎಮಿರೇಟ್ಸ್‌ನ ಬಂದರಿನತ್ತ ಸಾಗುತ್ತಿತ್ತು ಎಂದು ಅವರು ತಿಳಿಸಿದ್ದಾರೆ. "ಈ ಪ್ರದೇಶವನ್ನು ಯುದ್ಧ ವಲಯವೆಂದು ಘೋಷಿಸಿದ ಬಳಿಕ ಡ್ರೋನ್ ಅಥವಾ ವೈಮಾನಿಕ ದಾಳಿಯಂತಹ ತುರ್ತು ಪರಿಸ್ಥಿತಿಗಳಿಗೆ ನಾವು ಸಿದ್ಧರಾಗಿದ್ದೆವು. ಆದರೆ ನಮ್ಮ ಹಡಗೇ ಗುರಿಯಾಗುತ್ತದೆ ಎಂದು ಊಹಿಸಿರಲಿಲ್ಲ. ಕ್ಷಿಪಣಿ ದಾಳಿ ನಡೆದಾಗ ಕರಾವಳಿಯಿಂದ ಕೇವಲ ಒಂದು ಕಿಲೋಮೀಟರ್ ದೂರದಲ್ಲಿದ್ದೆವು. ತಕ್ಷಣ ಒಮಾನ್ ನೌಕಾಪಡೆಯನ್ನು ಸಂಪರ್ಕಿಸಿದ್ದೇವೆ. ಅವರು ಕ್ಷಿಪ್ರವಾಗಿ ಬಂದು ನಮ್ಮನ್ನು ರಕ್ಷಿಸಿದರುಎಂದಿದ್ದರೆ.

## ಕಾಲ್ತುಳಿತ: ಅಧಿಕಾರಿಗಳಿಗೆ ರಿಲೀಫ್

ಬೆಂಗಳೂರು: ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಅಮಾನತುಗೊಂಡಿದ್ದ ಮೂವರು ಐಪಿಎಸ್ ಅಧಿಕಾರಿಗಳಿಗೆ ರಾಜ್ಯ ಸರ್ಕಾರ ಮಹತ್ವದ ರಿಲೀಫ್ ನೀಡಿದೆ. ಅಧಿಕಾರಿಗಳ ವಿರುದ್ಧ ಆರಂಭಿಸಲಾಗಿದ್ದ ಇಲಾಖಾ ತನಿಖೆಯನ್ನು ಸರ್ಕಾರ ಅಧಿಕೃತವಾಗಿ ಕೈಬಿಟ್ಟಿದೆ.

ಪ್ರಕರಣದ ಬಳಿಕ ಮೂವರು ಐಪಿಎಸ್ ಅಧಿಕಾರಿಗಳನ್ನು ಅಮಾನತುಗೊಳಿ ಸಲಾಗಿತ್ತು. ನಂತರ ಸರ್ಕಾರ ಅಮಾನತು ಆದೇಶವನ್ನು ಹಿಂಪಡೆದು, ಇಲಾಖಾ ತನಿಖೆಗೆ ಆದೇಶಿಸಿತ್ತು. ತನಿಖೆಯ ಭಾಗವಾಗಿ ಅಧಿಕಾರಿಗಳಿಗೆ ಕಾರಣ ಕೇಳುವ ನೋಟಿಸ್ ಜಾರಿಗೊಳಿಸಿ, ಲಿಖಿತ ಹಾಗೂ ಮೌಖಿಕ ಹೇಳಿಕೆಗಳನ್ನು ಪಡೆದುಕೊಳ್ಳಲಾಗಿತ್ತು. ವಿಚಾರಣೆ ವೇಳೆ ತಮ್ಮ ವಿರುದ್ಧದ ಆರೋಪಗಳನ್ನು ಅಧಿಕಾರಿಗಳು ಸಂಪೂರ್ಣವಾಗಿ ತಳ್ಳಿ ಹಾಕಿದ್ದರು. ಘಟನೆಯಲ್ಲಿ ತಾವು ನೇರ ಹೊಣೆಗಾರರಲ್ಲ ಎಂದು ಸಮರ್ಥಿಸಿಕೊಂಡ ಅವರು, ಕರ್ತವ್ಯ ನಿರ್ವಹಣೆಗೆ ಸಂಬಂಧಿಸಿದ ದಾಖಲೆಗಳು ಹಾಗೂ ವಿವರವಾದ ಸ್ಪಷ್ಟೀಕರಣವನ್ನು ಸರ್ಕಾರಕ್ಕೆ ಸಲ್ಲಿಸಿದ್ದರು. ಪ್ರಕರಣದ ಬಳಿಕ ಮೂವರು ಐಪಿಎಸ್ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿತ್ತು. ನಂತರ ಸರ್ಕಾರ ಅಮಾನತು ಆದೇಶವನ್ನು ಹಿಂಪಡೆದು, ಇಲಾಖಾ ತನಿಖೆಗೆ ಆದೇಶಿಸಿತ್ತು. ಅಧಿಕಾರಿಗಳ ಹೇಳಿಕೆ, ದಾಖಲೆಗಳು ಹಾಗೂ ಇತರ ಮಾಹಿತಿಯನ್ನು ಪರಿಶೀ ಲಿಸಿದ ಬಳಿಕ, ಇಲಾಖಾ ತನಿಖೆಯನ್ನು ಮುಂದುವರಿಸುವ ಅಗತ್ಯವಿಲ್ಲ ಎಂಬ ತೀರ್ಮಾನಕ್ಕೆ ಸರ್ಕಾರ ಬಂದಿದೆ. ಈ ಹಿನ್ನೆಲೆಯಲ್ಲಿ ಮೂವರು ಐಪಿಎಸ್ ಅಧಿಕಾರಿಗಳ ವಿರುದ್ಧದ ಇಲಾಖಾ ತನಿಖೆ ಯನ್ನು ಅಧಿಕೃತವಾಗಿ ಕೈಬಿಡಲಾಗಿದೆ.

# ರೈತರ ಮೇಲೆ ಬಿತ್ತು ಎಫ್‌ಐಆರ್

ರಾಮನಗರ: ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದ ಭೂಸ್ವಾಧೀನ ವಿವಾದ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಜಂಟಿ ಭೂಮಾಪನ (ಜೆಎಂಸಿ) ಕಾರ್ಯಕ್ಕೆ ತಡೆಯೊಡ್ಡಿ, ಕಂದಾಯ ಇಲಾಖೆಯ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿ ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಡಿ 20ಕ್ಕೂ ಹೆಚ್ಚು ರೈತರ ವಿರುದ್ಧ ಬಿಡದಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಈ ಬೆಳವಣಿಗೆ ಯೋಜನೆಗೆ ಹೊಸ ತಿರುವು ನೀಡಿದೆ.

ಮಂಡಲಹಳ್ಳಿ ಗ್ರಾಮದಲ್ಲಿ ಜೆಎಂಸಿ ಸರ್ವೆ ನಡೆಸಲು ಅಧಿಕಾರಿಗಳು ತೆರಳಿದ್ದ ವೇಳೆ ರೈತರು ತೀವ್ರ ವಿರೋಧ ವ್ಯಕ್ತಪಡಿಸಿದರು. ಸರ್ವೆ ಕಾರ್ಯವನ್ನು ತಡೆಯುವ ಜೊತೆಗೆ ಅಧಿಕಾರಿಗಳೊಂದಿಗೆ ವಾಗ್ವಾದ ನಡೆಸಿ, ಕೆಲವರ ಮೇಲೆ ದೈಹಿಕ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದೆ. ಈ ಸಂಬಂಧ ಕಂದಾಯ ಇಲಾಖೆಯ ಅಧಿಕಾರಿಗಳು ನೀಡಿದ ದೂರಿನ ಆಧಾರದ ಮೇಲೆ

> ಘಟನೆಯ ಬಳಿಕ ಬಿಡದಿ ಟೌನ್‌ಶಿಪ್ ಯೋಜನೆ ವ್ಯಾಪ್ತಿಯ ಹಲವು ಗ್ರಾಮಗಳಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ. ಜಿಲ್ಲಾಡಳಿತ ಅಥವಾ ಅಧಿಕಾರಿಗಳು ಮತ್ತೆ ಜೆಎಂಸಿ ಸರ್ವೆ ಆರಂಭಿಸಲು ಮುಂದಾದರೆ ಸ್ಥಳದಲ್ಲೇ ತಡೆದು ತೀವ್ರ ಪ್ರತಿಭಟನೆ ನಡೆಸುವುದಾಗಿ ರೈತರು ಹಾಗೂ ವಿವಿಧ ರೈತ ಸಂಘಟನೆಗಳು ಎಚ್ಚರಿಕೆ ನೀಡಿವೆ. ಹೀಗಾಗಿ ಗ್ರಾಮಗಳಲ್ಲಿ ಕಟ್ಟೆಚ್ಚರದ ವಾತಾವರಣ ನಿರ್ಮಾಣವಾಗಿದ್ದು, ಪರಿಸ್ಥಿತಿಯನ್ನು ಅಧಿಕಾರಿಗಳು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ.

ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

ಘಟನೆಯ ಬಳಿಕ ಬಿಡದಿ ಟೌನ್‌ಶಿಪ್ ಯೋಜನೆ ವ್ಯಾಪ್ತಿಯ ಹಲವು ಗ್ರಾಮಗಳಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ.

ಜಿಲ್ಲಾಡಳಿತ ಅಥವಾ ಅಧಿಕಾರಿಗಳು ಮತ್ತೆ ಜೆಎಂಸಿ ಸರ್ವೆ ಆರಂಭಿಸಲು ಮುಂದಾದರೆ ಸ್ಥಳದಲ್ಲೇ ತಡೆದು ತೀವ್ರ ಪ್ರತಿಭಟನೆ ನಡೆಸುವುದಾಗಿ ರೈತರು ಹಾಗೂ ವಿವಿಧ ರೈತ ಸಂಘಟನೆಗಳು ಎಚ್ಚರಿಕೆ ನೀಡಿವೆ. ಹೀಗಾಗಿ ಗ್ರಾಮಗಳಲ್ಲಿ ಕಟ್ಟೆಚ್ಚರದ ವಾತಾವರಣ ನಿರ್ಮಾಣವಾಗಿದ್ದು, ಪರಿಸ್ಥಿತಿಯನ್ನು ಅಧಿಕಾರಿಗಳು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ.

ಉದ್ವಿಗ್ನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾಡಳಿತವು ಸದ್ಯಕ್ಕೆ ಜೆಎಂಸಿ ಸರ್ವೆ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಸಂಘರ್ಷಕ್ಕೆ ಅವಕಾಶ ನೀಡದ ಉದ್ದೇಶದಿಂದ ಮೊದಲು ಪ್ರತಿಭಟನಾ ನಿರತ ರೈತರೊಂದಿಗೆ ಶಾಂತಿಯುತ ಮಾತುಕತೆ ನಡೆಸಿ, ಅವರ ಅಭಿಪ್ರಾಯಗಳನ್ನು ಆಲಿಸಿದ ಬಳಿಕವೇ ಮುಂದಿನ ಕ್ರಮ ಕೈಗೊಳ್ಳುವ ಬಗ್ಗೆ ಚಿಂತನೆ ನಡೆಸಲಾಗಿದೆ.

ಇನ್ನೊಂದೆಡೆ, ಯೋಜನೆಗೆ ಒಪ್ಪಿಗೆ ಸೂಚಿಸಿರುವ ರೈತರ ಜಮೀನುಗಳಲ್ಲಿ ಮಾತ್ರ ಜೆಎಂಸಿ ಸರ್ವೆ ಮುಂದುವರಿಸಲು ಜಿಲ್ಲಾಡಳಿತ ನಿರ್ಧರಿಸಿದೆ. ಈ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಹೆಚ್ಚುವರಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದ್ದು, ಬಿಗಿ ಭದ್ರತೆಯ ನಡುವೆ ಸರ್ವೆ ಕಾರ್ಯ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

ಬಿಡದಿ ಟೌನ್‌ಶಿಪ್ ಯೋಜನೆ ಆರಂಭವಾದ ದಿನದಿಂದಲೇ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ರೈತರು ತೀವ್ರ ವಿರೋಧ ವ್ಯಕ್ತಪಡಿಸುತ್ತಿದ್ದು, ಸರ್ಕಾರ ಮತ್ತು ರೈತರ ನಡುವಿನ ಭಿನ್ನಾಭಿಪ್ರಾಯ ಇನ್ನೂ ಬಗೆಹರಿದಿಲ್ಲ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
15/07/2026

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ತಿಪಟೂರಿನಿಂದ ಹೊಸ ಮೆಮು ರೈಲು ಸೇವೆಗೆ ಚಾಲನೆ

ತಿಪಟೂರು

ಕರ್ನಾಟಕದಲ್ಲಿ ಪ್ರಾದೇಶಿಕ ರೈಲು ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರು ತಿಪಟೂರು ರೈಲು ನಿಲ್ದಾಣದಲ್ಲಿ ಹೊಸ ಮೆಮು ಉದ್ಘಾಟನಾ ವಿಶೇಷ ರೈಲಿಗೆ ಸೋಮವಾರ ಹಸಿರು ನಿಶಾನೆ ತೋರಿದರು.

ನೈರುತ್ಯ ರೈಲ್ವೆಯ ಮೈಸೂರು ವಿಭಾಗ ಪರಿಚಯಿಸಿರುವ ಈ ಮೆಮು ಸೇವೆಯು ದೈನಂದಿನ ಪ್ರಯಾಣಿಕರು, ವಿದ್ಯಾರ್ಥಿಗಳು, ಉದ್ಯೋಗಿಗಳು, ವ್ಯಾಪಾರಿಗಳು ಹಾಗೂ ಸಾರ್ವಜನಿಕರಿಗೆ ವೇಗವಾದ, ಸುರಕ್ಷಿತ ಮತ್ತು ಅನುಕೂಲಕರ ಸಂಚಾರ ವ್ಯವಸ್ಥೆ ಒದಗಿಸುವ ಉದ್ದೇಶ ಹೊಂದಿದೆ.

ರೈಲು ಸಂಖ್ಯೆ 66505 ಯಲಹಂಕ–ಅರಸೀಕೆರೆ ಮೆಮು ರೈಲು ಜುಲೈ 14ರಿಂದ ಪ್ರತಿದಿನ ಸಂಚರಿಸಲಿದ್ದು, ಯಲಹಂಕದಿಂದ ಬೆಳಗ್ಗೆ 6.45ಕ್ಕೆ ಹೊರಟು 11 ಗಂಟೆಗೆ ಅರಸೀಕೆರೆ ತಲುಪಲಿದೆ.




ಹಿಂದಿರುಗುವ ದಿಕ್ಕಿನಲ್ಲಿ 66506 ಅರಸೀಕೆರೆ–ಯಲಹಂಕ ಮೆಮು ಮಧ್ಯಾಹ್ನ 2.10ಕ್ಕೆ ಹೊರಟು ಸಂಜೆ 7.15ಕ್ಕೆ ಯಲಹಂಕ ತಲುಪಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ವಿ. ಸೋಮಣ್ಣ, ಭಾರತ ಸರ್ಕಾರ ರೈಲ್ವೆ ಮೂಲಸೌಕರ್ಯವನ್ನು ಆಧುನೀಕರಿಸುವ ಜೊತೆಗೆ ಪ್ರಯಾಣಿಕರ ಸೌಲಭ್ಯಗಳನ್ನು ಹೆಚ್ಚಿಸಲು ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದು ಹೇಳಿದರು. ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ರೈಲು ನಿಲ್ದಾಣಗಳ ಅಭಿವೃದ್ಧಿ ಹಾಗೂ ಹೊಸ ರೈಲು ಸೇವೆಗಳ ಆರಂಭದಿಂದ ಪ್ರಾದೇಶಿಕ ಅಭಿವೃದ್ಧಿಗೆ ಉತ್ತೇಜನ ದೊರೆಯಲಿದ್ದು, ಸಾರ್ವಜನಿಕರಿಗೆ ಉತ್ತಮ ಪ್ರಯಾಣ ಅನುಭವ ಸಿಗಲಿದೆ ಎಂದು ತಿಳಿಸಿದರು.

ತಿಪಟೂರು ರೈಲು ನಿಲ್ದಾಣವನ್ನು ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ರೂ.23.37 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ಯೋಜನೆಯಡಿ ನಿಲ್ದಾಣ ಕಟ್ಟಡ ವಿಸ್ತರಣೆ, ಹೊಸ ಪ್ಲಾಟ್‌ಫಾರ್ಮ್ ಶೆಲ್ಟರ್‌ಗಳ ನಿರ್ಮಾಣ, 12 ಮೀಟರ್ ಅಗಲದ ಪಾದಚಾರಿ ಮೇಲ್ಸೇತುವೆ, ಮೂರು ಲಿಫ್ಟ್‌ಗಳು, ಎರಡು ಎಸ್ಕಲೇಟರ್‌ಗಳು, ಆಧುನಿಕ ನಿರೀಕ್ಷಣಾ ಕೊಠಡಿಗಳು, ಶೌಚಾಲಯಗಳ ನವೀಕರಣ, ವಾಹನ ನಿಲುಗಡೆ ವ್ಯವಸ್ಥೆ, ಸುಂದರೀಕರಣ, ಎಲ್‌ಇಡಿ ಬೆಳಕು ಹಾಗೂ ಪ್ರಯಾಣಿಕರ ಮಾಹಿತಿ ವ್ಯವಸ್ಥೆ ಅಭಿವೃದ್ಧಿಪಡಿಸಲಾಗುತ್ತಿದೆ. ಕೆಲವು ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದವು ಪ್ರಗತಿಯಲ್ಲಿವೆ.

ಇದೇ ವೇಳೆ ತಿಪಟೂರು ಪ್ರದೇಶದಲ್ಲಿ ರಸ್ತೆ ಮತ್ತು ರೈಲು ಸಂಪರ್ಕವನ್ನು ಸುಧಾರಿಸಲು ಎರಡು ಪ್ರಮುಖ ರಸ್ತೆ ಮೇಲ್ಸೇತುವೆ ಕಾಮಗಾರಿಗಳೂ ನಡೆಯುತ್ತಿವೆ. ಶಾರದಾನಗರ ಹಾಲ್ಟ್ ಸಮೀಪದ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ 86ರ ಬದಲಿಗೆ –89.32 ಕೋಟಿ ವೆಚ್ಚದಲ್ಲಿ ರಸ್ತೆ ಮೇಲ್ಸೇತುವೆ ನಿರ್ಮಾಣವಾಗುತ್ತಿದ್ದು, ತಿಪಟೂರು–ಚಿಕ್ಕನಾಯ ಕನಹಳ್ಳಿ–ಹಾಸನ ಸಂಪರ್ಕಕ್ಕೆ ಅನುಕೂಲ ವಾಗಲಿದೆ ಎಂದರು.

# ಬಿ ಹೆಚ್ ಎಸ್ ಹೈಕ್ಳು ಟ್ರಸ್ಟ್ ವತಿಯಿಂದ ವೈದ್ಯರ ದಿನಾಚರಣೆ ಆಚರಣೆ




ಬೆಂಗಳೂರು: ಬಿ ಹೆಚ್ ಎಸ್ ಹೈಕ್ಳು ಟ್ರಸ್ಟ್ ವತಿಯಿಂದ ವೈದ್ಯರ ದಿನಾಚರಣೆ ಅಂಗವಾಗಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಬಿ ಹೆಚ್ ಎಸ್ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿ ಇಂದು ವೈದ್ಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸುತ್ತಿರುವ ವೈದ್ಯರನ್ನು ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ 92 ವರ್ಷದ ಜ್ಞಾನವೃದ್ಧರು ಹಾಗೂ ಬಿ ಹೆಚ್ ಎಸ್ ಶಾಲೆಯ ನಿವೃತ್ತ ಶಿಕ್ಷಕರಾದ ಬಿ.ಎಸ್. ರಾಮನಾಥ್ ಅವರು, "ತಂದೆ, ತಾಯಿ, ಅತಿಥಿ ನಂತರದ ನಾಲ್ಕನೆಯ ಆಧಾರ ಸ್ತಂಭವೇ ವೈದ್ಯರು. ವೈದ್ಯರಿಲ್ಲದ ಸಮಾಜವನ್ನು ಕಾಣುವುದು ದುರ್ಲಭ" ಎಂದು ಅಭಿಪ್ರಾಯಪಟ್ಟರು.

ವೈದ್ಯರು ಸಮಾಜದ ಆರೋಗ್ಯ ರಕ್ಷಕರಾಗಿದ್ದು, ಅವರ ಸೇವೆ ಮಾನವಕುಲಕ್ಕೆ ಅಮೂಲ್ಯ ಕೊಡುಗೆಯಾಗಿದೆ ಎಂದು ಅವರು ತಿಳಿಸಿದರು. ಬಿ ಹೆಚ್ ಎಸ್ ಶಾಲೆಯ ಹಳೆಯ ವಿದ್ಯಾರ್ಥಿಗಳಾದ ವೈದ್ಯರು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಶಾಲೆಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷರಾದ ರಾ.ಸು. ವೆಂಕಟೇಶ್, ಕಾರ್ಯದರ್ಶಿ ಜೆ.ಹೆಚ್. ರುದ್ರೇಶ್, ಖಜಾಂಚಿ ಎಂ.ಎನ್. ಶ್ರೀವತ್ಸ ಹಾಗೂ ಸದಸ್ಯರಾದ ಪ್ರಕಾಶ್ ಮತ್ತು ಕುಮಾರಸ್ವಾಮಿ ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಆರ್ಯವೈಶ್ಯ ಸಮುದಾಯ ಸಂಘಟಿತರಾಗಬೇಕು: ಕೆ.ವಿ.ರಾಮಪ್ರಸಾದ್

ಬಳ್ಳಾರಿ

ಆರ್ಯವೈಶ್ಯ ಸಮುದಾಯದವರು ಸಾಮಾನ್ಯವಾಗಿ ಕುಬೇರನ ವಂಶಸ್ಥರು. ಅವರಲ್ಲಿ ಹೇರಳ ಹಣ ಇರುತ್ತದೆ ಎಂದೇ ಎಲ್ಲರೂ ಅಂದುಕೊಂಡಿದ್ದಾರೆ. ಈ ಸಮುದಾಯದಲ್ಲಿಯೂ ಕೂಡ ಬಡವರು ಮತ್ತು ಕಡು ಬಡವರಿದ್ದಾರೆ ಎನ್ನುವುದು ಎಷ್ಟೋ ಜನರಿಗೆ ಗೊತ್ತಿಲ್ಲ. ಅಂಥವರಿಗಾಗಿಯೇ ಆರ್ಯವೈಶ್ಯ ಅಭಿವೃದ್ಧಿ ನಿಗಮವು ಆರ್ಥಿಕ ಅನುದಾನ ಒದಗಿಸಲು ಬದ್ಧವಾಗಿದ್ದು ಸಮುದಾಯದ ಜನರು ಹೆಚ್ಚು ಸಂಘಟಿತರಾಗಬೇಕು, ಸರ್ಕಾರದ ಯೋಜನೆಗಳ ಸದುಪಯೋಗಪಡಿಸಿಕೆ ೂಳ್ಳಬೇಕೆಂದು ಆರ್ಯವೈಶ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಕೆ.ವಿ.ರಾಮಪ್ರಸಾದ್ ಅವರು ತಿಳಿಸಿದರು.



ಜಿಲ್ಲೆಯ ಕಂಪ್ಲಿ ತಾಲೂಕಿನ ಎಮ್ಮಿಗನೂರು ಗ್ರಾಮದ ಕುರುಗೋಡು ರಸ್ತೆಯಲ್ಲಿರುವ ಶ್ರೀ ವಾಸವಿ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾ (ರಿ), ಬೆಂಗಳೂರು ವಿಜಯನಗರ ವಿಭಾಗೀಯ 4ನೇ ಸಮ್ಮೇಳನ ದೇವಸ್ಥಾನದ ದಶಮಾನೋತ್ಸವ ಕಾರ್ಯಕ್ರಮ ಮತ್ತು ಬೆನ್ನೂರು ವೆಂಕೋಬಣ್ಣ ಶ್ರೇಷ್ಠಿ ಜನ್ಮ ಶತಾಬ್ಧ ಭವನ ಉದ್ಘಾಟನೆಯ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಸಾಮೂಹಿಕ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸಮುದಾಯದ ಬಡವರು ಆರ್ಥಿಕವಾಗಿ ಸಬಲೀಕರಣಗೊಳ್ಳಬೇಕು. ರಾಜ್ಯ ಸರ್ಕಾರ ಸಮುದಾಯದ ಅಭಿವೃದ್ಧಿಗೆ ರೂ.10 ಕೋಟಿ ಅನುದಾನ ಒದಗಿಸಿದ್ದು, ಇನ್ನೂ ಹೆಚ್ಚುವರಿಯಾಗಿ ರೂ.5 ಕೋಟಿ ನೀಡುವಂತೆ ಮನವಿ ಮಾಡಲಾಗಿದೆ. ನಮ್ಮ ಮನವಿಗೆ ನಿಕಟಪೂರ್ವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಹಾಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಸಹಮತಿಸಿದ್ದಾರೆ. ಅವರಿಗೆ ಸಮಾಜದ ಪರವಾಗಿ ಅಭಿನಂದಿಸುತ್ತೇನೆ ಎಂದರು.



ಸರ್ಕಾರದ ಯೋಜನೆಗಳ ಕುರಿತು ಸಮಾರಂಭದಲ್ಲಿ ಸಮುದಾಯದ ಜನರಿಗೆ ಜಾಗೃತಿ ಮೂಡಿಸಿದ ಅವರು, ಬಡವರು ತಮ್ಮ ಆರ್ಥಿಕ ಪ್ರಗತಿಗೆ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಕೇಂದ್ರ ಕಚೇರಿಗೆ ಭೇಟಿ ನೀಡಬಹುದು. ಯಾವುದೇ ಸಮಸ್ಯೆ ಇದ್ದರೂ ಸಮುದಾಯದ ಪರವಾಗಿ ಯಾವುದೇ ಸಮಯದಲ್ಲಿ ನಾನು ನಿಲ್ಲುತ್ತೇನೆ ಎಂದು ವಾಗ್ದಾನ ನೀಡಿದರು. ಇನ್ನಷ್ಟು ಅನುದಾನ ನೀಡಲು ಸರ್ಕಾರಕ್ಕೆ ಸಹಮತ ನೀಡಿದ ಸಚಿವರಾದ ಕೃಷ್ಣ ಬೈರೇಗೌಡ, ಕೆಪಿಸಿಸಿಯ ಡಿ.ಸಿ.ಚಂದ್ರಶೇಖರ ಸೇರಿದಂತೆ ಹಲವು ಗಣ್ಯರಿಗೆ ಅಭಿನಂದನೆ ಸಲ್ಲುತ್ತವೆ ಎಂದರು.

ಬೆಂಗಳೂರಿನ ವಾಸವಿ ಪೀಠದ ಸಚ್ಚಿದಾನಂದ ಸರಸ್ವತಿ ಸ್ವಾಮಿಜೀಗಳ ದಿವ್ಯ ಸಾನಿಧ್ಯದಲ್ಲಿ ಜರುಗಿದ ಈ ಸಮಾರಂಭದಲ್ಲಿ ಎಚ್.ವೀರಾಪುರದ ಜ್ಞಾನಜ್ಯೋತಿ ಶಿವಲಿಂಗ ಮಂದಿರದ ಜಡೇಶ ತಾತನವರು. ಸಂಘದ ರಾಜ್ಯಾಧ್ಯಕ್ಷ ಭೀಮರಾಜ್ ಗಂಗಾವತಿ, ಮುಖ್ಯ ಅತಿಥಿಗಳಾದ ಕೈಗಾರಿಕೆ ಉದ್ಯಮಿ ಬೆನ್ನೂರು ಜಡೇಮೂರ್ತಿ, ಎಂಎಲ್ಸಿ ಡಿ.ಎಸ್.ಅರುಣ್ ಕುಮಾರ್ ಇನ್ನಿತರರು ಪಾಲ್ಗೊಂಡಿದ್ದು ರಾಜ್ಯ ಕೋಶ ಅಧ್ಯಕ್ಷ ಕರ್ನಾಟಕ ಆರ್ಯ ವೈಶ್ಯ ಯುವಜನ ಮಹಾಸಭಾ ಬೆಂಗಳೂರು ಇವರು ಪ್ರತಿಜ್ಞಾ ವಿಧಿ ನಡೆಸಿಕೊಟ್ಟರು.

ಈ ದಶಮಾನೋತ್ಸವ ಕಾರ್ಯಕ್ರಮ ಸಮಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಕಚೇರಿ ಸಹಯೋಗದಲ್ಲಿ ವಿವಿಧ ತಂಡಗಳಿಂದ ಜಾನಪದ ಕಲಾ ಮೇಳ ನೋಡುಗರ ಮನ ಗಮನ ಸೆಳೆಯಿತು. ಸ್ಥಳೀಯ ಅಧ್ಯಕ್ಷರು. ಆಂಧ್ರ, ತೆಲಂಗಾಣ ಸೇರಿ ರಾಜ್ಯದ ನಾನಾ ಜಿಲ್ಲೆಯ ಆರ್ಯವೈಶ್ಯ ಸಮಾಜದ ಪದಾಧಿಕಾರಿಗಳು, ಯುವಕರು, ಮಹಿಳೆಯರು ಸ್ಥಳೀಯ ವಾಸವಿ ಸೇವಾ ಟ್ರಸ್ಟ್, ಯುವಜನ ಮಹಿಳಾ ಮಂಡಳಿಯು ಕಂಪ್ಲಿ, ಕಾರಟಗಿ, ಹೋಸಪೇಟೆ, ಹನುವಾಳ, ಬಳ್ಳಾರಿ ಇತರೆ ನಗರ ಪಟ್ಟಣ, ಹೋಬಳಿ ಸೇರಿದಂತೆ ಸಂಘದ ಪದಾಧಿಕಾರಿಗಳು ಒಳಗೊಂಡಂತೆ ಮೂರು ಸಾವಿರಕ್ಕೂ ಅಧಿಕ ಸಂಖ್ಯೆಯ ಆರ್ಯವೈಶ್ಯ ಸಮುದಾಯದವರು ಭಾಗವಹಿಸಿದ್ದರು.

## ಮಾಲೂರಿನಲ್ಲಿ ಸಿಎಂ ಬೃಹತ್ ಕಾರ್ಯಕ್ರಮ: 30 ಸಾವಿರ

# ಜನರ ಭಾಗವಹಿಸುವಿಕೆ ನಿರೀಕ್ಷೆ

ಕೋಲಾರ

ಜುಲೈ 18ರಂದು ಮಾಲೂರಿನಲ್ಲಿ ನಡೆಯಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬೃಹತ್ ಅಭಿವೃದ್ಧಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಹಾಗೂ ಅಚ್ಚುಕಟ್ಟಾಗಿ ಆಯೋಜಿಸಲು ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ. ಆರ್.ರವಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಯಕ್ರಮ ನಡೆಯಲಿರುವ ಚೊಕ್ಕಂಡಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದ ಬಳಿಕ ಪೂರ್ವಭಾವಿ ಸಭೆ ನಡೆಸಿದ ಅವರು, ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ಫಲಾನುಭವಿಗಳಿಗೆ ಸೌಲಭ್ಯ ವಿತರಣೆಯ ಕಾರ್ಯಕ್ರಮವನ್ನು ಯಾವುದೇ ಲೋಪವಿಲ್ಲದೆ ನಿರ್ವಹಿ ಸುವಂತೆ ನಿರ್ದೇಶನ ನೀಡಿದರು.

ಮುಖ್ಯಮಂತ್ರಿಗಳಿಗೆ ಶಿಷ್ಟಾಚಾರದಂತೆ ಹಾರ, ಶಾಲು, ಮೈಸೂರು ಪೇಟ ಹಾಗೂ ಡ್ರೈಫ್ರೂಟ್ಸ್ ನೀಡಿ ಗೌರವ ಸಲ್ಲಿಸುವ ವ್ಯವಸ್ಥೆ ಮಾಡಬೇಕು. ಜೊತೆಗೆ ಡೊಳ್ಳು ಕುಣಿತ ಸೇರಿದಂತೆ 10 ಜಾನಪದ ಕಲಾತಂಡಗಳ ಮೂಲಕ ಭವ್ಯ ಸ್ವಾಗತ ಕೋರಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸೂಚಿಸಿದರು.

ಸುಮಾರು 30 ಸಾವಿರಕ್ಕೂ ಅಧಿಕ ಸಾರ್ವಜನಿಕರು ಮತ್ತು ಫಲಾನುಭವಿಗಳು ಭಾಗವಹಿಸುವ ನಿರೀಕ್ಷೆ ಇರುವುದರಿಂದ ಸಮರ್ಪಕ ಆಸನ ವ್ಯವಸ್ಥೆ ಕಲ್ಪಿಸಲು ಸೂಚಿಸಲಾಯಿತು. ಜಿಲ್ಲೆಯ ವಿವಿಧ ಭಾಗಗಳಿಂದ ಜನರನ್ನು ಕರೆತರಲು 600 ಕೆಎಸ್‌ಆರ್‌ಟಿಸಿ ಬಸ್‌ಗಳನ್ನು (470 ಸ್ಥಳೀಯ ಹಾಗೂ 130 ಹೆಚ್ಚುವರಿ) ನಿಯೋಜಿಸಿ, ಜಿಯೋ ಲೊಕೇಶನ್ ಆಧಾರಿತ ಮಾರ್ಗ ನಕ್ಷೆ ಸಿದ್ಧಪಡಿಸಿ ಬೆಳಗ್ಗೆ 6 ಗಂಟೆಯಿಂದಲೇ ಸಾರಿಗೆ ವ್ಯವಸ್ಥೆ ಆರಂಭಿಸುವಂತೆ ನಿರ್ದೇಶಿಸಿದರು.

ಸಾರ್ವಜನಿಕರಿಗೆ ಗುಣಮಟ್ಟದ ಸಸ್ಯಾಹಾರಿ ಪಲಾವ್, ಮಜ್ಜಿಗೆ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಆಹಾರ ವಿತರಣಾ ಕೌಂಟರ್‌ಗಳನ್ನು ತೆರೆಯಬೇಕು ಹಾಗೂ ಆಹಾರದ ಗುಣಮಟ್ಟವನ್ನು ಅಧಿಕಾರಿಗಳಿಂದ ಪರಿಶೀಲಿಸಿದ ಬಳಿಕವೇ ವಿತರಿಸಬೇಕು ಎಂದು ಸೂಚಿಸಿದರು. ವಿಐಪಿಗಳು ಹಾಗೂ ಸುಮಾರು 200 ಪತ್ರಕರ್ತರಿಗೆ ಪ್ರತ್ಯೇಕ ಭೋಜನ ವ್ಯವಸ್ಥೆಯನ್ನೂ ಕಲ್ಪಿಸಲು ತಿಳಿಸಿದರು.

ಕಾರ್ಯಕ್ರಮದ ಭದ್ರತೆಗಾಗಿ ಪೊಲೀಸ್ ಇಲಾಖೆ ಬ್ಯಾರಿಕೇಡ್, ಸುಸಜ್ಜಿತ ವಾಹನ ನಿಲುಗಡೆ ಹಾಗೂ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ತುರ್ತು ವೈದ್ಯಕೀಯ ಸೇವೆಗಾಗಿ ಆಂಬುಲೆನ್ಸ್, ಐಸಿಯು ಸೌಲಭ್ಯವಿರುವ ತಾತ್ಕಾಲಿಕ ಚಿಕಿತ್ಸಾ ಕೇಂದ್ರಗಳು ಹಾಗೂ ಅಗ್ನಿಶಾಮಕ ವಾಹನಗಳನ್ನು ಸನ್ನದ್ಧವಾಗಿರಿಸಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಚನೆ ನೀಡಿದರು. ಸರ್ಕಾರದ ವಿವಿಧ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲು ಇಲಾಖಾವಾರು ಪ್ರದರ್ಶನ ಮಳಿಗೆಗಳನ್ನು ಸ್ಥಾಪಿಸುವಂತೆಯೂ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು. "ಮುಖ್ಯಮಂತ್ರಿಗಳ ಜಿಲ್ಲೆ ಭೇಟಿ ಮಹತ್ವದ ಕಾರ್ಯಕ್ರಮವಾಗಿದ್ದು, ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು" ಎಂದು ಡಾ. ಎಂ.ಆರ್. ರವಿ ಹೇಳಿದರು. ಸಭೆಯಲ್ಲಿ ಉಪ ವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಮಮೂರ್ತಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಟಿ.ಕೆ. ರಮೇಶ್, ಆಹಾರ ಸರಬರಾಜು ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಇದ್ದರು.

## ರಾಜ್ಯದ ದೇವಾಲಯಗಳಿಗೆ

# ಹೊಸ ಮಾರ್ಗ ಸೂಚಿ ಪ್ರಕಟ

ಬೆಂಗಳೂರು

ಅಯೋಧ್ಯೆ ರಾಮ ಮಂದಿರದ ಹುಂಡಿ ಕಳ್ಳತನ ಪ್ರಕರಣದ ಬೆನ್ನಲ್ಲೇ ರಾಜ್ಯ ಸರ್ಕಾರ ಮುಜರಾಯಿ ಇಲಾಖೆಯ ವ್ಯಾಪ್ತಿಯ ದೇವಾಲಯಗಳ ಹುಂಡಿ ಹಣ ಮತ್ತು ದೇಣಿಗೆಗಳ ಸುರಕ್ಷತೆಗೆ ಮಹತ್ವದ ಕ್ರಮ ಕೈಗೊಂಡಿದೆ.

ದೇವಾಲಯಗಳಲ್ಲಿ ಭದ್ರತೆ ಹಾಗೂ ಪಾರದರ್ಶಕತೆಯನ್ನು ಹೆಚ್ಚಿಸುವ ಉದ್ದೇಶದಿಂದ ಧಾರ್ಮಿಕ ದತ್ತಿ ಇಲಾಖೆ ಸಮಗ್ರ ಕಾರ್ಯವಿಧಾನ (ಎಸ್‌ಒಪಿ) ಜಾರಿಗೆ ತಂದಿದ್ದು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಕಂದಾಯ ಅಧಿಕಾರಿಗಳು, ಮುಜರಾಯಿ ಅಧಿಕಾರಿಗಳು ಹಾಗೂ ದೇವಾಲಯ ಆಡಳಿತ ಮಂಡಳಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ದೇವಾಲಯಗಳ ಹುಂಡಿಗಳಲ್ಲಿ ಕಳ್ಳತನ, ಹಣದ ದುರುಪಯೋಗ ಮತ್ತು ಭದ್ರತಾ ಲೋಪಗಳ ಬಗ್ಗೆ ವಿವಿಧ ರಾಜ್ಯಗಳಲ್ಲಿ ವರದಿಯಾಗುತ್ತಿರುವ ಘಟನೆಗಳನ್ನು ಗಮನದಲ್ಲಿಟ್ಟುಕೊಂಡು ಈ ಕ್ರಮ ಕೈಗೊಳ್ಳಲಾಗಿದೆ.

ಹೊಸ ಮಾರ್ಗಸೂಚಿಯ ಪ್ರಕಾರ ದೇವಾಲಯಗಳಲ್ಲಿ ಅಳವಡಿಸಲಾಗುವ ಹುಂಡಿಗಳು ಸಾರ್ವಜನಿಕರಿಗೆ ಸ್ಪಷ್ಟವಾಗಿ ಕಾಣುವ ಸ್ಥಳದಲ್ಲಿರಬೇಕು ಹಾಗೂ ನಾಲ್ಕು ದಿಕ್ಕುಗಳಿಂದ ನಿಗಾ ವಹಿಸಲು ಸಿಸಿಟಿವಿ ವೆಬ್ ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಬೇಕು.

ಈ ಕ್ಯಾಮರಾಗಳ ದೃಶ್ಯಗಳನ್ನು ಸರ್ವರ್‌ನಲ್ಲಿ ಸಂಗ್ರಹಿಸುವುದರ ಜೊತೆಗೆ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ ಕಚೇರಿಗಳ ಮುಜರಾಯಿ ವಿಭಾಗ ಮತ್ತು ಧಾರ್ಮಿಕ ದತ್ತಿ ಇಲಾಖೆಯ ಕೇಂದ್ರ ಕಚೇರಿಯಿಂದ ಮೇಲ್ವಿಚಾರಣೆ ನಡೆಸಲಾಗುತ್ತದೆ.

ದೇವಾಲಯಗಳ ಸಿಸಿಟಿವಿ ವ್ಯವಸ್ಥೆಯನ್ನು ಸ್ಥಳೀಯ ಪೊಲೀಸ್ ಠಾಣೆಗಳು ಮತ್ತು ಪೊಲೀಸ್ ನಿಯಂತ್ರಣ ಕೊಠಡಿಗಳೊಂದಿಗೆ ಸಂಪರ್ಕಗೊಳಿಸಿ ನೈಜ ಸಮಯದ ನಿಗಾವ್ಯವಸ್ಥೆ ಕಲ್ಪಿಸಲು ಸೂಚಿಸಲಾಗಿದೆ.

ಭಕ್ತರು ನಗದು ದೇಣಿಗೆಯ ಬದಲಿಗೆ ಡಿಜಿಟಲ್ ಪಾವತಿಗೆ ಉತ್ತೇಜನ ನೀಡುವ ಸಲುವಾಗಿ ದೇವಾಲಯಗಳಲ್ಲಿ ಕ್ಯೂಆರ್ ಕೋಡ್, ಯುಪಿಐ, ಭೀಮ್ ಸೇರಿದಂತೆ ವಿವಿಧ ಡಿಜಿಟಲ್ ಪಾವತಿ ವ್ಯವಸ್ಥೆಗಳನ್ನು ಅಳವಡಿಸಲು ಆದೇಶಿಸಲಾಗಿದೆ.

# ಎಂಎಲ್‌ಸಿ ನಾಮನಿರ್ದೇಶನ ಕಸರತ್ತು ಆರಂಭ: ಕೆ.ವಿ.ಪ್ರಭಾಕರ್, ರಮೇಶ್‌ಬಾಬು ಹೆಸರು ಮುಂಚೂಣಿ

ಬೆಂಗಳೂರು

ಇದೇ ಜುಲೈ 21ಕ್ಕೆ ಮೇಲ್ಮನೆಯ ನಾಮ ನಿರ್ದೇಶಿತ ಐವರು ಸದಸ್ಯರ ಅವಧಿ ಪೂರ್ಣಗೊಳ್ಳಲಿರುವ ಹಿನ್ನೆಲೆಯಲ್ಲಿ ಮತ್ತೆ ಐವರನ್ನು ಅದೇ ಸ್ಥಾನಕ್ಕೆ ಭರ್ತಿ ಮಾಡಲು ಸರ್ಕಾರದ ಮಟ್ಟದಲ್ಲಿ ಕಸರತ್ತುಗಳು ನಡೆಯುತ್ತಿವೆ. ಈ ಐವರಲ್ಲಿ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರರಾಗಿದ್ದ ಕೆ.ವಿ.ಪ್ರಭಾಕರ್ ಅವರ ಹೆಸರು ಬಲವಾಗಿ ಕೇಳಿ ಬರುತ್ತಿದೆ.

ಕೆ.ವಿ.ಪ್ರಭಾಕರ್ ಕೋಲಾರ ಜಿಲ್ಲೆಯವರಾಗಿದ್ದು ಬಡತನದಲ್ಲಿ ವಿದ್ಯಾಭ್ಯಾಸ ಪೂರೈಸಿ, ಪತ್ರಿಕೆಗಳನ್ನು ಮನೆ ಮನೆಗೆ ಹಂಚುವ ಮೂಲಕ ಜ್ಞಾನ ದಾಹ ಹಿಂಗಿಸುವ ಕೆಲಸ ಮಾಡುತ್ತಿದ್ದರು. ಸರ್ಕಾರಿ ಶಾಲೆಗಳಲ್ಲಿಯೇ ತಮ್ಮ ಅಧ್ಯಯನ ಪೂರೈಸಿ, ಕೋಲಾರವಾಣಿ ಪ್ರಾದೇಶಿಕ ಪತ್ರಿಕೆ ಸೇರಿದಂತೆ ರಾಜ್ಯ ಮಟ್ಟದ ವಿವಿಧ ಪತ್ರಿಕೆಗಳಲ್ಲಿ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಬೆಂಗಳೂರಿನ ಹೋಟೆಲ್ ನಲ್ಲಿ ನಡೆಯುತ್ತಿರುವ ಕರ್ಮಕಾಂಡಗಳ ಕುರಿತು ಬೆಳಕು ಚೆಲ್ಲುವ ಮೂಲಕ ಜನರ ಆರೋಗ್ಯದ ಕುರಿತು ಜಾಗೃತಿ ಮೂಡಿಸಿದ್ದ ಕೆ.ವಿ.ಪ್ರಭಾಕರ್ ಅವರು, ಉತ್ತಮ ಬರಹಗಾರರು ಕೂಡ. ಅವರ ಅನೇಕ ಬರಹಗಳು ಸರ್ಕಾರದ ಕಣ್ಣು ತೆರೆಸಿದ್ದವು. ಅವರಲ್ಲಿನ ಸಾಮಾಜಿಕ ಕಳಕಳಿ, ಪರಿಸರ ಪ್ರಜ್ಞೆ, ಜೀವನ ಪ್ರೀತಿ ಮತ್ತು ಜನರೊಂದಿಗೆ ಅವರು ನಡೆದುಕೊಳ್ಳುವ ರೀತಿಯನ್ನು ಗಮನಿಸಿ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಮಾಧ್ಯಮ ಸಲಹೆಗಾರರನ್ನಾಗಿ ನಿಯೋಜಿಸಿಕೊಂಡಿದ್ದರು.

ಕೆ.ವಿ.ಪ್ರಭಾಕರ್ ಅವರು ನಾಡಿನ ಅಸಂಖ್ಯಾತ ಪತ್ರಕರ್ತರ ಬದುಕು, ಬವಣೆಗಳನ್ನು ಹತ್ತಿರದಿಂದ ಬಲ್ಲವರಾಗಿದ್ದರು. ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯ, ಮಾಸಾಶನ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಪತ್ರಕರ್ತರ ತಳಮಳಗಳನ್ನು ಚೆನ್ನಾಗಿ ಅರಿತಿದ್ದ ಅವರು, ಪತ್ರಿಕೆ ಹಂಚಿಕೆದಾರರಿಗೆ ರಾಜ್ಯೋತ್ಸವ ಪ್ರಶಸ್ತಿ ಒದಗಿಸಿಕೊಡುವ ಮೂಲಕ ಗೌರವ ನೀಡಿದ್ದಾರೆ. ತಮ್ಮ ಅವಧಿಯಲ್ಲಿ ರಾಜ್ಯದಾದ್ಯಂತ ಮುಖ್ಯಮಂತ್ರಿಗಳ ಜೊತೆಗೆ ಸಂಚರಿಸಿದ್ದಲ್ಲದೆ, ಪತ್ರಕರ್ತರ ಸಮ್ಮೇಳನ ನಡೆಸಲು ಪ್ರೋತ್ಸಾಹ ನೀಡಿದ್ದರು. ಸರ್ಕಾರದ ಎಲ್ಲ ಇಲಾಖೆಗಳ ಅರಿವು ಹೊಂದಿರುವ ಕೆ.ವಿ.ಪ್ರಭಾಕರ್ ಅವರು ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರಿಗೆ ಒಂದು ರೀತಿ ಬೆನ್ನೆಲುಬಾಗಿದ್ದರು. ಅವರ ಜನಪರ ಕಾಳಜಿ, ಅಭಿವೃದ್ಧಿಪರ ಚಿಂತನೆ, ಕನ್ನಡ ಭಾಷೆಯ ಸೊಡರಿನಲ್ಲಿ ಅವರ ವಿವೇಕಯುತವಾದ ವಿಚಾರಗಳು ಗಮನ ಸೆಳೆಯುತ್ತಿವೆ. ಈ ಕಾರಣಕ್ಕಾಗಿ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿಸಲು ಪಕ್ಷದಲ್ಲಿ ಎಲ್ಲರ ಸಹಮತ ಇದೆ ಎಂದು ಹೇಳಲಾಗುತ್ತಿದೆ.





ಇನ್ನು ಇವರೊಂದಿಗೆ ರಮೇಶ್‌ಬಾಬು, ಹೆಚ್.ಆಂಜನೇಯ, ವಿ.ಎಸ್.ಉಗ್ರಪ್ಪ ಅವರ ಹೆಸರುಗಳೂ ಕೇಳಿ ಬರುತ್ತಿವೆ. ಕರ್ನಾಟಕ ವಿಧಾನ ಪರಿಷತ್‌ನ ಐವರು ನಾಮನಿರ್ದೇಶಿತ ಸದಸ್ಯರಲ್ಲಿ ಯಾರನ್ನು ನೇಮಿಸುವುದು? ಎನ್ನುವ ಜಿಜ್ಞಾಸೆಯಲ್ಲಿ ಸರ್ಕಾರ ಮುಳುಗಿದೆ.

2021ರಲ್ಲಿ ಅಂದಿನ ಬಿಜೆಪಿ ಸರಕಾರ ದಿಂದ ನಾಮನಿರ್ದೇಶನ ಗೊಂಡಿದ್ದ ಅಡಗೂರ ಎಚ್.ವಿಶ್ವನಾಥ್, ಭಾರತಿ ಶೆಟ್ಟಿ, ಶಾಂತಾರಾಮ್ ಬುಡ್ನ ಸಿದ್ದಿ, ಡಾ.ತಳವಾರ ಸಾಬಣ್ಣ ಹಾಗೂ ರಮೇಶ್ ಬಾಬು ಅವರ ಅವಧಿ ಮುಗಿಯಲಿದೆ. ಈ ಸ್ಥಾನಗಳಿಗೆ ಕಾಂಗ್ರೆಸ್ ಪಕ್ಷದಲ್ಲಿ ಒಂದು ಡಜನ್‌ಗೂ ಹೆಚ್ಚು ಆಕಾಂಕ್ಷಿಗಳಿದ್ದಾರೆ. ಮುಂದಿನ ವಾರ ರಾಜ್ಯ ಸಚಿವ ಸಂಪುಟ ವಿಸ್ತರಣೆ ಕುರಿತಂತೆ ಅನುಮತಿ ಪಡೆದು ಹೆಸರುಗಳನ್ನು ಅಂತಿಮಗೊಳಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ಎಡತಾಕುತ್ತಿದ್ದಾರೆ. ವಿಧಾನ ಪರಿಷತ್ ನೇಮಕಾತಿ ಕುರಿತು ಕೆಲವರ ಹೆಸರುಗಳು ಚರ್ಚೆಗೆ ಬರುತ್ತಿವೆ. ವಿಧಾನ ಪರಿಷತ್ ಗೆ ಈ ಬಾರಿ ರಮೇಶ್ ಬಾಬು ಅವರನ್ನು ಮತ್ತೊಂದು ಅವಧಿಗೆ ಮುಂದುವರಿಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಇತ್ತೀಚಿಗೆ ನಿಧನರಾದ ಎಐಸಿಸಿ ಕಾರ್ಯದರ್ಶಿ ಸೂರಜ್ ಹೆಗಡೆ ಅವರ ಪತ್ನಿಯನ್ನು ನೇಮಿಸುವ ದಟ್ಟ ವಿಚಾರ ವ್ಯಕ್ತವಾಗುತ್ತಿದೆ.

ಅಡಗೂರ ಎಚ್.ವಿಶ್ವನಾಥ್, ಭಾರತಿ ಶೆಟ್ಟಿ, ಶಾಂತಾರಾಮ್ ಬುಡ್ನ ಸಿದ್ದಿ, ಡಾ.ತಳವಾರ ಸಾಬಣ್ಣ ಮತ್ತು ರಮೇಶ್ ಬಾಬು ಅವರ ಅವಧಿ ಪೂರ್ಣಗೊಳ್ಳಲಿದ್ದು ಜೊತೆಗೆ ವಿ.ಎಸ್.ಉಗ್ರಪ್ಪ, ಎಚ್.ಆಂಜನೇಯ, ಬಿ.ಎಲ್.ಶಂಕರ್, ವಿ. ಆರ್.ಸುದರ್ಶನ್ ಹಾಗೂ ಹಿರಿಯ ವಕೀಲ ಎಚ್. ಎಸ್. ಚಂದ್ರಮೌಳಿ ಅವರ ಹೆಸರುಗಳು ಇದೀಗ ಮುಂಚೂಣಿಯಲ್ಲಿವೆ. ಇತ್ತೀಚೆಗೆ ವಿಧಾನಸಭೆಯಿಂದ ವಿಧಾನ ಪರಿಷತ್‌ನ 5 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ 5 ಸದಸ್ಯರ ಪೈಕಿ ನಾಲ್ವರು ಹಿಂದುಳಿದ ವರ್ಗಕ್ಕೆ ಹಾಗೂ ಒಕ್ಕಲಿಗ ಸಮುದಾಯದ ವಿನಯ್ ಕಾರ್ತಿಕ್ ಆಯ್ಕೆಯಾಗಿದ್ದಾರೆ.

ಈ ಮುಂಚೆ ನಾಮನಿರ್ದೇಶನದ ವೇಳೆ ಪರಿಶಿಷ್ಟ ಜಾತಿಯ ಬಲಗೈಗೆ ಸೇರಿದ ಕೆ.ಶಿವಕುಮಾರ್ ಹಾಗೂ ಎಚ್.ಎಫ್. ಜಕ್ಕಪ್ಪನವರ ಅವರಿಗೆ ಅವಕಾಶ ಲಭಿಸಿದೆ. ರಾಜ್ಯಸಭಾ ಚುನಾವಣೆಗೆ ಕೆ.ರೆಹಮಾನ್ ಖಾನ್ ಪುತ್ರ ಮನ್ಸೂರ್ ಅಲಿಖಾನ್ ಅವರಿಗೆ ಚಾನ್ಸ್ ಸಿಕ್ಕಿದೆ. ಈ ಕಾರಣದಿಂದ ಈ ಬಾರಿ ಪರಿಶಿಷ್ಟ ಪಂಗಡ, ಪರಿಶಿಷ್ಟ ಜಾತಿಯ ಎಡಗೈ, ಲಿಂಗಾಯತ ಹಾಗೂ ಹಿಂದುಳಿದ ವರ್ಗದ ತಲಾ ಒಬ್ಬರಿಗೆ ಅವಕಾಶ ಸಿಗುವ ನಿರೀಕ್ಷೆ ಇದೆ ಎಂದು ಹೇಳಲಾಗುತ್ತಿದೆ.

### ಅರ್ಹತೆ ಏನಿರಬೇಕು?

ಈಗಾಗಲೇ ಕರ್ನಾಟಕ ವಿಧಾನ ಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಆಡಳಿತರೂಢ ಕಾಂಗ್ರೆಸ್ 5 ಹಾಗೂ ಬಿಜೆಪಿ 2 ಸ್ಥಾನಗಳಲ್ಲಿ ಜಯಗಳಿಸಿವೆ. ಒಟ್ಟು 7 ಸ್ಥಾನಗಳಿಗೆ ನಡೆದ ಈ ಚುನಾವಣೆಯಲ್ಲಿ ಕಾಂಗ್ರೆಸ್ ತನ್ನ ನಿರೀಕ್ಷೆಗಿಂತ ಹೆಚ್ಚು ಸ್ಥಾನಗಳನ್ನು ಗಳಿಸುವಲ್ಲಿ ಯಶಸ್ವಿಯಾಗಿದೆ.

ವಿಧಾನ ಪರಿಷತ್ ಚುನಾವಣಾ ವಿಧಾನ ರಾಜ್ಯ ವಿಧಾನ ಪರಿಷತ್ತು ಒಂದು ಖಾಯಂ ಸದನವಾಗಿದ್ದು, ಸದಸ್ಯರ ಅವಧಿ 6 ವರ್ಷಗಳಾಗಿತ್ತು.

ಪ್ರತಿ 2 ವರ್ಷಗಳಿಗೊಮ್ಮೆ ಮೂರನೇ ಒಂದು ಭಾಗದಷ್ಟು ಸದಸ್ಯರು ನಿವೃತ್ತರಾಗುವುದು ವಾಡಿಕೆ.

ಭಾರತೀಯ ಸಂವಿಧಾನದ ಆರ್ಟಿಕಲ್ 171 ಅಡಿಯಲ್ಲಿ ಪ್ರಸ್ತಾಪಿಸಿದಂತೆ ಸಾಹಿತ್ಯ, ವಿಜ್ಞಾನ,
ಕಲೆ, ಸಹಕಾರ ಚಳವಳಿ ಹಾಗೂ ಸಮಾಜ ಸೇವೆ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿಗಳನ್ನು ಸಚಿವ ಸಂಪುಟದ ಶಿಫಾರಸಿನ ಮೇರೆಗೆ ರಾಜ್ಯಪಾಲರು ವಿಧಾನ ಪರಿಷತ್‌ಗೆ ನಾಮನಿರ್ದೇಶನ ಮಾಡುತ್ತಾರೆ.

ಶಿಫಾರಸು ಮಾಡಿದ ವ್ಯಕ್ತಿಗಳ ಬಗೆಗೆ ರಾಜ್ಯಪಾಲರಿಗೆ ಆಕ್ಷೇಪವಿದ್ದರೆ ಸಂಬಂಧಪಟ್ಟ ಅಭ್ಯರ್ಥಿಯ ಬಗ್ಗೆ ಸರಕಾರದಿಂದ ಮಾಹಿತಿ ಪಡೆದು, ನಂತರ ಸರಕಾರದ ಶಿಫಾರಸು ಅಂಗೀಕರಿಸಬೇಕಾಗುತ್ತದೆ.

ಹಿಂದುಳಿದ ವರ್ಗಕ್ಕೆ 4 ಸ್ಥಾನ ಹಾಗೂ ಒಕ್ಕಲಿಗ ಸಮುದಾಯಕ್ಕೆ ಒಂದು ಸ್ಥಾನ ನೀಡಲಾಗಿದೆ.

## ಕಾಂಗ್ರೆಸ್ ಸಿದ್ಧಾಂತ ಪ್ರತಿಪಾದನೆಗೆ ಮಣೆ?

ಮೇಲ್ಮನೆಯಲ್ಲಿ ಕಾಂಗ್ರೆಸ್ ಸಿದ್ಧಾಂತವನ್ನು ಗಟ್ಟಿಯಾಗಿ ಪ್ರತಿಪಾದಿಸುವ ನಿಟ್ಟಿನಲ್ಲಿ ವಿ.ಎಸ್. ಉಗ್ರಪ್ಪ ಮುಂಚೂಣಿಯಲ್ಲಿದ್ದಾರೆ. ಅವರೊಂದಿಗೆ ಬಿ.ಎಲ್.ಶಂಕರ್ ಮತ್ತು ವಿ.ಆರ್.ಸುದರ್ಶನ್ ಅವರನ್ನೂ ನೇಮಕ ಮಾಡಬೇಕೆಂಬ ಒತ್ತಾಯ ಇದೆ. ಪ್ರಾದೇಶಿಕತೆ, ಸಾಮಾಜಿಕ ನ್ಯಾಯ, ಜಾತಿವಾರು ಸಮೀಕರಣದ ಜೊತೆಗೆ ಸರಕಾರವನ್ನು ಗಟ್ಟಿಯಾಗಿ ಸಮರ್ಥಿಸಿಕೊಳ್ಳುವವರಿಗೆ ಮಾತ್ರ ಆದ್ಯತೆ ನೀಡುವ ಸಲಹೆ ಹೈಕಮಾಂಡ್ ನಿಂದ ಬಂದಿದೆ.

ಮೇಲ್ಮನೆಯಲ್ಲಿ ಗಂಭೀರ ವಿಚಾರಗಳು ಚರ್ಚೆಯಾಗಬೇಕಾದರೆ ಅನುಭವ ಮತ್ತು ವೈಚಾರಿಕ ಬದ್ಧತೆ ಇರುವವರಿಗೆ ಬಲ ತುಂಬಬೇಕೆಂಬ ಚರ್ಚೆಯೂ ನಡೆಯುತ್ತಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೈಕಮಾಂಡ್‌ಗೆ ಯಾವ ಹೆಸರುಗಳನ್ನು ಶಿಫಾರಸು ಮಾಡಬಹುದು? ಎನ್ನುವುದೇ ಸಧ್ಯಕ್ಕಿರುವ ಪ್ರಶ್ನೆ. ಮಾಜಿ ಸಿಎಂ ಸಿದ್ದರಾಮಯ್ಯ ಸಚಿವ ಸಂಪುಟ ವಿಸ್ತರಣೆ ಕುರಿತಂತೆ ಚರ್ಚೆಗೆ ವರಿಷ್ಠರಿಂದ ಆಹ್ವಾನ ಬಂದ ನಂತರವೇ ದೆಹಲಿಗೆ ತೆರಳಲಿದ್ದಾರೆ.

ಪರಿಷತ್ ನಾಮನಿರ್ದೇಶನ ವಿಚಾರದಲ್ಲೂ ತಮ್ಮ ಸಲಹೆ ನೀಡಲಿದ್ದಾರೆ.

ಹಾಲಿ ಚರ್ಚೆಯಲ್ಲಿರುವ ಹೆಸರುಗಳು ಮಾತ್ರವಲ್ಲದೇ ಅನಿರೀಕ್ಷಿತ ಹೆಸರುಗಳು ಮುನ್ನೆಲೆಗೆ ಬರುವುದೇ? ಎನ್ನುವುದನ್ನು ಕಾದು ನೋಡಬೇಕಿದೆ.

# ರಾಮ ಮುಖ್ಯವ್ರೋ, ರಾಮನ ಹಣ ಕದ್ದವರು ಮುಖ್ಯವ್ರೋ: ಬಿಕೆಹೆಚ್


ಬೆಂಗಳೂರು

ರಾಮ ಮುಖ್ಯವ್ರೋ, ರಾಮನ ಹಣ ಕದ್ದವರು ಮುಖ್ಯವ್ರೋ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಶ್ನಿಸುವ ಮೂಲಕ ಅವರು ರಾಮನ ಹುಂಡಿ ಕದ್ದವರ ಪರವಾಗಿರುಯವುದು ಸಾಬೀತಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಮ ಮಂದಿರದ ಟ್ರಸ್ಟ್ ಸ್ಥಾಪಿಸಿದವರು, ಮಂದಿರ ಶಿಲಾನ್ಯಾಸ ಮಾಡಿದವರು, ಬಾಲರಾಮನಿಗೆ ಪ್ರಾಣ ಪ್ರತಿಷ್ಠಾಪನೆ ಮಾಡಿದ್ದು ನರೇಂದ್ರ ಮೋದಿ ಅವರು. ಇವರು ಇಷ್ಟೆಲ್ಲಾ ಮಾಡಿದ ಮೇಲೆ 200 ಕೋಟಿ ಹಣ, ಬಂಗಾರ, ಬೆಳ್ಳಿ ಲೂಟಿಯ ಜವಾಬ್ದಾರಿ ಯಾರು ವಹಿಸಿಕೊಳ್ಳಬೇಕು? ಹೀಗಾಗಿ ನಾವು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರ ರಾಜೀನಾಮೆ ಕೇಳುತ್ತಿದ್ದೇವೆ. ಮರ್ಯಾದ ಪುರುಷೋತ್ತಮನ ಮರ್ಯಾದೆ ಉಳಿಸಲು ನಾವು ಸಿಬಿಐ ತನಿಖೆಗೆ ಆಗ್ರಹಿಸಿದ್ದೇವೆ ಎಂದರು.

ಈ ಲೂಟಿಗೂ ಕರ್ನಾಟಕಕ್ಕೂ ಸಂಬಂಧವಿದೆ ಎಂಬ ಪ್ರಶ್ನೆಗೆ "ಬಹಳ ಚೆನ್ನಾಗಿದೆ. ಅವರು ಹಿಂದುತ್ವದ ಮಹಾನ್ ಹೋರಾಟಗಾರರು. ವಿಶ್ವ ಹಿಂದೂ ಪರಿಷತ್ತಿನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಗೋಪಾಲ್ ನಾಗರಕಟ್ಟೆ ಅವರನ್ನು ಐದು ದಿನಗಳ ಕಾಲ ವಿಚಾರಣೆ ಮಾಡಿದ್ದಾರೆ. ಚಂಪಕ್ ರಾಯ್ ಜೊತೆ ಸೇರಿ ದೇವರ ಹೆಸರಿನಲ್ಲಿ ಜನಸಾಮಾನ್ಯರ ಹಣ ಲೂಟಿ ಮಾಡಿದ್ದಾರೆ. ಭಾರತದಲ್ಲಿ ದೇವಸ್ಥಾನಗಳನ್ನು ಲೂಟಿ ಮಾಡಿರುವ ಇತಿಹಾಸ ಕೇವಲ ಇಬ್ಬರಿಗೆ ಮಾತ್ರ ಇದೆ. ಒಂದು 12ನೇ ಶತಮಾನದಲ್ಲಿ ಮೊಹಮದ್ ಘಜ್ನಿ ಹಿಂದೂ ದೇವಾಲಯಗಳನ್ನು ಲೂಟಿ ಮಾಡಿದ್ದ. ಈಗ 21ನೇ ಶತಮಾನದಲ್ಲಿ ಆರ್‌ಎಸ್‌ಎಸ್ ಹಾಗೂ ಬಿಜೆಪಿಯವರು ನೇತೃತ್ವದಲ್ಲಿ ರಾಮ ಮಂದಿರ ಲೂಟಿ ಮಾಡಿದ್ದಾರೆ. ಇವರಿಗೆ ಧರ್ಮದ ಬಗ್ಗೆ ಮಾತನಾಡುವ ಯಾವುದೇ ನೈತಿಕತೆ ಇಲ್ಲ. ರಾಜಕಾರಣದಲ್ಲಿ ಮಾತ್ರ ಭ್ರಷ್ಟರಿದ್ದರು, ಇವರಿಂದಾಗಿ ಧಾರ್ಮಿಕ ಕ್ಷೇತ್ರದಲ್ಲೂ ಭ್ರಷ್ಟರು ತುಂಬುವಂತಾಗಿದೆ. ಇದು ವಿಷಾದಕರ ವಿಚಾರ" ಎಂದರು.

ಆರ್‌ಎಸ್‌ಎಸ್ ಈ ವಿಚಾರವಾಗಿ ಬೆಳಗಾವಿಯಲ್ಲಿ ಸಭೆ ಮಾಡುತ್ತಿದೆ ಎಂದು ಕೇಳಿದಾಗ, "ಬೆಳಗಾವಿಯಲ್ಲಿ ಯಾಕೆ ಸಭೆ ಮಾಡುತ್ತಿದ್ದಾರೆ ಗೊತ್ತಿಲ್ಲ. ಸಭೆಯ ಬಳಿಕ ವಿಚಾರ ಬಂದರೆ ಉತ್ತರ ನೀಡೋಣ. ಅವರ ಇಂತಹ ಸಭೆಗಳು ನಡೆದಾಗ, ದಾಬೋಲ್ಕರ್, ಪನ್ಸಾರೆ, ಕಲಬುರ್ಗಿ, ಗೌರಿ ಲಂಕೇಶ ಅವರ ಹತ್ಯೆಯಾಗಿತ್ತು. ಈಗಲೂ ಸಭೆ ನಡೆಯುತ್ತಿದ್ದು, ಮುಂದೆ ಏನೆಲ್ಲಾ ಅನಾಹುತ ಆಗುತ್ತದೆಯೋ ಗೊತ್ತಿಲ್ಲ ಎಂದರು.



ಇತ್ತೀಚೆಗೆ ಬೇಬಿ ಯಡಿಯೂರಪ್ಪ (ವಿಜಯೇಂದ್ರ) ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರ ಮೇಲೆ ಟೀಕೆ ಮಾಡಿದ್ದಾರೆ. ಚೆಕ್ ಮೂಲಕ ಲಂಚ ಪಡೆದು ಜೈಲು ಸೇರಿರುವ ಇತಿಹಾಸ ಹೊಂದಿರುವವರು, ಕಾಂಗ್ರೆಸ್‌ಗೆ ನೈತಿಕತೆಯ ಪಾಠ ಕಲಿಸಲು ಮುಂದಾಗಿದ್ದಾರೆ. ಕಾಂಗ್ರೆಸ್ ನಾಯಕರ ಮೇಲೆ ನ್ಯಾಷನಲ್ ಹೆರಾಲ್ಡ್ ಕೇಸ್ ಇಲ್ಲವೇ ಎಂದು ಹೇಳುತ್ತಿದ್ದಾರೆ. ಈ ಪ್ರಕರಣ ಕಳೆದ 10 ವರ್ಷಗಳಿಂದ ನಡೆಯುತ್ತಲೇ ಇದೆ. ನ್ಯಾಷನಲ್ ಹೆರಾಲ್ಡ್ ಕಂಪನಿ ಕಾಯ್ದೆ ಅಡಿ ನೋಂದಣಿಯಾಗಿದ್ದು, ಅದರಲ್ಲಿ 10 ರೂ ತೆಗೆಯಲು ಆಗುವುದಿಲ್ಲ, ಕೊಡಲು ಆಗುವುದಿಲ್ಲ. ಅದರ ಸಂಪೂರ್ಣ ಆಸ್ತಿ ಕಂಪನಿ ಕಾಯ್ದೆ ಮೂಲಕವೇ ಇದೆ.

ವಿಜಯೇಂದ್ರ ಅವರು ತಮ್ಮ ನಾಯಕರ ಮೇಲಿರುವ ಆರೋಪಗಳ ಬಗ್ಗೆ ಉತ್ತರ ಕೊಟ್ಟಿದ್ದರೆ ಚೆನ್ನಾಗಿರುತ್ತಿತ್ತು. ಅವರ ವಿರುದ್ಧ ಲಂಚ ಸ್ವೀಕಾರ ಹಾಗೂ ಅಪ್ರಾಪ್ತ ಹೆಣ್ಣು ಮಗುವಿನ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಿವೆ. ಅಂತಹವರ ಮಗ ರಾಮಮಂದಿರ ಹಣ ಕಳವು ಪ್ರಕರಣದಲ್ಲಿ ಲೂಟಿಕೋರರ ಪರ ವಹಿಸುತ್ತಿರುವುದರಲ್ಲಿ ಯಾವುದೇ ಅಚ್ಚರಿ ಇಲ್ಲ. ಅಯೋಧ್ಯೆ ಮಂದಿರದಲ್ಲಿ ಆಗಿರುವ ಲೂಟಿ ಜನಸಾಮಾನ್ಯರು ನೀಡುವ ದೇಣಿಗೆ ಸಂಪತ್ತು. ಅದು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಸಂಪತ್ತಲ್ಲ. ಅಲ್ಲಿರುವುದು ಉತ್ತರ ಪ್ರದೇಶ ಸರ್ಕಾರ. ಅವರೇ ಚೌಕಿದಾರರು. ಉತ್ತರ ಪ್ರದೇಶದಲ್ಲಿ ನಡೆಯುವ ಅನಾಚಾರ, ದುರಾಚಾರ, ಭ್ರಷ್ಟಾಚಾರಗಳು ಯಾವುದೂ ಹೊರಗೆ ಬರುವುದಿಲ್ಲ. ಕೇಂದ್ರ ಸರ್ಕಾರದ ನಿಯಂತ್ರಣದಲ್ಲಿರುವ ಸಿಬಿಐ ಮೇಲೆ ನಮಗೆ ನಂಬಿಕೆ ಇಲ್ಲ ಎಂದರು.

ಜಿಬಿಎ ಚುನಾವಣೆ ನಡೆಸಲು ನಾವು ತಯಾರಾಗಿದ್ದು, ಪ್ರಣಾಳಿಕೆ ಸಮಿತಿ ಎಲ್ಲವೂ ಸಿದ್ಧವಾಗಿದೆ. ಎಸ್‌ಐಆರ್ ಮಾಡಲು ಸರ್ಕಾರಿ ಅಧಿಕಾರಿಗಳು ಸಿಗುತ್ತಿಲ್ಲ. ಹೋಂಗಾರ್ಡ್‌ಗಳನ್ನು ಸೇರಿಸಿ ಕೊಂಡು ಮಾಡುತ್ತಿದ್ದಾರೆ. ಅವರಿಂದ ಚುನಾವಣೆ ಸಾಧ್ಯವಾಗುತ್ತಿಲ್ಲ. ಹೀಗಾಗಿ ಅಧಿಕಾರಿಗಳ ಕೊರತೆಯಿಂದ ಎಸ್‌ಐಆರ್ ಮಾಡಲು ಸಾಧ್ಯವಾಗುತ್ತಿಲ್ಲ. ಅವರು ಕೋರ್ಟ್ ಆದೇಶದಂತೆ ಚುನಾವಣೆ ನಡೆಸಬೇಕಾದರೆ, ಜುಲೈ ತಿಂಗಳಲ್ಲೇ ಅಧಿಸೂಚನೆ ಹೊರಡಿಸಬೇಕು. ಅದಾದ ನಂತರ ಮತಪಟ್ಟಿ ಮಾಡಬೇಕು. ಯಾವ ಮತಪಟ್ಟಿ ಆಧಾರದ ಮೇಲೆ ಚುನಾವಣೆ ಮಾಡಬೇಕು ಎಂಬ ಸ್ಪಷ್ಟತೆಯೂ ಇಲ್ಲ. ಹೀಗಾಗಿ ನ್ಯಾಯಾಲಯದ ಮೆಟ್ಟಿಲೇರಲಾಗಿದೆ. ಇದು ಸರ್ಕಾರದಿಂದ ಮಾಡಿರುವ ಮನವಿಯಲ್ಲ" ಎಂದು ಸ್ಪಷ್ಟಪಡಿಸಿದರು.

ಶಾಶ್ವತ ಪ್ರಮಾಣಪತ್ರ ನೀಡುವುದರಿಂದ ಅಕ್ರಮ ವಾಸಿಗರಿಗೆ ಅನುಕೂಲವಾಗಲಿದೆ ಎಂದು ಸಚಿವೆ ಶೋಭ ಕರಂದ್ಲಾಜೆ ಅವರು ಕೇಂದ್ರಕ್ಕೆ ಬರೆದಿರುವ ಪತ್ರದ ಬಗ್ಗೆ ಕೇಳಿದಾಗ, "ಶೋಭಕ್ಕ ಅವರು ಪತ್ರವನ್ನು ರಾಷ್ಟ್ರಪತಿಗಳಿಗೆ ಬರೆಯಬೇಕು. ಈ ನುಸುಳುಕೋರರನ್ನು ಕರ್ನಾಟಕದವರೆಗೆ ಬಿಟ್ಟ ಗೃಹ ಸಚಿವ ಅಮಿತ್ ಶಾ ಅವರನ್ನು ತಕ್ಷಣವೇ ಸಂಪುಟದಿಂದ ವಜಾಗೊಳಿಸಬೇಕು ಎಂದು ಪತ್ರ ಬರೆಯಬೇಕು. ಕರ್ನಾಟಕ ರಾಜ್ಯ ಬಾಂಗ್ಲಾದೇಶದೊಂದಿಗೆ ಗಡಿ ಹಂಚಿಕೊಂಡಿಲ್ಲ. ಅಕ್ರಮವಲಸಿಗರು 4 ಸಾವಿರ ಕಿ.ಮೀ ದೂರದ ಕರ್ನಾಟಕದವರೆಗೂ ಬಂದಿದ್ದಾರೆ ಎಂದರೆ ಇವರೇನು ಕಡಲೇಕಾಯಿ ತಿನ್ನುತ್ತಿದ್ದರಾ?" ಎಂದು ಕಿಡಿಕಾರಿದರು.

ಅವರು ಬಿಟ್ಟರು, ನೀವು ಶಾಶ್ವತ ನಿವಾಸಿ ಮಾಡಲು ಹೊರಟಿದ್ದೀರಿ ಎಂದು ಕೇಳಿದಾಗ, "ಅವರು ಒಳಗೆ ಯಾಕೆ ಬಿಟ್ಟಿದ್ದಾರೆ? ನಾನು ಕಾಲೇಜಿನಲ್ಲಿದ್ದಾಗಿನಿಂದ ನೋಡಿಕೊಂಡು ಬಂದಿದ್ದೇನೆ. ಮುಂಬೈನಿಂದ ದಕ್ಷಿಣ ಭಾರತದವರನ್ನು ರಾಜಕೀಯಕ್ಕಾಗಿ ಓಡಿಸಿದರು. ದಕ್ಷಿಣ ಭಾರತದವರು ಪ್ರಬಲರಾದ ಬಳಿಕ, ಗುಜರಾತಿಗಳನ್ನು ಹಿಡಿದುಕೊಂಡರು. ಗುಜರಾತಿಗಳು ಹಣದ ವಿಚಾರದಲ್ಲಿ ಕಟ್ಟುನಿಟ್ಟಾದಾಗ ಅವರನ್ನು ಬಿಟ್ಟರು. ನಂತರ ಅಲ್ಪಸಂಖ್ಯಾತರನ್ನು ಹಿಡಿದುಕೊಂಡರು. ಈಗ ಬಾಂಗ್ಲಾದೇಶಿಗರು ಎನ್ನುತ್ತಿದ್ದಾರೆ. ಅಸ್ಸಾಂಲ್ಲಿ ಎಆರ್‌ಸಿ ಮತ್ತು ಸಿಎಎ ಮೂಲಕ 30 ಲಕ್ಷ ಜನರನ್ನು ಗುರುತಿಸಿದ್ದು, ಅದರಲ್ಲಿ 21 ಲಕ್ಷ ಹಿಂದೂಗಳನ್ನು ಹೊರಹಾಕಲು ಹೊರಟಿದ್ದರು. ಹೀಗಾಗಿ ಅದನ್ನು ಅಲ್ಲೇ ಕೈಬಿಟ್ಟರು. ರಾಜಕೀಯಕ್ಕಾಗಿ ಬಾಂಗ್ಲಾ ದೇಶಿಗರ ಹೆಸರು ಹೇಳುತ್ತಿದ್ದಾರೆ. ಭಾರತದ ನೈಜ್ಯ ಮತದಾರರನ್ನು ಕೈಬಿಡುವ ಕುತಂತ್ರ ಬಿಜೆಪಿಯವರು ಮಾಡುತ್ತಿದ್ದಾರೆ" ಎಂದು ಹೇಳಿದರು.

ಮೂಡಿಗೆರೆಯಲ್ಲಿ ಪರ ವಿರೋಧ ವಿಚಾರವಾಗಿ ಕೇಳಿದಾಗ, "ಇಲ್ಲಿ ಪರ ವಿರೋಧವೇನಿಲ್ಲ. ಆರ್‌ಎಸ್‌ಎಸ್, ಮುತಾಲಿಕ್ ಸೇರಿದಂತೆ ಇತರೆ ನಾಯಕರ ಗಲಾಟೆ ಹೆಚ್ಚಾಗುತ್ತಿದೆ. ಇದನ್ನು ನಿಯಂತ್ರಿಸಿ ಎಂದು ಮನವಿ ಮಾಡಿದ್ದಾರೆ" ಎಂದರು.

ಸಚಿವ ಸಂಪುಟ ವಿಸ್ತರಣೆ ವಿಳಂಬದಿಂದ ಸಂಘಟನೆಗೆ ತೊಂದರೆಯಾಗುತ್ತಿಲ್ಲವೇ ಎಂದು ಕೇಳಿದಾಗ, "ಸರ್ಕಾರ ಬೇರೆ, ಪಕ್ಷ ಬೇರೆ. ಪಕ್ಷ ಸಂಘಟನೆ ಮಾಡುವುದು ಪಕ್ಷ, ಸರ್ಕಾರದ ನೀತಿ ನಿಯಮ ಮಾಡುವುದು ಸರ್ಕಾರ. ಸರ್ಕಾರ ರಾಜ್ಯದ ಎಲ್ಲಾ ಜನರಿಗೆ ಅನ್ವಯಿಸುತ್ತದೆ.

ಪಕ್ಷ ನಮ್ಮದು, ಅಲ್ಲಿ ಏನು ಮಾಡಬೇಕೋ ನಾವು ಮಾಡುತ್ತೇವೆ. ಇನಲ್ಲಿ ಸರ್ಕಾರ ಹಾಗೂ ಪಕ್ಷದ ನಡುವೆ ಸಮನ್ವಯತೆ ಕೊರತೆ ಇಲ್ಲ" ಎಂದರು.

# ಒಂದೆರಡು ವಾರದಲ್ಲಿ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆ: ಖರ್ಗೆ

ಬೆಂಗಳೂರು

ಒಂದೆರಡು ವಾರದಲ್ಲಿ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಯಾಗಲಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೂರ್ಣ ಪ್ರಮಾಣದಲ್ಲಿ ಸಂಪುಟ ವಿಸ್ತರಣೆ ಮಾಡುವುದಾಗಿ ಮುಖ್ಯಮಂತ್ರಿಯವರೇ ಹೇಳಿದ್ದಾರೆ. ಸರ್ಕಾರ ನಡೆಯಲು ಅಧಿಕಾರ ವಿಕೇಂದ್ರೀಕರಣ ವಾಗಬೇಕು. ಎಲ್ಲರಿಗೂ ಅನುಕೂಲವಾಗಬೇಕೆಂದು ಎಂದರು.

ಕಾಂಗ್ರೆಸ್‌ನವರು ಒಟ್ಟಿಗೆ ಕಾಫಿ ಕುಡಿದರೂ ಪ್ರತ್ಯೇಕ ಸಭೆಯೆಂದು ಬಿಂಬಿಸಲಾಗುತ್ತದೆ. ಒಟ್ಟಾಗಿ ಊಟ ಮಾಡಲು ಯಾವುದಾದರೂ ನಿರ್ಬಂಧವಿದೆಯೇ? ಮಲ್ಲಿಕಾರ್ಜುನ ಖರ್ಗೆ ನನ್ನ ತಂದೆ. ದೆಹಲಿಗೆ ಹೋದಾಗ ನಾನು ಮನೆಗೆ ಹೋದರೆ, ಪ್ರಿಯಾಂಕ ಖರ್ಗೆಯಿಂದ ಎಐಸಿಸಿ ಅಧ್ಯಕ್ಷರ ಭೇಟಿ ಎಂದು ವರದಿ ಪ್ರಕಟವಾಗುತ್ತದೆ. ನಾನು ವಾಸವಿರುವುದು ಅವರ ಮನೆಯಲ್ಲೇ. ಈ ರೀತಿಯ ಸುದ್ದಿಗಳಿಗೆ ಏನೆಂದು ಸ್ಪಷ್ಟನೆ ನೀಡಬೇಕು ಎಂದರು.



> ಮಲ್ಲಿಕಾರ್ಜುನ ಖರ್ಗೆ ನನ್ನ ತಂದೆ. ದೆಹಅಗೆ ಹೋದಾಗ ನಾನು ಮನೆಗೆ ಹೋದರೆ, ಪ್ರಿಯಾಂಕ ಖರ್ಗೆಯಿಂದ ಎಐಸಿಸಿ ಅಧ್ಯಕ್ಷರ ಭೇಟಿ ಎಂದು ವರದಿ ಪ್ರಕಟವಾಗುತ್ತದೆ. ನಾನು ವಾಸವಿರುವುದು ಅವರ ಮನೆಯಲ್ಲೇ. ಈ ರೀತಿಯ ಸುದ್ದಿಗಳಿಗೆ ಏನೆಂದು ಸ್ಪಷ್ಟನೆ ನೀಡಬೇಕು

ಜಾಗತಿಕ ಹೂಡಿಕೆ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸ್ಥಾಪಿಸುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಇದು ಎನ್‌ಐಆರ್‌ಗೆ ಸಂಬಂಧಪಟ್ಟ ವಿಷಯ ಅಲ್ಲ. ಬಂಡವಾಳ ಹೂಡಿಕೆ, ಉದ್ಯೋಗವಕಾಶಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ.

ಸದ್ಯಕ್ಕೆ ಈ ವಿಚಾರಗಳನ್ನು ಬೇರೆ ಬೇರೆ ಇಲಾಖೆಗಳು ನಿರ್ವಹಣೆ ಮಾಡುತ್ತಿವೆ. ಹೊಸ ಇಲಾಖೆ ರಚಿಸುವುದರಿಂದ ಯಾವುದೇ ಇಲಾಖೆ ಅಧಿಕಾರ ವ್ಯಾಪ್ತಿಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಲಾಗುವುದು.

ಶಿಷ್ಟಾಚಾರ ಮತ್ತು ನೀತಿಗಳಿಗೂ ತೊಂದರೆಯಾಗದಂತೆ ಮತ್ತು ಗಡಿ ರೇಖೆ ಮೀರದಂತೆ ಇಲಾಖೆ ರೂಪಿಸಬೇಕು ಎಂದರು.

ಕೃಷಿ ಸಾಲ ಮನ್ನಾ ಮಾಡಲಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಕೇಂದ್ರ ಸರ್ಕಾರದಿಂದ ಹೆಚ್ಚಿನ ಹಣ ಕೊಡಿಸಲಿ, ಪ್ರಧಾನಮಂತ್ರಿಯವರು ಈ ಬಗ್ಗೆ ಗಮನ ಹರಿಸಿ ರಾಷ್ಟ್ರ ಮಟ್ಟದಲ್ಲಿ ನಿರ್ಧಾರ ತೆಗೆದುಕೊಳ್ಳಲಿ ಎಂದರು.

ವಿಬಿಜಿ–ರಾಮ್‌ಜಿ ಯೋಜನೆಗೂ ರಾಜ್ಯ ಸರ್ಕಾರವೇ ಹಣ ಕೊಡಬೇಕು. ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಿಗೂ ರಾಜ್ಯ ಪಾಲುದಾರರಾಗಬೇಕು, ಸಾಲ ಮನ್ನಾವನ್ನು ರಾಜ್ಯವೇ ಮಾಡಬೇಕು. ಹಾಗಿದ್ದರೆ ಕೇಂದ್ರ ಸರ್ಕಾರದ ಜವಾಬ್ದಾರಿ ಏನು? ಎಂದರು.

ಯಡಿಯೂರಪ್ಪರವರು ಮುಖ್ಯಮಂತ್ರಿಯಾಗಿದ್ದಾಗ ಸಾಲ ಮನ್ನಾ ಮಾಡಲು ಒತ್ತಾಯಿಸಲಾಯಿತು. ನಾವು ನೋಟು ಮುದ್ರಿಸುವ ಯಂತ್ರ ಇಟ್ಟಿಲ್ಲ ಎಂದು ಯಡಿಯೂರಪ್ಪ ಪ್ರತ್ಯುತ್ತರಿಸಿದ್ದರು. ಬರ ನಿರ್ವಹಣೆಗೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಹೆಚ್ಚಿನ ನೆರವು ನೀಡಬೇಕಿದೆ ಎಂದು ಅವರು ಆಗ್ರಹಿಸಿದ್ದಲ್ಲದೇ, ರೈತರ ಸಾಲ ಮನ್ನಾಗೆ ದೆಹಲಿಗೆ ಹೋಗಿ ಪ್ರಧಾನಿಯವರ ಮೇಲೆ ಬಿಜೆಪಿಯವರು ಒತ್ತಡ ಹಾಕಲಿ. ಕೇವಲ ಮನ್‌ಕೀಬಾತ್ ಕೇಳಿಕೊಂಡು ಕುಳಿತುಕೊಳ್ಳಬೇಡಿ ಎಂದರು.

ರಾಜ್ಯದಲ್ಲಿ ನಡೆದಿರುವ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯನ್ನು ಜಾರಿಗೊಳಿಸಬೇಕೆಂದು ಬಿಜೆಪಿಯವರು ಒತ್ತಾಯಿಸುತ್ತಿದ್ದಾರೆ. ಉಪದೇಶ ಮಾಡುವುದನ್ನು ಬಿಟ್ಟು, ಬಿಜೆಪಿಯ ಆಡಳಿತದಲ್ಲಿರುವ ರಾಜ್ಯಗಳಲ್ಲೂ ಸಮೀಕ್ಷೆ ಮಾಡಲಿ ಎಂದು ಸವಾಲು ಹಾಕಿದರು.

ಎಂಇಎಸ್‌ಗೆ ಮಹಾರಾಷ್ಟ್ರ ಸರ್ಕಾರ ಬೆಂಬಲ ನೀಡುವುದಕ್ಕೆ ತೀವ್ರ ಅಸಮಾಧಾನ ಪಡಿಸಿದ ಅವರು, ರಾಜ್ಯದ ನೆಲ, ಜಲ, ಭಾಷೆಯ ವಿಚಾರದಲ್ಲಿ ಸೂಕ್ಷ್ಮತೆಯಿಂದಿರಬೇಕು ಎಂದರು.

## ಕಾನಿಪ ಕಾಕಾ ಸಭೆ: ಪ್ರಮುಖ ನಿರ್ಧಾರಗಳು

ಬಳ್ಳಾರಿ

ಇಲ್ಲಿನ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಕಾರ್ಯಕಾರಿ ಸಮಿತಿ ಸಭೆ ಜರುಗಿದ್ದು ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಸಂಘದ ಅಧ್ಯಕ್ಷ ಎನ್.ವೀರಭದ್ರಗೌಡ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ತಿಂಗಳ 26 ಭಾನುವಾರ ದಂದು ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.




ಜನಪ್ರತಿನಿಧಿಗಳನ್ನು, ರಾಜಕೀಯ ಮುಖಂಡರನ್ನು, ಅಧಿಕಾರಿಗಳನ್ನು ಬಿಟ್ಟು ಗಣ್ಯರೊಬ್ಬರನ್ನು, ಅಕಾಡೆಮಿಗಳವರನ್ನು, ರಾಜ್ಯ ಸಮಿತಿಯವರನ್ನು ಕರೆಯಲು, ಸರಳ ರೀತಿಯಲ್ಲಿ ಆಚರಿಸಲು ಅದಕ್ಕೂ ಮುನ್ನ ಒಮ್ಮೆ ಪೂರ್ವಭಾವಿ ಸಭೆ ನಡೆಸಲು ನಿರ್ಧರಿಸಿತು.

ಸಿರುಗುಪ್ಪದಲ್ಲಿ ಜು.21 ರಂದು, ಕಂಪ್ಲಿಯಲ್ಲಿ ಜು.24 ರಂದು ಪತ್ರಿಕಾ ದಿನಾಚರಣೆ ನಡೆಸಲಿದೆಂದು ಆಯಾ ತಾಲೂಕು ಅಧಕ್ಷರು ತಿಳಿಸಿದ್ದು, ಈ ದಿನಾಂಕ ಬಿಟ್ಟು ಉಳಿದ ದಿನ ಕುರುಗೋಡು, ಸಂಡೂರಿನವರು ಹಮ್ಮಿಕೊಳ್ಳಬಹುದೆಂದು ಸಲಹೆ ನೀಡಲಾಯಿತು.

ಯೋಗ ಕ್ಷೇಮ ನಿಧಿಯಿಂದ ಸಿರುಗುಪ್ಪದ ಮಾರೆಪ್ಪ ನಾಯಕ ಅವರಿಗೆ ಐದು ಸಾವಿರ ನೀಡುವುದು, ಪ್ರಧಾನ ಕಾರ್ಯದರ್ಶಿ ಹುದ್ದೆಗೆ ನರಸಿಂಹ ಮೂರ್ತಿ ಕುಲಕರ್ಣಿ ರಾಜೀನಾಮೆ ನೀಡಿರುವುದನ್ನು ಪ್ರಸ್ತಾಪಿಸಿ. ಅವರ ಮನವೊಲಿಸಿ, ಮೂರು ದಿನ ಅವಕಾಶ ನೀಡಿ ಸಮ್ಮತಿಸದಿದ್ದರೆ ಅಂಗೀಕಾರ ಮಾಡಲು ನಿರ್ಧರಿಸಿತು.

ರಾಜೀನಾಮೆ ಅಂಗೀಕಾರಗೊಂಡರೆ ವಿಷಯವನ್ನು ರಾಜ್ಯಸಮಿತಿ ಗಮನಕ್ಕೆ ತಂದು ಮುಂದಿನ ಪ್ರಕ್ರಿಯೆ ಕೈಗೊಳ್ಳಲು ರಾಜ್ಯ ಸಮಿತಿ ಸೂಚನೆ ಪಡೆಯಲು ಸಮ್ಮತಿಸಿತು.

ಮುಂದಿನ ದಿನಗಳಲ್ಲಿ ಕ್ರೀಡಾ ದಿನಾ, ಸಾಂಸ್ಕೃತಿಕ ದಿನ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.


# ರಕ್ತ ಪರೀಕ್ಷೆಯ ಮೂಲಕ ಆರಂಭದಲ್ಲೇ ಕ್ಯಾನ್ಸರ್ ಪತ್ತೆ ಹಚ್ಚುವ ತಂತ್ರಜ್ಞಾನ ಅಭಿವೃದ್ಧಿಗಾಗಿ, ರಿಲಯನ್ಸ್‌ನ ಸ್ಟ್ರಾಂಡ್ ಲೈಫ್ ಸೈನ್ಸ್ ಸಂಸ್ಥೆಗೆ ಮಹತ್ವದ ಪೇಟೆಂಟ್

ಬೆಂಗಳೂರು

ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್‌ನ ಅಂಗಸಂಸ್ಥೆಯಾದ ಸ್ಟ್ರಾಂಡ್ ಲೈಫ್ ಸೈನ್ಸ್, ಇಂದು ತನ್ನ ಹೊಸ ಸಂಶೋಧನೆಗೆ ಭಾರತೀಯ ಪೇಟೆಂಟ್ ಪಡೆದಿರುವುದಾಗಿ ಘೋಷಿಸಿದೆ. ಈ ವೇದಿಕೆಯು ಸೆಲ್–ಫ್ರೀ ಡಿಎನ್‌ಎ ವಿಶ್ಲೇಷಣೆಯ ಮೂಲಕ ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲೇ ಪತ್ತೆ ಮಾಡುತ್ತದೆ. ಅತ್ಯಾಧುನಿಕ ಸೀಕ್ವೆನ್ಸಿಂಗ್, ಗುಣಮಟ್ಟ ನಿಯಂತ್ರಣ, ಜೈವಿಕವಾಗಿ ಮಾಹಿತಿಯುಕ್ತ ಮೀಥೈಲೇಷನ್, ಫ್ರಾಗ್ಮೆಂಟೋಮಿಕ್ ಫೀಚರ್ ಎಕ್ಸ್‌ಟ್ರ್ಯಾಕ್ಷನ್ ಮತ್ತು ಮೆಷಿನ್ ಲರ್ನಿಂಗ್ ತಂತ್ರಜ್ಞಾನಗಳನ್ನು ಬಳಸಿ, ಕೇವಲ ರಕ್ತದ ಮಾದರಿಯಿಂದಲೇ ಕ್ಯಾನ್ಸರ್ ಎಲ್ಲಿದೆ ಎಂಬುದನ್ನು ಸಹ ಇದು ಪತ್ತೆಹಚ್ಚಬಲ್ಲದು.

ಕ್ಯಾನ್ಸರ್ ಉಂಟಾದಾಗ ಜೀನೋಮ್‌ನಾದ್ಯಂತ ಮೀಥೈಲೇಷನ್ ಮಾದರಿಗಳಲ್ಲಿ ವ್ಯಾಪಕ ಬದಲಾವಣೆಗಳಾಗುತ್ತವೆ. ಈ ಪೇಟೆಂಟ್‌ನಲ್ಲಿರುವ ಪ್ರಮುಖ ಆವಿಷ್ಕಾರವೆಂದರೆ, ಜೀನೋಮ್ ಸೀಕ್ವೆನ್ಸಿಂಗ್ ಬಳಸುವಾಗ ಅತಿ ಕಡಿಮೆ ನಷ್ಟ ಅಥವಾ ವೈಫಲ್ಯದೊಂದಿಗೆ ಈ ಮೀಥೈಲೇಷನ್ ಮಾದರಿಗಳನ್ನು ಪಡೆಯುವುದು. ಇದು ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ.

ಭಾರತದಲ್ಲಿ ಪ್ರತಿ ವರ್ಷ 1.5 ದಶಲಕ್ಷಕ್ಕೂ ಹೆಚ್ಚು ಹೊಸ ಕ್ಯಾನ್ಸರ್ ಪ್ರಕರಣಗಳು ದಾಖಲಾಗುತ್ತಿವೆ. ದುರದೃಷ್ಟವಶಾತ್, ಹೆಚ್ಚಿನ ರೋಗಿಗಳಲ್ಲಿ ಕ್ಯಾನ್ಸರ್ ಮುಂದುವರಿದ ಹಂತದಲ್ಲಿದ್ದಾಗ ಮಾತ್ರ ಪತ್ತೆಯಾಗುತ್ತದೆ, ಆಗ ಚಿಕಿತ್ಸೆಯ ಆಯ್ಕೆಗಳು ಸೀಮಿತವಾಗಿದ್ದು ಫಲಿತಾಂಶಗಳು ಅಷ್ಟೇನೂ ಉತ್ತಮವಾಗಿರುವುದಿಲ್ಲ. ಆರಂಭಿಕ ಪತ್ತೆಯು ಕ್ಯಾನ್ಸರ್ ಅನ್ನು ಮೊದಲ ಹಂತದಲ್ಲೇ ಗುರುತಿಸಲು ಸಹಾಯ ಮಾಡುತ್ತದೆ. ಪ್ರಸ್ತುತ ಶಿಫಾರಸು ಮಾಡಲಾದ ಸ್ಕ್ರೀನಿಂಗ್ ಪರೀಕ್ಷೆಗಳು ಕೆಲವೇ ಕೆಲವು ವಿಧದ ಕ್ಯಾನ್ಸರ್‌ಗಳಿಗೆ ಮಾತ್ರ ಸೀಮಿತವಾಗಿವೆ ಮತ್ತು ಅವುಗಳನ್ನು ಎಲ್ಲೆಡೆ ವಿಸ್ತರಿಸುವುದು ಕಷ್ಟ. ಆದರೆ, ಸೀಕ್ವೆನ್ಸಿಂಗ್ ವೆಚ್ಚ ಕಡಿಮೆಯಾಗುತ್ತಿರುವುದರಿಂದ, ಈ ಹೊಸ ಪೇಟೆಂಟ್ ತಂತ್ರಜ್ಞಾನವು ಸ್ಥಳೀಯ ಮೂಲಸೌಕರ್ಯಗಳನ್ನು ಹೆಚ್ಚಿಸುವ ಅಗತ್ಯವಿಲ್ಲದೇ, ದೊಡ್ಡ ಪ್ರಮಾಣದಲ್ಲಿ ಕ್ಯಾನ್ಸರ್ ಪತ್ತೆ ಹಚ್ಚುವಿಕೆಯನ್ನು ಸುಲಭಗೊಳಿಸುತ್ತದೆ.



> ಈ ಪೇಟೆಂಟ್ 'ಸೆಲ್-ಫ್ರೀ ಡಿಎನ್‌ಎ' (cfDNA) ವಿಶ್ಲೇಷಣಾ ವೇದಿಕೆಯನ್ನು ಒಳಗೊಂಡಿದ್ದು, ಕೇವಲ ರಕ್ತ ಪರೀಕ್ಷೆಯ ಮೂಲಕ ಕ್ಯಾನ್ಸರ್ ಅನ್ನು ಮೊದಲ ಹಂತದಲ್ಲೇ ಪತ್ತೆಗೆ ನೆರವಾಗಅದೆ.

ಈ ಕುರಿತು ಮಾತನಾಡಿದ ಸ್ಟ್ರಾಂಡ್ ಲೈಫ್ ಸೈನ್ಸಸ್‌ನ ಸಿಇಒ ರಮೇಶ್ ಹರಿಹರನ್, "ಕ್ಯಾನ್ಸರ್ ಭಾರತದ ಅತಿದೊಡ್ಡ ಸಾರ್ವಜನಿಕ ಆರೋಗ್ಯ ಸವಾಲುಗಳಲ್ಲಿ ಒಂದಾಗಿರುವುದರಿಂದ, ಅದನ್ನು ಆರಂಭಿಕ ಹಂತದಲ್ಲೇ ಪತ್ತೆ ಮಾಡುವುದು ಅತ್ಯಂತ ಅವಶ್ಯಕ.

ಈ ಪೇಟೆಂಟ್ ನಮ್ಮ ವೈಜ್ಞಾನಿಕ ಬದ್ಧತೆಯನ್ನು ತೋರಿಸುತ್ತದೆ. ರಕ್ತ ಪರೀಕ್ಷೆಯ ಮೂಲಕ ಕ್ಯಾನ್ಸರ್ ಪತ್ತೆ ಹಚ್ಚುವ ಎಐ ಆಧಾರಿತ 'ಲಿಕ್ವಿಡ್ ಬಯಾಪ್ಸಿ' ತಂತ್ರಜ್ಞಾನವು, ಕ್ಯಾನ್ಸರ್ ಸ್ಕ್ರೀನಿಂಗ್ ಅನ್ನು ಹೆಚ್ಚು ನಿಖರವಾಗಿ, ಸುಲಭವಾಗಿ ಮತ್ತು ಕೈಗೆಟುಕುವ ಬೆಲೆಯಲ್ಲಿ ಲಭ್ಯವಾಗುವಂತೆ ಮಾಡಲು ಒಂದು ಮಹತ್ವದ ಹೆಜ್ಜೆಯಾಗಿದೆ" ಎಂದು ಅವರು ವಿವರಿಸಿದರು.

ಈ ಪೇಟೆಂಟ್ ಸಂಸ್ಥೆಯ 'ಲಿಕ್ವಿಡ್ ಬಯಾಪ್ಸಿ' ವಿಭಾಗದ ಬೌದ್ಧಿಕ ಆಸ್ತಿಯನ್ನು ಮತ್ತಷ್ಟು ಬಲಪಡಿಸಿದ್ದು, ಎಐ ವಿಧಾನಗಳ ಮೂಲಕ ಆರಂಭಿಕ ಕ್ಯಾನ್ಸರ್ ಪತ್ತೆ ಮತ್ತು ನಿಖರವಾದ ಚಿಕಿತ್ಸೆಯನ್ನು ಒದಗಿಸುವ ಕಂಪನಿಯ ಕಾರ್ಯತಂತ್ರಕ್ಕೆ ಹೆಚ್ಚಿನ ಶಕ್ತಿ ನೀಡಿದೆ ಎಂದು ಅವರು ತಿಳಿಸಿದ್ದಾರೆ.

# ಹೆಮ್ಮೆಯ ಕನ್ನಡಿಗ ಪ್ರಶಸ್ತಿಯ ಗೌರವಕ್ಕೆ ಪಾತ್ರರಾದ ಡಾ ಹರೀಶ್.ಎಸ್




ಬೆಂಗಳೂರು

ಜನಪರ ಹೋರಾಟಗಾರ ಹಾಗೂ ಸಮಾಜ ಸೇವಕ ಡಾ ಹರೀಶ್.ಎಸ್ ಅವರಿಗೆ ಚಿತ್ರಸಂತೆ ಆಚೀವರ್ಸ್ ಆವಾರ್ಡ್ಸ್ 2026ರ ಹೆಮ್ಮೆಯ ಕನ್ನಡಿಗ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬೆಂಗಳೂರು ಸದಾಶಿವ ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನ್ನಡ ಚಲನಚಿತ್ರರಂಗದ ಹೆಸರಾಂತ ನಟಿ ದೀಪಿಕಾದಾಸ್ ಅವರು ಯಲಹಂಕ ಘಟಕದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ, ಸಮಾಜಸೇವಕ ಹಾಗೂ ಜನಪರ ಹೋರಾಟಗಾರ ಡಾ ಹರೀಶ್.ಎಸ್ ಅವರಿಗೆ ಚಿತ್ರಸಂತೆ ಆಚೀವರ್ಸ್ ಆವಾರ್ಡ್ಸ್ 2026ರ ಹೆಮ್ಮೆಯ ಕನ್ನಡಿಗ ಪ್ರಶಸ್ತಿ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಚಿತ್ರಸಂತೆ ಆಚೀವರ್ಸ್ ಆವಾರ್ಡ್ಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಗಿರೀಶ್ ಗೌಡ ಹಾಜರಿದ್ದರು.

# ಶರಣ ಸಾಹಿತ್ಯ ಸಮ್ಮೇಳನದಲ್ಲಿ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರುಗೆ ಸನ್ಮಾನ




ಬೆಂಗಳೂರು

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಬೆಂಗಳೂರಿನಲ್ಲಿ ಆಯೋಜಿಸಿದ್ದ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಮಾಧ್ಯಮ ಕ್ಷೇತ್ರಕ್ಕೆ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರನ್ನು ಸನ್ಮಾನಿಸಲಾಯಿತು.

ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನಾಧ್ಯಕ್ಷರಾದ ನಾಡೋಜ ಗೊ.ರು. ಚನ್ನಬಸಪ್ಪ ಹಾಗೂ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಶಿವಾನಂದ ತಗಡೂರು ಅವರನ್ನು ಅಭಿನಂದಿಸಿದರು.

ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾದ ನಾಗರಾಜಮೂರ್ತಿ ಅವರು ಮಾತನಾಡಿ, ಶಿವಾನಂದ ತಗಡೂರು ಅವರ ಪತ್ರಿಕೋದ್ಯಮ ಸೇವೆಯನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಶ್ರೀ ಚನ್ನಬಸವ ಸ್ವಾಮೀಜಿ, ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜ ಮೂರ್ತಿ, ಡಾ. ಅವಿನಾಶ್ ಕವಿ, ಪಾಲನೇತ್ರ ಸೇರಿದಂತೆ ಸಾಹಿತ್ಯ, ಸಾಂಸ್ಕೃತಿಕ ಹಾಗೂ ಮಾಧ್ಯಮ ಕ್ಷೇತ್ರದ ಗಣ್ಯರು ಉಪಸ್ಥಿತರಿದ್ದರು.



ಬಳ್ಳಾರಿ

ಮಾಜಿ ಶಾಸಕರು ಹಾಗೂ ರೈತ ಹೋರಾಟಗಾರ ದಿವಂಗತ ಸಿ.ಎಂ. ರೇವಣ್ಣ ಸಿದ್ಧಯ್ಯ ನವರ ಹೆಸರಿನಲ್ಲಿ ಕೊಡಮಾಡುವ ಮೊಟ್ಟ ಮೊದಲ ರಾಜ್ಯ ಮಟ್ಟದ ರೈತ ಪ್ರಶಸ್ತಿಗೆ ಮಂಡ್ಯ ಜಿಲ್ಲೆ ಕಿರುಗಾವಲಿನ ಪ್ರಗತಿಪರ ರೈತ ಸಯ್ಯದ್ ಘನಿ ಆಯ್ಕೆಯಾಗಿದ್ದಾರೆ.

ಸಯ್ಯದ್ ಅವರು ಸುಮಾರು 1360ಕ್ಕೂ ಹೆಚ್ಚು ವಿಧದ ಭತ್ತದ ತಳಿಗಳಲ್ಲಿ ಸಂಶೋಧನೆ ಮಾಡಿದ್ದಾರೆ. ರೇವಣ ಸಿದ್ಧಯ್ಯನವರ ಹೆಸರಲ್ಲಿ ಪ್ರತಿ ವರ್ಷ ಈ ಪ್ರಶಸ್ತಿಯನ್ನು ಕೊಡಮಾಡಲಾಗುತ್ತದೆ.

ಈ ಬಾರಿ ಸಿರಿಗೇರಿಯಲ್ಲಿ ಜರುಗಲಿರುವ ರೇವಣ ಸಿದ್ಧಯ್ಯನವರ ಜನ್ಮ ಶತಮಾನೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ದಿ.ರೇವಣಸಿದ್ಧಯ್ಯ ಜನ್ಮ ಶತಮಾನೋತ್ಸವ ಸಮಿತಿ ತಿಳಿಸಿದೆ.



ಮುಳಬಾಗಿಲು ನಗರದ ಜೋಗ್ ಪಾಳ್ಯದ ನಿವಾಸಿಗಳು, ಹಾಲಿ ಬೃಹತ್ ಬೆಂಗಳೂರು ಮಹಾನಗರದ ಚಾಮರಾಜಪೇಟೆಯಲ್ಲಿ ವಾಸವಾಗಿರುವ ವಿದ್ವಾನ್ ಮೋಹನಾಚಾರ್ ಮತ್ತು ಮೈ ತೇಯಿ ಅವರು ಪುತ್ರ ವಿದ್ವಾನ್ ಎಸ್.ಎಂ. ಪುಷಕರಾಚಾರ್ ಮತ್ತು ಬಳ್ಳಾರಿ ನಿವಾಸಿಗಳು ಗೋವಿಂದಾಚಾರ್ಯ ಜೋಶಿ ಹಾಗೂ ಪವಿತ್ರ ಅವರು ಮಗಳು ಹರಿಪ್ರಿಯಾ ರವರ ವಿವಾಹ ಮಹೋತ್ಸವ ಗುರುವಾರದಂದು ಬೆಂಗಳೂರು ಮಹಾನಗರದ ಸೀತಾಪತಿ ಅಗ್ರಹಾರದಲ್ಲಿರುವ ಶ್ರೀ ಲಕ್ಷ್ಮೀ ಸತ್ಯನಾರಾಯಣ ದೇವಾಲಯದ (ನಂದಗುಡಿ) ಹಾಲ್‌ನಲ್ಲಿ ವಿಜೃಂಭಣೆಯಿಂದ ನಡೆಯಿತು.ಉಡುಪಿಯ ಪಲಿಮಾರು ಮಠದ ಶ್ರೀ ವಿದ್ಯಾ ದೀ ತೀರ್ಥ ಸ್ವಾಮೀಜಿ ಹಾಗೂ ಕಿರಿಯ ಶ್ರೀಗಳಾದ ಶ್ರೀ ವಿದ್ಯಾ ರಾಜೇಶ್ವರ ತೀರ್ಥರು ನೂತನ ದಂಪತಿಗಳಿಗೆ ಆಶೀರ್ವದಿಸಿದರು.

15/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಾರಿಗೆ ಸಚಿವ ಭೈರತಿ ಸುರೇಶ್ ಬಸ್ ರೈಡ್: ಬಿಎಂಟಿಸಿಯಿಂದ ಹಲವು ಕ್ರಮ

ಬೆಂಗಳೂರು

ಸಾರಿಗೆ ಸಚಿವರಾಗಿ ಅಧಿಕಾರವಹಿಸಿಕೊಂಡಿರುವ ಭೈರತಿ ಸುರೇಶ್ ಫುಲ್ ಅಲರ್ಟ್ ಆಗಿದ್ದಾರೆ. ತಾವೇ ಖುದ್ದು ಫೀಲ್ಡಿಗಿಳಿದಿದ್ದಾರೆ. ಬೆಂಗಳೂರಿನಲ್ಲಿ ಬಿಎಂಟಿಸಿ ಬಸ್‌ನಲ್ಲಿ ಮಾಸ್ಕ್ ಹಾಕಿಕೊಂಡು ಸಂಚಾರ ಮಾಡುವ ಮೂಲಕ ಭೈರತಿ ಸುರೇಶ್ ರಿಯಾಲಿಟಿ ಚೆಕ್ ಮಾಡಿದರು. ಡ್ರೈವರ್, ಕಂಡಕ್ಟರ್ ಕಳ್ಳಾಟ, ಟಿಕೆಟ್ ಕಳ್ಳಾಟದ ಬಗ್ಗೆ ತಾವೇ ಇಂಚಿಂಚೂ ಪರಿಶೀಲಿಸಿ ರಿಪೋರ್ಟ್ ಪಡೆದಿದ್ದಾರೆ.



**ಕಂಡಕ್ಟರ್‌ಗೆ ಭೈರತಿ ಸುರೇಶ್ ಫುಲ್ ತರಾಟೆ**

ಬೆಂಗಳೂರಿನ ಭೂಪಸಂದ್ರದಿಂದ ಹೆಬ್ಬಾಳಕ್ಕೆ ಮಾಸ್ಕ್ ಧರಿಸಿದೇ ಬಿಎಂಟಿಸಿ ಬಸ್‌ನಲ್ಲಿ ಸಂಚಾರ ಮಾಡಿದ ಸಚಿವ ಭೈರತಿ ಸುರೇಶ್, ಎರಡು ಟಿಕೆಟ್ ಕೊಡುವಂತೆ 100 ರೂ ಕಂಡಕ್ಟರ್‌ಗೆ ಕೊಟ್ಟಿದ್ದಾರೆ. ಈ ವೇಳೆ ಚಿಲ್ಲರೆ ಇಲ್ಲ ಅಂದರೆ ಕೆಳಗಡೆ ಇಳೀರಿ ಅಂತಾ ಕಂಡಕ್ಟರ್ ಹೇಳಿದ್ದಾರೆ. ಇದಕ್ಕೆ ಕಂಡಕ್ಟರ್‌ಗೆ ಸಚಿವರು ಫುಲ್ ತರಾಟೆ ತೆಗೆದುಕೊಂಡಿದ್ದಾರೆ.

ಇನ್ನು ಸಾರ್ವನಿಕರು ಬಸ್ ಸ್ಟಾಪ್‌ನಲ್ಲಿ ಬಸ್ ನನ್ನ ನಿಲ್ಲಿಸಿ ಅಂತಾ ಮನವಿ ಮಾಡಿದರೂ, ಕಂಡಕ್ಟರ್ ನಿಲ್ಲಿಸಿಲ್ಲ. ಇದನ್ನೇ ಗಮನಿಸಿದ ಸಾರಿಗೆ ಸಚಿವ ಭೈರತಿ ಸುರೇಶ್ ವಾರ್ನಿಂಗ್ ಕೊಟ್ಟಿದ್ದಾರೆ. ಬೆಂಗಳೂರಿನಲ್ಲಿ ಹಲವು ಕಡೆಗಳಲ್ಲಿ ಬಿಎಂಟಿಸ್ ಬಸ್ ಕಂಡಕ್ಟರ್, ಡ್ರೈವರ್‌ಗಳ ಕಳ್ಳಾಟ ಬಗ್ಗೆ ಜಯಮಹಲ್, ಹೆಣ್ಣೂರು ಡಿಪೋ ಸೇರಿ ಹಲವೆಡೆ ಸಾರಿಗೆ ಸಚಿವರು ಪರಿಶೀಲನೆ ಮಾಡಿದ್ದಾರೆ. ಬಸ್ ಡಿಪೋ ವ್ಯವಸ್ಥೆ ಬಗ್ಗೆ ಮಾಹಿತಿ ಪಡೆದ ಭೈರತಿ ಸುರೇಶ್, ಕೆಲ ಅಧಿಕಾರಿಗಳ ಅಮಾನತಿಗೆ ಸೂಚಿಸಿದ್ದಾರೆ.

**ಬಿಎಂಟಿಸಿ ನಿಗಮದಿಂದ ಖಡಕ್ ಸೂಚನೆ**

ಇನ್ನು ಬಿಎಂಟಿಸಿ ನಿಗಮ ಕೂಡ ಮಾಧ್ಯಮ ಪ್ರಕಟಣೆ ಹೊರಡಿಸಿ ಖಡಕ್ ಸೂಚನೆ ಕೊಟ್ಟಿದೆ. ಚಿಲ್ಲರೆ ಇಲ್ಲದ ಕಾರಣಕ್ಕೆ ಪ್ರಯಾಣಿಕರನ್ನ ಬಸ್‌ನಿಂದ ಯಾರೂ ಕೂಡ ಇಳಿಸಬಾರದು, ಪ್ರಯಾಣ ನಿರಾಕರಿಸುವುದನ್ನು ಸಹಿಸಲಾಗುವುದಿಲ್ಲ. ಇದಷ್ಟೇ ಅಲ್ಲ, ಎಲ್ಲಾ ಚಾಲಕರು ನಿಗದಿತ ಬಸ್ ನಿಲ್ದಾಣಗಳಲ್ಲಿಯೇ ಬಸ್‌ಗಳನ್ನ ನಿಲ್ಲಿಸಬೇಕು. ಚಾಲಕರು ಮತ್ತು ನಿರ್ವಾಹಕರು ಪ್ರಯಾಣಿಕರೊಂದಿಗೆ ಸೌಜನ್ಯಯುತವಾಗಿ ವರ್ತಿಸಬೇಕಿದೆ. ಯುಪಿಐ ಪಾವತಿ ಸೌಲಭ್ಯ ಬಳಸಿಕೊಳ್ಳುವಂತೆ ತಿಳಿಸಬೇಕು ಎಂದು ಸೂಚಿಸಲಾಗಿದೆ.

**ಚಾಲಕರು ಹಾಗೂ ನಿರ್ವಾಹಕರಿಗೆ ಸಾಫ್ಟ್ ಸ್ಕಿಲ್ಸ್ ತರಬೇತಿ**

ಇಟಿಎಂ ಯಂತ್ರಗಳಲ್ಲಿ ನಿಗದಿತ ನಿಲ್ದಾಣಗಳು ಆಗಿ ಪ್ರತಿಬಿಂಬಿಸದಿರುವ ಬಸ್ ಶೆಲ್ಟರ್‌ಗಳನ್ನು ಎಲ್ಲಾ ವಿಭಾಗೀಯ ಅಡಿ ನಿಯಂತ್ರಣಾಧಿಕಾರಿಗಳು ತುರ್ತು ಆದ್ಯತೆಯ ಮೇರೆಗೆ ಗುರುತಿಸಿ ವರದಿ ಸಲ್ಲಿಸಬೇಕು. ಅಂತಹ ನಿಲ್ದಾಣಗಳನ್ನು ಇಟಿಎಂ ವ್ಯವಸ್ಥೆಯಲ್ಲಿ ತಕ್ಷಣ ಸೇರ್ಪಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಸಾರ್ವಜನಿಕರಿಂದ ಪದೇ ಪದೇ ದೂರುಗಳು ಬರುತ್ತಿರುವ ಚಾಲಕರು ಹಾಗೂ ನಿರ್ವಾಹಕರನ್ನು ಗುರುತಿಸಿ, ಅವರಿಗೆ ವಡ್ಡರಹಳ್ಳಿ ತರಬೇತಿ ಕೇಂದ್ರದಲ್ಲಿ ಸಾಫ್ಟ್ ಸ್ಕಿಲ್ಸ್ ತರಬೇತಿ ನೀಡಲಾಗುವುದು. ವಿಭಾಗೀಯ ಸಂಚಾರ ಅಧಿಕಾರಿಗಳು ಹಾಗೂ ಘಟಕ ವ್ಯವಸ್ಥಾಪಕರು, ಪ್ರತಿದಿನ ಘಟಕಗಳಿಗೆ ಭೇಟಿ ನೀಡಿ ಚಾಲಕ–ನಿರ್ವಾಹಕರಿಗೆ ರಸ್ತೆ ಸುರಕ್ಷತೆ, ನಿಗದಿತ ನಿಲ್ದಾಣಗಳಲ್ಲಿ, ಬಸ್ ನಿಲ್ಲಿಸುವ ಕುರಿತು ನಿರಂತರ ಮಾರ್ಗದರ್ಶನ ನೀಡಬೇಕು. ಪ್ರಯಾಣಿಕರಿಂದ ಪ್ರಶಂಸೆ ಪಡೆದಿರುವ, ಉತ್ತಮ ಸೇವೆ ಸಲ್ಲಿಸುವ ಚಾಲಕರು ಹಾಗೂ ನಿರ್ವಾಹಕರನ್ನು ಗುರುತಿಸಿ, ಅವರಿಗೆ ಕೇಂದ್ರ ಕಚೇರಿಯಿಂದ ಪ್ರಶಂಸನಾ ಪತ್ರ ನೀಡಿ ಗೌರವಿಸಬೇಕು ಎಂದು ತಿಳಿಸಲಾಗಿದೆ.

# ಎಲೆಕ್ಟ್ರಿಕ್ ಬಸ್‌ಗಳ ಖರೀದಿ ವಿಳಂಬಕ್ಕೆ ಜೆಡಿಎಸ್ ಆಕ್ರೋಶ

ಬೆಂಗಳೂರು

ಕೇಂದ್ರ ಸರ್ಕಾರದ ಪಿ.ಎಂ– ಇ ಡ್ರೈವ್ ಯೋಜನೆಯಡಿ ಬೆಂಗಳೂರಿಗೆ ಮಂಜೂರಾಗಿರುವ 4,500 ಎಲೆಕ್ಟ್ರಿಕ್ ಬಸ್‌ಗಳ ಯೋಜನೆಯನ್ನು ರಾಜ್ಯ ಸರ್ಕಾರ ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿದೆ ಎಂದು ಜಾತ್ಯತೀತ ಜನತಾ ದಳ ಆರೋಪಿಸಿದೆ. ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಕೇಂದ್ರದ ಭಾರೀ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದಲ್ಲಿ 1,505 ಕೋಟಿ ರೂ. ಸಹಾಯಧನ ದೊಂದಿಗೆ 4,500 ಎಲೆಕ್ಟ್ರಿಕ್ ಬಸ್‌ಗಳು ಬೆಂಗಳೂರಿಗೆ ಮಂಜೂರಾಗಿದ್ದವು. 2025ರಲ್ಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದರೂ, ರಾಜ್ಯ ಸರ್ಕಾರ ಇದುವರೆಗೆ ಸಚಿವ ಸಂಪುಟದ ಅನುಮೋದನೆ ನೀಡದೇ ಯೋಜನೆಯನ್ನು ವಿಳಂಬ ಮಾಡುತ್ತಿದೆ ಎಂದು ಆರೋಪಿಸಿದೆ.

ಹೈದರಾಬಾದ್, ಸೂರತ್ ಹಾಗೂ ಅಹಮದಾಬಾದ್ ನಗರಗಳು ಈಗಾಗಲೇ ಕಾರ್ಯಾದೇಶ ನೀಡಿ ಯೋಜನೆ ಅನುಷ್ಠಾನದಲ್ಲಿ ಮುಂದುವರಿದಿವೆ. ಆದರೆ, ಕರ್ನಾಟಕದ ಕಾಂಗ್ರೆಸ್ ಸರ್ಕಾರ ಕಡತಗಳನ್ನು ಬಾಕಿ ಇಟ್ಟು ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ನಿರ್ಲಕ್ಷಿಸುತ್ತಿದೆ ಎಂದು ಟೀಕಿಸಿದೆ.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ರಾಜ್ಯದ ಅಭಿವೃದ್ಧಿಗಾಗಿ ಪ್ರಯತ್ನಿಸುತ್ತಿದ್ದರೂ, ಕಾಂಗ್ರೆಸ್ ಸರ್ಕಾರ ರಾಜಕೀಯ ದ್ವೇಷದಿಂದ ಯೋಜನೆಗೆ ಅಡ್ಡಿಯಾಗುತ್ತಿದೆ ಎಂದು ಕಿಡಿಕಾರಿದೆ.

ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಪ್ರಶ್ನಿಸಿರುವ ಜೆಡಿಎಸ್, "ಬೆಂಗಳೂರು ಜನರಿಗೆ ಎಲೆಕ್ಟ್ರಿಕ್ ಬಸ್‌ಗಳು ಬೇಡವೇ? ಕೇಂದ್ರ ಸರ್ಕಾರ ನೀಡಿರುವ ಅನುದಾನವನ್ನು ಬಳಸಿಕೊಳ್ಳದಿರುವುದಕ್ಕೆ ಕಾರಣವೇನು? ಯೋಜನೆ ಬೇರೆ ರಾಜ್ಯಗಳಿಗೆ ಹೋದರೆ ಅದರ ಹೊಣೆ ಯಾರು?" ಎಂದು ಪ್ರಶ್ನಿಸಿದೆ.

# ಸಮಗ್ರ ಶಿಕ್ಷಣ ಯೋಜನೆಯಡಿ ಎಲ್.ಕೆ.ಜಿ, ಯು.ಕೆ.ಜಿಗೆ ಉತ್ತಮ ಸ್ಪಂದನೆ

ಬೆಂಗಳೂರು

ರಾಜ್ಯ ಸರ್ಕಾರ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳನ್ನು ಆರಂಭಿಸಿದ್ದು, ಸಾಮಾನ್ಯ ರೈತಾಪಿ ವರ್ಗ, ಕಾರ್ಮಿಕರ ಮತ್ತು ಬಡ ಮಧ್ಯಮ ವರ್ಗದ ಮಕ್ಕಳ ಪಾಲಿಗೆ ವರದಾನವಾಗಿ ಪರಿಣಮಿಸಿದೆ. ಸರ್ಕಾರದ ಇಂತಹ ವಿನೂತನ ಪ್ರಯತ್ನಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ಸರ್ಕಾರದ ಈ ಉಪಕ್ರಮಕ್ಕೆ ಚಿತ್ರದುರ್ಗ ಜಿಲ್ಲೆಯಲ್ಲಿ ಪೋಷಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿಗೆ ನಿರೀಕ್ಷೆಗೂ ಮೀರಿ ದಾಖಲಾತಿ ನಡೆದಿದೆ.

ಕಳೆದ ವರ್ಷದಿಂದ ಈ ತರಗತಿಗಳು ಅಧಿಕೃತವಾಗಿ ಆರಂಭವಾಗಿದ್ದು ಎಲ್‌ಕೆಜಿ, ಯುಕೆಜಿಗಳಿಗೆ ಪ್ರತ್ಯೇಕ ಶಿಕ್ಷಕರನ್ನು ನೇಮಿಸಲಾಗಿದೆ. ಮಕ್ಕಳಿಗೆ ಅಗತ್ಯವಿರುವ ಪೀಠೋಪಕರಣ, ಮಕ್ಕಳ ಸ್ನೇಹಿ ಕೊಠಡಿಗಳನ್ನು ಸಜ್ಜುಗೊಳಿಸಲಾಗಿದೆ. ಈ ವರ್ಷದಿಂದ ಅಧಿಕೃತವಾಗಿ ಬಾಲ ಚೇತನ ಪಠ್ಯವನ್ನು ಕೂಡ ಒದಗಿಸಲಾಗಿದೆ.

ಚಿತ್ರದುರ್ಗ ತಾಲೂಕಿನ ಗುತ್ತಿನಾಡು ಕುವೆಂಪು ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎಲ್‌ಕೆಜಿಗೆ 28 ಹಾಗೂ ಯುಕೆಜಿಯಲ್ಲಿ 36 ಮಕ್ಕಳು ನೋಂದಣಿಯಾಗಿದ್ದಾರೆ. 1 ರಿಂದ 8ನೇ ತರಗತಿವರೆಗೆ 370ಕ್ಕೂ ಹೆಚ್ಚು ಮಕ್ಕಳು ಅಧ್ಯಯನ ಮಾಡುತ್ತಿದ್ದಾರೆ.

ಈ ಕುರಿತು ಪೋಷಕರಾದ ನೇತ್ರಾವತಿ ಮಾತನಾಡಿ, ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಕಲ್ಪಿಸಲಾಗುತ್ತಿದ್ದು, ವಿದ್ಯಾರ್ಥಿಗಳ ಸರ್ವತೋಮುಖ ಏಳಿಗೆಗೆ ಅನುಕೂಲವಾಗಿದೆ ಎಂದರು.

ಮತ್ತೋರ್ವ ಪೋಷಕರಾದ ಮೀನಾಕ್ಷಿ ಮಾತನಾಡಿ, ಖಾಸಗಿ ಶಾಲೆಗಳಲ್ಲಿ ಶುಲ್ಕ ದುಬಾರಿ ಎನ್ನುವ ಕಾರಣಕ್ಕೆ ತಮ್ಮ ಮೂವರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಲಾಗಿದೆ. ಮಕ್ಕಳು ಚೆನ್ನಾಗಿ ಕಲಿಯುತ್ತಿದ್ದಾರೆ ಎಂದು ತಿಳಿಸಿದರು.

ಪೋಷಕ ಮಹಂತೇಶ್ ಮಾತನಾಡಿ, ಸರ್ಕಾರಿ ಶಾಲೆಯ ಎಲ್ ಕೆಜಿ ಯುಕೆಜಿ ತರಗತಿಗಳು ಮಧ್ಯಮ ವರ್ಗದ ಕುಟುಂಬಗಳಿಗೆ ವರದಾನವಾಗಿದೆ ಎಂದರು. ಶಾಲೆಯ – ಎಸ್‌ಡಿಎಂಸಿ ಅಧ್ಯಕ್ಷ ಈಶ್ವರಪ್ಪ, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಹಾಗೂ ಗ್ರಾಮಸ್ಥರ ಸಹಕಾರದಿಂದ ಶಾಲೆಯನ್ನು ಅಭಿವೃದ್ಧಿಪಡಿಸಲಾಗಿದೆ. ಎಲ್‌ಕೆಜಿ, ಯುಕೆಜಿ, ತರಗತಿ ಆರಂಭಿಸಿರುವುದರಿಂದ ಮಕ್ಕಳ ಸಂಖ್ಯೆ ಹೆಚ್ಚಾಗಿದೆ ಎಂದರು.

ಚಿತ್ರದುರ್ಗ ತಾಲೂಕಿನ ಗುತ್ತಿನಾಡು ಕುವೆಂಪು ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕ ಮಲ್ಲಿಕಾರ್ಜುನ್ ಮಾತನಾಡಿ, ಕಳೆದ ವರ್ಷದಿಂದ ಸರ್ಕಾರವೇ ಎಲ್‌ಕೆಜಿ, ಯುಕೆಜಿ ಆರಂಭಿಸಿರುವುದು ತುಂಬಾ ಅನುಕೂಲವಾಗಿದೆ. ಸುತ್ತಮುತ್ತಲ ಸುಮಾರು 16 ಹಳ್ಳಿಗಳ ಮಕ್ಕಳು ಇಲ್ಲಿಗೆ ಬಂದು ಓದುತ್ತಿದ್ದಾರೆ ಎಂದರು.

# ಇಂದಿನಿಂದ ಜೆಡಿಎಸ್ ಬರ ಪೀಡಿತ ಪ್ರದೇಶಗಳ ಅಧ್ಯಯನ

ಬೆಂಗಳೂರು

ರಾಜ್ಯದಲ್ಲಿ 2026ರ ಮುಂಗಾರು ವೈಪರೀತ್ಯದಿಂದ ಒಂದೆಡೆ ಭಾರಿ ಮಳೆ–ಪ್ರವಾಹದಿಂದ ಅಪಾರ ಹಾನಿಯಾಗಿದ್ದರೆ, ಮತ್ತೊಂದೆಡೆ ಶೇ. 40 ರಿಂದ 43 ರಷ್ಟು ಮಳೆ ಕೊರತೆಯಿಂದ ಬರಗಾಲದ ಛಾಯೆ ಆವರಿಸಿದೆ.



ಕೆಲವು ಜಿಲ್ಲೆಗಳಲ್ಲಿ ಮಳೆ ಕೊರತೆಯಿಂದ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ನೆಲವನ್ನೇ ನಂಬಿರುವ ಅನ್ನದಾತ ಕಣ್ಣೀರು ಸುರಿಸುತ್ತಿರುವುದು ನಮ್ಮ ಹೃದಯವನ್ನು ಕಲಕಿದೆ.

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ ಜನತಾದಳ (ಜಾತ್ಯತೀತ) ಪಕ್ಷದಿಂದ ವಿಶೇಷ ಅಧ್ಯಯನ ತಂಡಗಳನ್ನು ರಚಿಸಲಾಗಿದೆ.

ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ಜುಲೈ 13 ರಿಂದ 15 ರವರೆಗೆ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಲಿದ್ದಾರೆ.

ಜುಲೈ 14ರಂದು ವಿಜಯಪುರ ಜಿಲ್ಲೆಯ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಅಲ್ಲಿಯೇ ಸುದ್ದಿಗೋಷ್ಠಿ ನಡೆಸಲಿದ್ದಾರೆ.

ನಂತರ ಜುಲೈ 15ರಂದು ಬಾಗಲಕೋಟೆ ಬಾದಾಮಿಯಲ್ಲಿ ರೈತರನ್ನು ಭೇಟಿ ಮಾಡಲಿದ್ದಾರೆ.

ನಮ್ಮ ತಂಡಗಳು ನೆರೆ ಹಾಗೂ ಬರ ಪೀಡಿತ ಪ್ರದೇಶಗಳಿಗೆ ನೇರವಾಗಿ ಭೇಟಿ ನೀಡಿ, ಸಂತ್ರಸ್ತ ರೈತ ಕುಟುಂಬಗಳನ್ನು ಸಂಪರ್ಕಿಸಿ ಅವರ ಸಂಕಷ್ಟಗಳನ್ನು ಆಲಿಸಲಿವೆ. ರೈತರಿಗೆ ಅರ್ಹ ಪರಿಹಾರ ಸಿಗುವವರೆಗೂ ನಾವು ಹೋರಾಡಲಿದ್ದೇವೆ ಎಂದು ತಿಳಿಸಿದರು.

ನಿಖಿಲ್ ಕುಮಾರಸ್ವಾಮಿ ಅವರೊಂದಿಗೆ, ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ಅಧ್ಯಯನ ತಂಡದ ಅಧ್ಯಕ್ಷರಾದ ಬಂಡೆಪ್ಪ ಕಾಶಂಪೂರ್, ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ, ಶಾಸಕರಾದ ಶರಣಗೌಡ ಕಂದಕೂರ್, ಭೀಮನಗೌಡ ಬಸನಗೌಡ ಪಾಟೀಲ್, ಕೆ. ನೇಮಿರಾಜ್ ನಾಯ್ಡು,

ಶ್ರೀಮತಿ ಕರೆಮ್ಮ ನಾಯ್ಡು,ರಾಜಾ ವೆಂಕಟಪ್ಪ ನಾಯಕ್, ದೊಡ್ಡಪ್ಪಗೌಡ ಪಾಟೀಲ್, ಸೋಮನಗೌಡ ಪಾಟೀಲ್ ಸೇರಿ ಒಟ್ಟು 21 ಜನರ ತಂಡ ಭಾಗಿಯಾಗಲಿದ್ದಾರೆ.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುಕೂಲವಾಗಲು ಖಾಯಂ ನಿವಾಸ ಪ್ರಮಾಣಪತ್ರ:

ಬೆಂಗಳೂರು

ಚುನಾವಣಾ ಆಯೋಗದವರು ಎಸ್‌ಐಆರ್ ಪ್ರಕ್ರಿಯೆಯಲ್ಲಿ 13 ದಾಖಲೆಯನ್ನು ಕೇಳುತ್ತಾರೆ. ಅದರಲ್ಲಿ 'ನೀವು ಸ್ವಂತ ಮನೆಯಲ್ಲಿ ಇದ್ದೀರಾ?' ಎಂಬ ಪ್ರಶ್ನೆಯೂ ಇದೆ. ಹಾಗಾಗಿ ನಾವು ಖಾಯಂ ನಿವಾಸ ಪ್ರಮಾಣಪತ್ರವನ್ನು ನೀಡಲು ಕ್ರಮ ವಹಿಸುವುದಾಗಿ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈವರೆಗೆ ಕೇಂದ್ರ ಸರ್ಕಾರ ಯಾವುದೇ ಪ್ರಮಾಣಪತ್ರಗಳನ್ನು ನೀಡಿಲ್ಲ. ಜಾತಿ ಪ್ರಮಾಣ ಪತ್ರವನ್ನು ಕೂಡ ರಾಜ್ಯ ಸರ್ಕಾರವೇ ನೀಡಿದೆ. ನಾವು ಆಧಾರ್ ಕಾರ್ಡ್ ಮತ್ತು ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಖಾಯಂ ನಿವಾಸ ಪ್ರಮಾಣಪತ್ರ ನೀಡುತ್ತೇವೆ. ಅದರಲ್ಲಿ ತಪ್ಪೇನಿದೆ? ಎಲ್ಲದರಲ್ಲೂ ಬಿಜೆಪಿ ರಾಜಕಾರಣ ಮಾಡುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈಗಾಗಲೇ ಸುಮಾರು 50 ರಿಂದ 60 ಸಾವಿರ ವಿದ್ಯಾರ್ಥಿಗಳಿಗೆ ಜಾತಿ ಪ್ರಮಾಣಪತ್ರ ಇಲ್ಲದೆ ಸಿಇಟಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಸಮಸ್ಯೆಯಾಗಿದೆ. ಈಗ ನಾವು ಖಾಯಂ ಪ್ರಮಾಣ ಪತ್ರದಲ್ಲಿ ಜಾತಿಯನ್ನು ಉಲ್ಲೇಖಿಸಿದರೆ ಪರೀಕ್ಷೆ ಬರೆಯುವ ಮಕ್ಕಳಿಗೆ ಅನುಕೂಲವಾಗುತ್ತದೆ. ಬಿಜೆಪಿಗರು ಎಲ್ಲವನ್ನೂ ರಾಜಕೀಯ ದೃಷ್ಟಿಯಿಂದ ನೋಡುವುದು ಸರಿಯಲ್ಲ ಎಂದು ಹೇಳಿದರು.

ಬಾಂಗ್ಲಾ ದೇಶದವರಿಗೂ ಖಾಯಂ ನಿವೇಶನ ಪತ್ರ ನೀಡಲಾಗುತ್ತಿದೆ ಎಂಬ ಬಿಜೆಪಿ ಆರೋಪ ಸತ್ಯಕ್ಕೆ ದೂರವಾದದ್ದು. ಬಾಂಗ್ಲಾ ದೇಶದ ಪ್ರಶ್ನೆಯೇ ಇಲ್ಲಿ ಬರುವುದಿಲ್ಲ. ಇದು ರಾಷ್ಟ್ರೀಯ ಸಮಸ್ಯೆ. ರಾಜ್ಯ ಸರ್ಕಾರ ಬಾಂಗ್ಲಾದೇಶದವರಿಗೆ ಪೌರತ್ವ ಕೊಡಲು ಆಗುತ್ತದೆಯೇ? ಒಂದು ವೇಳೆ ಬಾಂಗ್ಲಾದೇಶದವರು ನಮ್ಮ ದೇಶದವರನ್ನು ಮದುವೆಯಾದರೆ, ಆಗ ಅದಕ್ಕೊಂದು ನಿಬಂಧನೆಯಿದೆ. ಅದು ಬಿಟ್ಟು ಬಾಂಗ್ಲಾದೇಶದವರಿಗಾಗಲಿ ಅಥವಾ ಬೇರೆ ದೇಶದವರಿಗಾಗಲಿ ಪೌರತ್ವವನ್ನು ರಾಜ್ಯ ಸರ್ಕಾರ ಕೊಡಲು ಆಗುವುದಿಲ್ಲ ಎಂದು ಈ ವೇಳೆ ಸ್ಪಷ್ಟಪಡಿಸಿದರು.

ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿರುವಾಗಲೇ ಜಿಬಿಎ ಚುನಾವಣೆ ಮಾಡಬಹುದು. ಆದರೆ ಚುನಾವಣಾ ಆಯೋಗ ಅದಕ್ಕೆ ಅನುಮತಿ ನೀಡುವುದಿಲ್ಲ. ವಿಶೇಷ ಅನುಮತಿ ನೀಡಿದರೆ ನಾವು ಚುನಾವಣೆಯನ್ನು ಮಾಡಲು ಸಿದ್ಧರಿದ್ದೇವೆ ಎಂದರು.


ಇ–ಪೌತಿ, ಹಕ್ಕುಪತ್ರಗಳ ಕೆಲಸಗಳಿಗೆ ವೇಗ ನೀಡಲು ಜುಲೈ 12, ಭಾನುವಾರ ಎಲ್ಲಾ ಉಪ ನೋಂದಣಿ ಕಚೇರಿಗಳು ಕಾರ್ಯನಿರ್ವಹಿಸುವಂತೆ ಆದೇಶಿಸಲಾಗಿದೆ ಎಂದ ಅವರು, ಸಚಿವ ಸಂಪುಟ ವಿಸ್ತರಣೆಯ ಬಗ್ಗೆ ಹೈಕಮಾಂಡ್ ತೀರ್ಮಾನಿಸುವುದಾಗಿ ತಿಳಿಸಿದರು.

ನಿನ್ನೆ ನಡೆದ ದಸರಾ ಆಚರಣೆ ಪೂರ್ವಭಾವಿ ಸಭೆಯಲ್ಲಿ ಸರಳ ದಸರಾ ಆಚರಿಸುವ ಬಗ್ಗೆ ಅಭಿಪ್ರಾಯಗಳು ಬಂದವು. ಆದರೆ, ದಸರಾ ನಮ್ಮ ಸಂಸ್ಕೃತಿ, ಪರಂಪರೆ ಇತಿಹಾಸವನ್ನು ಸಾರುವ ಹಬ್ಬ. ಇಂದಿನ ಮಕ್ಕಳಿಗೆ ಇತಿಹಾಸದ ಬಗ್ಗೆ ಅರಿವು ಮೂಡಿಸುವುದು ನಮ್ಮ ಕರ್ತವ್ಯ. ನಮ್ಮ ಮುಂದಿನ ಪೀಳಿಗೆಗೆ ನಮ್ಮ ನಾಡಿನ ಪರಂಪರೆಯನ್ನು ತಿಳಿಸಿಕೊಡುವ ಕೆಲಸ ನಮ್ಮಿಂದ ಆಗಬೇಕು. ನಮ್ಮ ಹಿಂದೂ ಸಂಸ್ಕೃತಿಯ ಆಚರಣೆ ಎಲ್ಲರಿಗೂ ತಿಳಿಯಬೇಕು. ಹಾಗಾಗಿ ದಸರಾವನ್ನು ಸರಳವಾಗಿ ಆಚರಿಸುವುದು ಬೇಡ, ವಿಜೃಂಭಣೆಯಿಂದ ಆಚರಿಸೋಣ ಎಂದು ಸಭೆಯಲ್ಲಿ ಸಲಹೆ ನೀಡಿರುವುದಾಗಿ ಹೇಳಿದರು.

ಮೈಸೂರು ದಸರಾದಲ್ಲಿ ಕಂಬಳ ನಡೆಸುವುದರ ಬಗೆಗಿನ ಪ್ರಶ್ನೆಗೆ ಉತ್ತರಿಸಿ, ಎಲ್ಲರೂ ಅವರವರ ಅಭಿಪ್ರಾಯಗಳನ್ನು ಹೇಳಿಕೊಂಡಿದ್ದಾರೆ. ಈ ಬಗ್ಗೆ ಸರ್ಕಾರ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ತಿಳಿಸಿದರು.

# ಖರ್ಗೆ ಹೇಳಿಕೆಗಳಿಗೆ ಪ್ರತಿಕ್ರಿಯೆ ನೀಡಲ್ಲ: ಪ್ರಹ್ಲಾದ್ ಜೋಷಿ

ಬಾಗಲಕೋಟೆ



"ಆರ್‌ಎಸ್‌ಎಸ್ ಬೈದಿದ್ದಕ್ಕೆ ಗೃಹ ಸಚಿವ ಪ್ರಿಯಾಂಕ್ ಖರ್ಗೆಗೆ ಮಾಧ್ಯಮಗಳಲ್ಲಿ ಜಾಗ ಸಿಗುತ್ತಿದೆ. ಅದಕ್ಕೆ ನಾನು ಪ್ರತಿಕ್ರಿಯೆ ನೀಡುವುದನ್ನು ನಿಲ್ಲಿಸಿದ್ದೇನೆ. ಬಾಲಿಶತನದ ಹೇಳಿಕೆಗೆ ಉತ್ತರ ನೀಡುವ ಅಗತ್ಯವಿಲ್ಲ" ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ಆ ಮೂಲಕ ಆರ್‌ಎಸ್‌ಎಸ್ ಸಭೆ ನಂತರ ಗಲಭೆಗಳಾಗುತ್ತವೆ ಎಂಬ ಪ್ರಿಯಾಂಕ್ ಖರ್ಗೆ ಹೇಳಿಕೆ ತಿರುಗೇಟು ನೀಡಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಪ್ರಲ್ಹಾದ್ ಜೋಶಿ, "ಅದರ ಬಗ್ಗೆ ಕ್ರಮಕೈಗೊಳ್ಳಲು ಹೇಳಿ ಯಾರು ಬೇಡ ಅಂದಿದ್ದಾರೆ. ಪೆಡ್ಲರ್‌ಗಳನ್ನು ಯಾಕೆ ಬಂಧಿಸಿಲ್ಲ ಅಂತಾ ನೀವು ಪ್ರಶ್ನಿಸಬಾರದು, ಅದಕ್ಕಾಗಿಯೇ ಅವರು ಈ ರೀತಿ ಹೇಳುತ್ತಿದ್ದಾರೆ.

ಪ್ರಿಯಾಂಕ್ ಹೇಳಿಕೆಗೆ ಉತ್ತರ ನೀಡಬೇಡಿ ಅಂತಾ ನಮ್ಮವರಿಗೆ ಹೇಳಿದ್ದೀನಿ. ಸರಸಂಘಚಾಲಕ ಮೋಹನ್ ಭಾಗವತ್ ಒಮ್ಮೆ ಉತ್ತರ ಕೊಟ್ಟಿದ್ದಾರೆ. ಅದಾದ ನಂತರ ಏನೂ ಹೇಳಿಲ್ಲ, ಅವರ ಕೆಲಸ ಮಾಡಿಕೊಂಡು ಇದ್ದಾರೆ. ಈ ನೂರು ವರ್ಷಗಳಲ್ಲಿ ಇಂತಹವನ್ನೆಲ್ಲಾ ಬಹಳ ನೋಡಿ ಆಗಿದೆ. ಬಿಜೆಪಿ ಮತ್ತು ಸಂಘದ ಅನೇಕ ಸಂಘಟನೆಗಳು ಅನೇಕ ವರ್ಷಗಳಿಂದ ಇವೆ. ಹೊಳೆ ದಾಟೋಕೆ ದೊಣ್ಣೆನಾಯಕನ ಅಪ್ಪಣೆ ಬೇಕೆ. ರಿಜಿಸ್ಟ್ರೇಷನ್ ರಿಜಿಸ್ಟ್ರೇಷನ್ ಅಂತಾರಾ, ಏನು ಮಾಡುತ್ತಾರೆ ನೋಡೋಣ ಎಂದಿದ್ದಾರೆ.

# 'ಸಮೃದ್ಧಿ ಸಾಧನೆ ಶೂನ್ಯ': ಶಾಸಕನಿಗೆ ಮಾಜಿ ಸಚಿವ ನಾಗೇಶ್ ಸವಾಲು

ಮುಳಬಾಗಿಲು

ಸೋಮೇಶ್ವರ ಕೆರೆ ಅಭಿವೃದ್ಧಿ ಕಾಮಗಾರಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಶಾಸಕ ಸಮೃದ್ಧಿ ಮಂಜುನಾಥ್ ಆರೋಪಕ್ಕೆ ತಿರುಗೇಟು ನೀಡಿರುವ ಮಾಜಿ ಸಚಿವ ಹಾಗೂ ಕ್ಷೇತ್ರದ ಮಾಜಿ ಶಾಸಕ ಎಚ್. ನಾಗೇಶ್, "ಆರೋಪ ಸಾಬೀತಾದರೆ ನಾನು ರಾಜಕೀಯ ನಿವೃತ್ತಿ ಹೊಂದುತ್ತೇನೆ. ಆರೋಪ ಸುಳ್ಳೆಂದು ಸಾಬೀತಾದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧರಿದ್ದೀರಾ?" ಎಂದು ಬಹಿರಂಗ ಸವಾಲು ಹಾಕಿದರು.



ನಗರದ ಕಾಂಗ್ರೆಸ್ ಭವನದಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಕೆ.ಸಿ. ವ್ಯಾಲಿ ಯೋಜನೆಯಡಿ ಮುಳಬಾಗಿಲು ತಾಲೂಕಿನ ಕೆರೆಗಳಿಗೆ ನೀರು ಹರಿಸುವ ಉದ್ದೇಶದಿಂದ ಸುಮಾರು ರೂ. 600 ಕೋಟಿ ಅನುದಾನ ಮಂಜೂರಾಗಿತ್ತು. ಈ ಪೈಕಿ ಸೋಮೇಶ್ವರ ಕೆರೆ ಅಭಿವೃದ್ಧಿಗೆ ರೂ. 2.96 ಕೋಟಿ ಮೀಸಲಿಡಲಾಗಿತ್ತು. ಆದರೆ ಕೆರೆಯ ಸೌಂದರ್ಯೀಕರಣ ಕಾಮಗಾರಿ ಮೂಲ ಯೋಜನೆಯ ಭಾಗವೇ ಅಲ್ಲ. ಇಂತಹ ಸಂದರ್ಭದಲ್ಲಿ ರೂ. 7 ಕೋಟಿ ಅನುದಾನದಲ್ಲಿ ರೂ. 4 ಕೋಟಿ ಹಣವನ್ನು ಡ್ರಾ ಮಾಡಿಕೊಂಡಿದ್ದಾರೆ ಎಂಬ ಶಾಸಕ ಸಮೃದ್ಧಿ ಮಂಜುನಾಥ್ ಆರೋಪ ಸತ್ಯಕ್ಕೆ ದೂರವಾಗಿದೆ. ಅನುದಾನ ಬಿಡುಗಡೆ ಹಾಗೂ ಹಣ ಪಾವತಿಯ ಪ್ರಕ್ರಿಯೆ ಬಗ್ಗೆ ಮಾಹಿತಿ ಇಲ್ಲದೆ ಅರ್ಧಬೆಂದ ಮಡಿಕೆಯಂತೆ ಹೇಳಿಕೆ ನೀಡುವುದು ಸರಿಯಲ್ಲ" ಎಂದು ಟೀಕಿಸಿದರು.

"ಕಳೆದ ಮೂರು ವರ್ಷಗಳಿಂದ ನಾನು ಶಾಸಕರ ವಿರುದ್ಧ ಯಾವುದೇ ಟೀಕೆ ಮಾಡಿರಲಿಲ್ಲ. ಆದರೆ ಆಧಾರರಹಿತ ಆರೋಪಗಳಿಂದ ಕ್ಷೇತ್ರದ ಜನರಲ್ಲಿ ಗೊಂದಲ ಸೃಷ್ಟಿಯಾಗುತ್ತಿರುವ ಹಿನ್ನೆಲೆಯಲ್ಲಿ ಸ್ಪಷ್ಟನೆ ನೀಡುವುದು ಅನಿವಾರ್ಯವಾಗಿದೆ. ನಾನು ಶಾಸಕನಾಗಿದ್ದ ಅವಧಿಯಲ್ಲಿ ಕೈಗೊಂಡ ಅನೇಕ ಅಭಿವೃದ್ಧಿ ಕಾಮಗಾರಿಗಳು ಇಂದಿಗೂ ಜನರಿಗೆ ಉಪಯೋಗವಾಗುತ್ತಿವೆ. ನಾನು ತಂದ ಅನುದಾನದ ಹಲವಾರು ಕಾಮಗಾರಿಗಳು ಇನ್ನೂ ಪೂರ್ಣಗೊಳ್ಳಬೇಕಿದ್ದು, ಅವುಗಳತ್ತ ಪ್ರಸ್ತುತ ಶಾಸಕ ಗಮನ ಹರಿಸಬೇಕು. ಕೇವಲ ಆರೋಪ ಮಾಡುವ ಬದಲು ತಮ್ಮ ಮೂರು ವರ್ಷದ ಅಭಿವೃದ್ಧಿ ಸಾಧನೆಗಳ ಪಟ್ಟಿಯನ್ನು ಸಾರ್ವಜನಿಕರ ಮುಂದಿಡಲಿ" ಎಂದು ನಾಗೇಶ್ ಆಗ್ರಹಿಸಿದರು.

ಜೆಡಿಎಸ್ ಶಾಸಕರ ಕ್ಷೇತ್ರಗಳಿಗೆ ಸರ್ಕಾರ ಅನುದಾನ ನೀಡುತ್ತಿಲ್ಲ ಎಂಬ ಶಾಸಕ ಸಮೃದ್ಧಿ ಮಂಜುನಾಥ್ ಆರೋಪವನ್ನೂ ಅವರು ತಳ್ಳಿ ಹಾಕಿದರು. "ಅನುದಾನ ಪಡೆಯುವುದು ಜನಪ್ರತಿನಿಧಿಯ ಸಾಮರ್ಥ್ಯ ಮತ್ತು ಇಚ್ಛಾಶಕ್ತಿಯ ಮೇಲೆ ಅವಲಂಬಿತವಾಗಿರುತ್ತದೆ. ಹಿಂದಿನ ಅವಧಿಯಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಶಾಸಕರೂ ಕಾಂಗ್ರೆಸ್ ಸರ್ಕಾರದಿಂದ ಸಾಕಷ್ಟು ಅನುದಾನ ಪಡೆದಿದ್ದಾರೆ. ಮುಖ್ಯಮಂತ್ರಿ ಹಾಗೂ ಸಚಿವರಿಗೆ ಕ್ಷೇತ್ರದ ಅಗತ್ಯಗಳನ್ನು ಮನವರಿಕೆ ಮಾಡಿದರೆ ಅನುದಾನ ದೊರೆಯುವುದು ಕಷ್ಟವೇನಲ್ಲ. ಆರೋಪ ಮಾಡುವುದನ್ನು ಬಿಟ್ಟು ಜನರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು" ಎಂದರು.

ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, "ಕಳೆದ ಚುನಾವಣೆಯಲ್ಲಿಯೂ ಮುಳಬಾಗಿಲಿನಿಂದ ಸ್ಪರ್ಧಿಸಲು ಒತ್ತಡವಿತ್ತು. ವೈಯಕ್ತಿಕವಾಗಿ ನನಗೂ ಕ್ಷೇತ್ರದಿಂದ ಸ್ಪರ್ಧಿಸುವ ಆಸೆ ಇದೆ. ಆದರೆ ಈ ಕುರಿತು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಚರ್ಚಿಸಿ ಸೂಕ್ತ ಸಮಯದಲ್ಲಿ ನಿರ್ಧಾರ ಪ್ರಕಟಿಸುತ್ತೇನೆ" ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಪೆದ್ದಪ್ಪಯ್ಯ, ಜಯಪ್ರಕಾಶ್ ನಾಯಕ್, ರಮೇಶ್, ವಿಶ್ವನಾಥ್, ಡಿ.ಎಂ. ರವಿ, ಚಿನ್ನಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವೀರಶೈವ–ಲಿಂಗಾಯತರನ್ನು ಒಡೆಯುವವರ ವಿರುದ್ಧ ಎಚ್ಚರ: ಈಶ್ವರ ಖಂಡ್ರೆ

ಬೆಂಗಳೂರು

ಲಿಂಗಾಯತ–ವೀರಶೈವರನ್ನು ಯಾವುದೇ ಶಕ್ತಿಯಿಂದ ಬೇರೆ ಮಾಡಲು ಸಾಧ್ಯವೇ ಇಲ್ಲ, ನಾವು ಎಂದೆಂದೂ ಒಂದೇ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹಾಗೂ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ ಖಂಡ್ರೆ ಗಂಟಾಘೋಷವಾಗಿ ಹೇಳಿದ್ದಾರೆ.



ಬೆಂಗಳೂರು ವಿಜಯನಗರದ ಸುಜ್ಞಾನ ಮಂದಿರದಲ್ಲಿಂದು ನಡೆದ ಪ್ರತಿಭಾ ಪುರಸ್ಕಾರದಲ್ಲಿ ಮಾತನಾಡಿದ ಅವರು, ಕೆಲವರು ಪದೇ ಪದೇ ವೀರಶೈವರೇ ಬೇರೆ, ಲಿಂಗಾಯತರೇ ಬೇರೆ ಎಂದು ಒಡಕು ಮೂಡಿಸಲು ಪ್ರಯತ್ನಿಸುತ್ತಿದ್ದಾರೆ. ಸಂಘಟನೆಯಲ್ಲಿ ಬಲವಿದೆ, ವಿಘಟನೆಯಲ್ಲಿ ದೌರ್ಬಲ್ಯವಿದೆ ಎಂಬುದನ್ನು ನಾವು ಅರಿಯಬೇಕು. ಒಡಕು ಮೂಡಿಸುವವರ ವಿರುದ್ಧ ಎಚ್ಚರದಿಂದ ಇರಬೇಕು ಎಂದರು.

ಕೆಲವರು ಸ್ವಾರ್ಥಕ್ಕಾಗಿ ಧರ್ಮ, ಧರ್ಮಗಳ ನಡುವೆ ಒಡಕು ಉಂಟು ಮಾಡುತ್ತಿದ್ದರೆ, ಮತ್ತೆ ಕೆಲವರು ಜಾತಿ ಜಾತಿಗಳ ನಡುವೆ ವೈಮನಸ್ಯ ಹುಟ್ಟು ಹಾಕುವ ಕೆಲಸ ಮಾಡುತ್ತಿದ್ದಾರೆ. ವೀರಶೈವ ಮತ್ತು ಲಿಂಗಾಯತರು ಒಂದೇ ನಾಣ್ಯದ ಎರಡು ಮುಖ ಇದ್ದಂತೆ. ನಾವೆಂದೆಂದೂ ಒಂದೇ ಎಂದರು.

ವೀರಶೈವ ಮತ್ತು ಲಿಂಗಾಯತರು ಬೇರೆ ಬೇರೆ ಅಲ್ಲ, ಒಂದೇ ಎಂದು ತುಮಕೂರು ಸಿದ್ದಗಂಗಾಮಠದ ಪರಮಪೂಜ್ಯ ನಡೆದಾಡುವ ದೇವರು ಲಿಂಗೈಕ್ಯ ಡಾ. ಶಿವಕುಮಾರ ಸ್ವಾಮೀಜಿ ಅವರೇ ಹೇಳಿದ್ದಾರೆ. ನಮ್ಮ ಸಮಾಜ ಅದನ್ನು ಪಾಲಿಸಬೇಕು ಎಂದರು.

**ನಾವು ಉದ್ಯೋಗ ನೀಡುವವರಾಗಬೇಕು– ಈಶ್ವರ ಖಂಡ್ರೆ:** ಈ ಸ್ಪರ್ಧಾತ್ಮಕ ಯುಗದಲ್ಲಿ, ಜ್ಞಾನಾಧಾರಿತ ಸಮಾಜದಲ್ಲಿ ವಿದ್ಯಾವಂತ ಮತ್ತು ಬುದ್ಧಿವಂತರಷ್ಟೇ ಗೆಲ್ಲಲು ಸಾಧ್ಯ. ನಮ್ಮ ಸಮಾಜದ ಯುವಜನರು ಬಾಹ್ಯ ಮೋಹಗಳಿಗೆ ಒಳಗಾಗದೆ ಶ್ರದ್ಧೆಯಿಂದ ಓದಿ, ಉನ್ನತ ಗುರಿ ಇಟ್ಟುಕೊಂಡು ಉದ್ಯಮಪತಿಗಳಾಗಿ ಉದ್ಯೋಗ ನೀಡುವವರಾಗಬೇಕೇ ಹೊರತು, ಉದ್ಯೋಗ ಬೇಡುವವರಾಗಬಾರದು ಎಂದರು.

ಇಂದು ಆಧುನಿಕ ತಂತ್ರಜ್ಞಾನ ಅಗಾಧವಾಗಿ ಬೆಳೆಯುತ್ತಿದೆ. ಕೃತಕ ಬುದ್ಧಿಮತ್ತೆ, ಮಿಷನ್ ಲರ್ನಿಂಗ್ ನಂತಹ ಆವಿಷ್ಕಾರಗಳಿಂದ ಸಾವಿರಾರು ಜನರು ಉದ್ಯೋಗ ಕಳೆದುಕೊಳ್ಳುತ್ತಿದ್ದಾರೆ. ಹೀಗಾಗಿ ಹೊಸತನಕ್ಕೆ ಒಗ್ಗಿಕೊಳ್ಳುವ ಪ್ರವೃತ್ತಿಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಈಶ್ವರ ಖಂಡ್ರೆ ಸಲಹೆ ನೀಡಿದರು.

**ವೀರ ಶೈವ ಮಠಗಳ ಕೊಡುಗೆ ಅಪಾರ: ಈಶ್ವರ ಖಂಡ್ರೆ:** ವೀರಶೈವ–ಲಿಂಗಾಯತ ಮಠಗಳು ಈ ನಾಡಿಗೆ ದೊಡ್ಡ ಕೊಡುಗೆ ಕೊಟ್ಟಿವೆ. ಅನ್ನ, ಅಕ್ಷರ, ಆಶ್ರಯ ಎಂಬ ತ್ರಿವಿಧ ದಾಸೋಹದಿಂದ ಎಲ್ಲ ಜಾತಿ ಧರ್ಮ, ಮತ ಪಂಥದವರಿಗೂ ಗುಣಮಟ್ಟದ ಶಿಕ್ಷಣ ನೀಡಿ ಸಮಾಜದ ಮುಖ್ಯ ವಾಹಿನಿಗೆ ತಂದಿದೆ.

ವೀರಶೈವರಾಗಲೀ, ಲಿಂಗಯತರಾಗಲೀ ಎಂದಿಗೂ ಬೇಡಿದವರಲ್ಲ. ಅವರೆಲ್ಲರೂ ನೀಡಿದವರು. ಬಸವಣ್ಣನವರು ಹೇಳಿದ ಕಾಯಕವೇ ಕೈಲಾಸ ಎಂಬ ತತ್ವ ಅನುಷ್ಠಾನದೊಂದಿಗೆ ದುಡಿಯುತ್ತಿದ್ದರು, ದುಡಿದು ಗಳಿಸುತ್ತಿದ್ದರು, ಗಳಿಸಿದ್ದನ್ನು ಉಳಿಸುತ್ತಿದ್ದರು, ಉಳಿಸಿದ್ದನ್ನು ದಾಸೋಹದ ಮೂಲಕ ಸಮಾಜಕ್ಕೆ ನೀಡುತ್ತಿದ್ದರು. ನೀವೆಲ್ಲರೂ ಈ ಸಮಾಜಕ್ಕೆ ಕೊಡುಗೆ ನೀಡುವವರಾಗಬೇಕು ಎಂದರು.

ಶಿವಶರಣರು, ಬಸವಾದಿ ಪ್ರಮಥರು 12ನೇ ಶತಮಾನದಲ್ಲಿಯೇ ಸಮ ಸಮಾಜದ ಕನಸು ಕಂಡಿದ್ದರು. ಸರ್ವರಿಗೂ ಲೇಸನ್ನು ಬಯಸುವ ಸಮಾಜ ಯಾವುದಾದರೂ ಇದ್ದರೆ ಅದು ನಮ್ಮ ವೀರಶೈವ ಲಿಂಗಾಯತ ಸಮಾಜ ಮಾತ್ರ. ಹೀಗಾಗಿ ಇಂದಿನ ಪೀಳಿಗೆ ವಿಶಾಲ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ನಮ್ಮ ಸಮುದಾಯ ಐ.ಎ.ಎಸ್. ಐ,ಪಿ. ಎಸ್. ಸೇರಿದಂತೆ ಲೋಕಸೇವಾ ಆಯೋಗದ ಪರೀಕ್ಷೆಗಳಲ್ಲಿ ಪಾಸಾಗಿ ಉನ್ನತ ಹುದ್ದೆ ಅಲಂಕರಿಸುವುದು ತುಂಬಾ ಕಡಿಮೆ. ಹೀಗಾಗಿ ನಮ್ಮ ವೀರಶೈವ ಲಿಂಗಾಯಿತ ಸಮುದಾಯದ ನಿವೃತ್ತ ಐ.ಎ.ಎಸ್. ಐ.ಪಿ.ಎಸ್. ಅಧಿಕಾರಿಗಳು, ಕೆ.ಎ.ಎಸ್. ಅಧಿಕಾರಿಗಳು ಮತ್ತು ಉದ್ಯಮಿಗಳು ಸೇರಿ ಒಂದು ಟ್ರಸ್ಟ್ ರಚಿಸಿ ಜಿಲ್ಲೆಗೊಂದು ತರಬೇತಿ ಕೇಂದ್ರ ತೆರೆದು ಸಮಾಜದ ಆಕಾಂಕ್ಷಿಗಳಿಗೆ ತರಬೇತಿ ನೀಡಬೇಕು ಎಂದರು.

ಸರ್ವಶ್ರೇಷ್ಠ ಎಂಜಿನಿಯರ್ ಯಾರು ಎಂದರೆ ಸರ್.ಎಂ.ವಿಶ್ವೇಶ್ವರಯ್ಯನವರ ಹೆಸರು ಹೇಳುತ್ತೇವೆ. ನಿಮ್ಮ ತಂದೆ, ತಾಯಿ, ಅಣ್ಣ, ತಮ್ಮ ಎಂಜಿನಿಯರ್ ಆಗಿದ್ದರೂ ನೀವು ಅವರ ಹೆಸರು ಹೇಳಲ್ಲ. ಈ ಜಗತ್ತು ಸಾಧಕರನ್ನು ಮಾತ್ರ ಸ್ಮರಿಸುತ್ತದೆ. ಹೀಗಾಗಿ ನೀವೆಲ್ಲರೂ ಸಾಧಕರಾಗಬೇಕು ಎಂದರು.

ಯುವಶಕ್ತಿ ಅಣುಶಕ್ತಿಗಿಂತಲೂ ಮಿಗಿಲಾದ್ದು, ಯುವಶಕ್ತಿಗೆ ಸೂಕ್ತ ಮಾರ್ಗದರ್ಶನ ನೀಡಿದರೆ ಅಸಾಧ್ಯವಾದ್ದನ್ನೂ ಸಾಧಿಸಿ ತೋರಿಸುತ್ತಾರೆ. ಹೀಗಾಗಿ ಪಾಲಕರು ತಮ್ಮ ಮಕ್ಕಳು ದುಶ್ಚಟ, ದುರ್ಗುಣಗಳ ದಾಸರಾಗುತ್ತಿಲ್ಲ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ವಿದ್ಯೆಯ ಜೊತೆಗೆ ಬುದ್ಧಿ ಕಲಿಸುವ ಕಾರ್ಯವನ್ನು ಗುರುಗಳು ಮಾಡಬೇಕು ಎಂದರು.

ಪ್ರತಿಭಾಪುರಸ್ಕಾರ ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ 800 ವಿದ್ಯಾರ್ಥಿಗಳಿಗೆ 1000ರೂ. ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.




ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಡಾ. ಕರಿವೃಷಭದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಹಾಗೂ ವಿಭೂತಿಪುರ ಮಠದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ನಡೆದ ಸಮಾರಂಭದಲ್ಲಿ ಮಹಾಸಭಾದ ರಾಜ್ಯಾಧ್ಯಕ್ಷ ಶಂಕರ ಬಿದರಿ, ಬೆಂಗಳೂರು ಘಟಕದ ಅಧ್ಯಕ್ಷ ಎಸ್. ಗುರುಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷೆ ಮುಕ್ತಾಂಬಾ, ಕಲ್ಬುರ್ಗಿ ಮಾಜಿ ಮೇಯರ್ ಶರಣು ಮೋದಿ ಪಾಲ್ಗೊಂಡಿದ್ದರು.

# 3.06 ಕೋಟಿ ಲಾಭದಲ್ಲಿ ಶ್ರೀ ಚರಣ್ ಸೌಹಾರ್ದ ಕೋ ಆಪರೇಟೀವ್ ಬ್ಯಾಂಕ್

ಬೆಂಗಳೂರು

ಸಹಕಾರ ಕ್ಷೇತ್ರದ ಅತ್ಯಂತ ಪ್ರಮುಖ ಬ್ಯಾಂಕ್ ಆಗಿರುವ ಬಸವನಗುಡಿಯ ಶ್ರೀ ಚರಣ್ ಸೌಹಾರ್ದ ಕೋ– ಅಪರೇಟೀವ್ ಬ್ಯಾಂಕ್ ಪ್ರಸಕ್ತ ಹಣಕಾಸು ವರ್ಷದ ಜುಲೈ 31ಕ್ಕೆ ಕೊನೆಗೊಂಡ ತ್ರೈಮಾಸಿಕದಲ್ಲಿ ರೂ. 3.06 ಕೋಟಿ ರೂ ಲಾಭಗಳಿಸಿದೆ.



ಶಂಕರಪುರಂ ಪಂಪ ಮಹಾಕವಿ ರಸ್ತೆಯಲ್ಲಿರುವ ವಿದ್ಯಾಶ್ರೀ ವಿದ್ಯಾವಿಹಾರ ಸಭಾಂಗಣದಲ್ಲಿ ನಡೆದ 30ನೇ ಸರ್ವ ಸದಸ್ಯರ ಸಭೆಯಲ್ಲಿ ಬ್ಯಾಂಕ್ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಬಿ.ವಿ. ದ್ವಾರಕಾನಾಥ್ ಅವರು ವಾರ್ಷಿಕ ಲೆಕ್ಕ ಪತ್ರ ಮಂಡಿಸಿದರು. ಹಿಂದಿನ ಹಣಕಾಸು ವರ್ಷದ ಇದೇ ಅವಧಿಯಲ್ಲಿ ಬ್ಯಾಂಕ್ ರೂ. 2.92 ಕೋಟಿ ಲಾಭ ಗಳಿಸಿತ್ತು.

ಬಿ.ವಿ. ದ್ವಾರಕಾನಾಥ್ ಮಾತನಾಡಿ, ಶ್ರೀ ಚರಣ್ ಸೌಹಾರ್ದ ಕೋ– ಅಪರೇಟೀವ್ ಬ್ಯಾಂಕ್ ಗ್ರಾಹಕ ಸ್ನೇಹಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಲಾಭದಾಯಕವಾಗಿ ಮುನ್ನಡೆಯುತ್ತಿದೆ. ಅನುತ್ಪಾದಕ ಸಾಲದ ಪ್ರಮಾಣ ಕಡಿಮೆಯಾಗಿದ್ದು, ಸುಲಭ ಸಾಲ, ಸೌಲಭ್ಯಗಳಿಗೆ ಒತ್ತು ನೀಡಲಾಗಿದೆ ಎಂದರು.

2024–25ನೇ ಸಾಲಿನಲ್ಲಿ ಎಸ್ಎಲ್ಸಿ ಮತ್ತು ಪಿಯುಸಿಯಲ್ಲಿ ಶೇ. 95ಕ್ಕಿಂತ ಹೆಚ್ಚು ಅಂಕ ಪಡೆದ ಬ್ಯಾಂಕಿನ ಸದಸ್ಯರ ಮಕ್ಕಳಿಗೆ ಇದೇ ವೇಳೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ದೂರದರ್ಶನ ಚಂದನವಾಹಿನಿಯಲ್ಲಿ ಗಿನ್ನೆಸ್ ದಾಖಲೆ ನಿರ್ಮಿಸಿರುವ ಥಟ್ ಅಂತ ಹೇಳಿ ರಸ ಪ್ರಶ್ನೆ ಕಾರ್ಯಕ್ರಮದ ಕ್ವಿಜ್ ಮಾಸ್ಟರ್ ಹಾಗೂ ಹಿರಿಯ ಸಾಹಿತಿ ಡಾ. ನಾ. ಸೋಮೇಶ್ವರ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ, ವಿದ್ಯಾರ್ಥಿಗಳಿಗೆ ಕಲಿಕೆಯೇ ಯಶಸ್ಸಿನ ಕೀಲಿಕೈ ಆಗಿದೆ. ಇಂದಿನ ಪರಿಶ್ರಮವೇ ನಾಳಿನ ಸಾಧನೆಗೆ ಸೋಪಾನವಾಗಲಿದ್ದು, ಸಮಯವನ್ನು ಗೌರವಿಸಿ, ಯಶಸ್ಸನ್ನು ಪಡೆಯಿರಿ. ಶಿಸ್ತು ಜೀವನದ ಅಲಂಕಾರವಾಗಿದ್ದು, ಓದು ನಿಮ್ಮ ಉತ್ತಮ ಸ್ನೇಹಿತ. ಗುರಿ ಸ್ಪಷ್ಟವಾಗಿದ್ದರೆ ಗೆಲುವು ಖಚಿತ ಎಂದರು.

ಚಲನಚಿತ್ರ ನಿರ್ಮಾಪಕರೂ ಆಗಿರುವ ಬ್ಯಾಂಕಿನ ಗ್ರಾಹಕ ಬಿ.ಕೆ.ಶ್ರೀನಿವಾಸ್ ಉಪಸ್ಥಿತರಿದ್ದರು.

ಕುಮಾರಿ ದಿಯಾ ಹೆಗ್ಡೆ ಹಾಗೂ ತಂಡದ "ಸಂಗೀತ ವೈಭವ" ಕಾರ್ಯಕ್ರಮ ಗಮನ ಸೆಳೆಯಿತು.

# ಅದ್ದೂರಿ ಕಾರ್ಯಕ್ರಮದ ಮೂಲಕ ಶೀಘ್ರವೇ ವಾಲ್ಮೀಕಿ ಪುತ್ಥಳಿ ಅನಾವರಣ; ಶಾಸಕ ಭರತ್ ರೆಡ್ಡಿ



ಬಳ್ಳಾರಿ

ಕೆಲ ಕಾರಣಗಳಿಂದ ಮಹರ್ಷಿ ವಾಲ್ಮೀಕಿಯವರ ಪುತ್ಥಳಿಯ ಅನಾವರಣ ಕಾರ್ಯಕ್ರಮ ಮುಂದೂಡಲ್ಪಟ್ಟಿದ್ದು, ಶೀಘ್ರವೇ ಅನಾವರಣ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ನಗರದ ಸೊಂತ ಲಿಂಗಣ್ಣ ಕಾಲೋನಿಯಲ್ಲಿ ಏರ್ಪಡಿಸಿದ್ದ ಪಾರ್ಕ್ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆಯಲ್ಲಿ ಭಾಗವಹಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ಈ ಹಿಂದೆ ಒಂದು ದುರ್ಘಟನೆ ನಡೆದು ಕಾರ್ಯಕ್ರಮ ಮುಂದೂಡಲ್ಪಟ್ಟಿತ್ತು, ಆದರೆ ಈಗ ಯಾರೇ ಅಡ್ಡ ಬಂದರೂ ಕಾರ್ಯಕ್ರಮ ನಿಲ್ಲುವುದಿಲ್ಲ, ಈ ಹಿಂದೆ ಅಂದುಕೊಂಡದ್ದಕ್ಕಿಂತ ಅದ್ದೂರಿಯಾಗಿ ಅನಾವರಣ ಕಾರ್ಯಕ್ರಮ ಏರ್ಪಡಿಸಲಿದ್ದೇವೆ ಎಂದರು.

ಕೊಳಗಲ್ ರಸ್ತೆಯ ಅಭಿವೃದ್ಧಿಗೆ ಸಂಬಂಧಿಸಿ ಮರಗಳ ತೆರವು ವಿಚಾರಕ್ಕೆ ಪ್ರತಿಕ್ರಿಯಿಸಿದ ಶಾಸಕ ನಾರಾ ಭರತ್ ರೆಡ್ಡಿ, ರಸ್ತೆ ಸೇರಿದಂತೆ ಯಾವುದೇ ರೀತಿಯ ಅಭಿವೃದ್ಧಿ ಮಾಡುವಾಗ ಮರ ಸೇರಿದಂತೆ ವಿವಿಧ ಅಡೆತಡೆಗಳನ್ನು ತೆರವು ಮಾಡುವುದು ಸಹಜ, ಮರಗಳ ತೆರವನ್ನು ಪ್ರಶ್ನಿಸುವವರು ಯಾರೂ ಒಂದು ಮರ ನೆಡುವುದಿಲ್ಲ, ಹೆಸರಿಗೆ ಪರಿಸರ ಪ್ರೇಮಿ ಎಂದು ಹೇಳಿಕೊಳ್ಳುತ್ತಾರೆ, ನಾನು ಶಾಸಕನಾದ ಒಂದೇ ವರ್ಷಕ್ಕೆ ಮಿಯಾವಾಕಿ ಮಾದರಿಯಲ್ಲಿ 25 ಸಾವಿರ ಸಸಿಗಳನ್ನು ನೆಟ್ಟಿರುವೆ, ಜಿಪಂ ಸದಸ್ಯ ಆಗಿದ್ದ ವೇಳೆ ಕೊರ್ಲಗುಂದಿ ಕ್ಷೇತ್ರದಲ್ಲಿ 45 ಸಾವಿರ ಸಸಿಗಳನ್ನು ನೆಟ್ಟಿರುವೆ, ನಗರವನ್ನು ಪ್ರವೇಶಿಸುವ ರಸ್ತೆಗಳು ಅಭಿವೃದ್ಧಿ ಆಗಲೇ ಬೇಕು, ಇಲ್ಲದಿದ್ದರೆ ಅಭಿವೃದ್ಧಿ ಕುಂಠಿತ ಆಗುತ್ತದೆ ಎಂದರು.

ಜಿಲ್ಲೆಯ ಶಾಸಕರ ಬೆಂಬಲವಿದ್ದವರಿಗೆ ಸಚಿವ ಸ್ಥಾನ: ನೀವು ಸಚಿವ ಸ್ಥಾನ ಆಕಾಂಕ್ಷಿಯೇ? ಯುವಕರ ಕೋಟಾದಲ್ಲಿ ನಿಮಗೆ ಅವಕಾಶ ಸಿಗಲಿದೆಯೇ? ಎಂದು ಕೇಳಿದ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಶಾಸಕ ನಾರಾ ಭರತ್ ರೆಡ್ಡಿ; ನನ್ನ ಮೇಲಿನ ಅಭಿಮಾನಕ್ಕೆ ನನ್ನ ಸಹದ್ಯೋಗಿ ಶಾಸಕರು ನನಗೆ ಸಚಿವ ಸ್ಥಾನ ಸಿಗಲಿ ಎಂದಿದ್ದಾರೆ, ಅದು ಅವರ ಪ್ರೀತಿ ಅಭಿಮಾನ. ಯುವಕರ ಕೋಟಾದಡಿ ಅವಕಾಶ ಸಿಗುವುದಾದರೆ ಶಾಸಕರಾದ ಬಸವರಾಜ, ಶಿವಗಂಗಾ ಹಾಗೂ ರವಿ ಗಣಿಗ ಅವರಿಗೆ ಅವಕಾಶ ಸಿಗಲಿ ಎಂದರು.

ಜಿಲ್ಲೆಯಲ್ಲಿ ನಾವು ಈಗಾಗಲೇ ಯಾರಿಗೆ ಕೊಡಬೇಕು ಎಂದು ಹೇಳಿದ್ದೇವೆಯೋ ಅವರಿಗೆ ಸಚಿವ ಸ್ಥಾನದ ಅವಕಾಶ ಸಿಗಲಿದೆ ಎಂದರು.

ಪಾರ್ಕ್‌ಗಳ ಅಭಿವೃದ್ಧಿಗೆ ಸಂಬಂಧಿಸಿ, ಸಾರ್ವಜನಿಕರು ಆಸ್ಥೆ ವಹಿಸಿ ಪಾರ್ಕ್‌ಗಳ ಅಭಿವೃದ್ಧಿಗೆ ಮುಂದಾಗಬೇಕು, ಪಾರ್ಕ್ ಸಮಿತಿಗಳನ್ನು ಮಾಡಿಕೊಂಡರೆ ಪಾಲಿಕೆಯಿಂದ ಮಾಸಿಕ 10 ಸಾವಿರ ರೂ.ಗಳನ್ನು ನಿರ್ವಹಣಾ ವೆಚ್ಚ ನೀಡಲಾಗುವುದು ಎಂದರು.

ಎಪಿಎಂಸಿಯಲ್ಲಿ ನಿಯಮ ಮೀರಿ ಅಂಗಡಿಗಳನ್ನು ವ್ಯಾಪಾರಿಗಳಿಗೆ ನೀಡಬಾರದು ಎಂದ ಅವರು, ಇತ್ತೀಚೆಗೆ ನಗರದಲ್ಲಿ ನಡೆಯುತ್ತಿರುವ ಲೋಕಾಯುಕ್ತ ದಾಳಿಗಳನ್ನು ಸಮರ್ಥಿಸಿದರಲ್ಲದೇ ಲೋಕಾಯುಕ್ತರಿಗೆ ಬೆಂಬಲಿಸುವುದಾಗಿ ಹೇಳಿದರು.

ಪಾಲಿಕೆಯ ವಾರ್ಡಿನ ಸದಸ್ಯ ಹನುಮಂತಪ್ಪ, ಮೇಯರ್ ಪಿ.ಗಾದೆಪ್ಪ, ಮಾಜಿ ಮೇಯರ್ ಎಂ.ರಾಜೇಶ್ವರಿ ಸುಬ್ಬಾರಾಯುಡು, ಪಾಲಿಕೆಯ ಇತರ ಸದಸ್ಯರಾದ ನೂರ್ ಮೊಹಮ್ಮದ್, ಕುಬೇರಾ, ಕಾಂಗ್ರೆಸ್ ಮುಖಂಡರಾದ ಬಜ್ಜಪ್ಪ, ದುರ್ಗಾ ಮೋಹನ್, ಯರಗುಡಿ ಸೋಮಣ್ಣ, ನಾಗರಾಜ್, ಬಿಆರೆಲ್ ಸೀನಾ, ಹೊನ್ನಪ್ಪ, ಪರಶುರಾಮುಡು, ಹಗರಿ ಗೋವಿಂದ, ಚಾನಾಳ್ ಶೇಖರ್, ಪದ್ಮಾ ಮತ್ತಿತರರು ಇದ್ದರು.

# 18ರಂದು ಬೋವಿ ಜನೋತ್ಸವ: 5 ಸಾವಿರಕ್ಕೂ ಹೆಚ್ಚು ಜನರ ಭಾಗವಹಿಸುವ ನಿರೀಕ್ಷೆ




ಬಳ್ಳಾರಿ

ಕಲ್ಯಾಣ ಕರ್ನಾಟಕ ಮಟ್ಟದ ಬೋವಿ ಜನೋತ್ಸವ–2026 ಹಾಗೂ ಜಗದ್ಗುರು ಇಮ್ಮಡಿ ಸಿದ್ದರಾಮೇಶ್ವರ ಮಹಾಸ್ವಾಮೀಜಿಗಳ 17ನೇ ಪಟ್ಟಾಭಿಷೇಕ ಮಹೋತ್ಸವ, 28ನೇ ಲಾಂಛನ ದೀಕ್ಷಾ ಮಹೋತ್ಸವ ಮತ್ತು 40ನೇ ಜನ್ಮದಿನೋತ್ಸವ ಇದೇ ತಿಂಗಳ 18ರಂದು ಅದ್ದೂರಿಯಾಗಿ ನಡೆಯಲಿದ್ದು, ಬೋವಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಆರ್ಥಿಕ ಸಹಾಯಧನ ವಿತರಿಸಲಾಗುವುದು ಎಂದು ರಾಯಚೂರು ಜಿಲ್ಲಾ ಬೋವಿ ಸಮಾಜದ ಅಧ್ಯಕ್ಷ ಅಶೋಕ್ ಉಮಾನುಡಿ ತಿಳಿಸಿದರು.

ಇಲ್ಲಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೂಜ್ಯ ಜಗದ್ಗುರು ಇಮ್ಮಡಿ ಸಿದ್ದರಾಮೇಶ್ವರ ಮಹಾಸ್ವಾಮೀಜಿಗಳ ಆಶೀರ್ವಾದದಿಂದ ಜನೋತ್ಸವವನ್ನು ಆಯೋಜಿಸಲಾಗುತ್ತಿದೆ. ಸಮುದಾಯದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಅಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಲಾಗುತ್ತದೆ. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಉತ್ತಮ ಅಂಕಗಳನ್ನು ಗಳಿಸಿದ ಬೋವಿ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು. ಜೊತೆಗೆ, ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಆಯ್ಕೆಯಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಲಾ ರೂ. 5,000 ಆರ್ಥಿಕ ಸಹಾಯಧನ ವಿತರಿಸಲಾಗುವುದು ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯ ಅತಿಥಿಯಾಗಿ ಆಹ್ವಾನಿಸಲಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಜಿಲ್ಲೆಗಳಿಂದ ಸುಮಾರು 5 ಸಾವಿರಕ್ಕೂ ಹೆಚ್ಚು ಜನರು ಜನೋತ್ಸವದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಕಾರ್ಯಕ್ರಮದ ಯಶಸ್ಸಿಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮುದಾಯದ ಮುಖಂಡರಾದ ಸಿದ್ದು ಬಂಡಿ, ಹನುಮಂತಪ್ಪ, ರಾಮಾಂಜಿನಿ, ತಿಪ್ಪಣ್ಣ, ಗಾದಿಲಿಂಗ ಸೇರಿದಂತೆ ಬೋವಿ ಸಮುದಾಯದ ಪ್ರಮುಖ ಧುರೀಣರು ಮತ್ತು ಮುಖಂಡರು ಈ ಸುದ್ದಿಗೋಷ್ಠಿಯಲ್ಲಿದ್ದರು.

# ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಲೋಕಾಯುಕ್ತ ಬಲೆಗೆ: 90 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದಾಗ ದಸ್ತಗಿರಿ

ಬಳ್ಳಾರಿ

ಜಿ.ಎಸ್.ಟಿ ವರ್ಗಾವಣೆ ಕೆಲಸ ಮಾಡಿಕೊಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಬಳ್ಳಾರಿಯ ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಕುಬಸದ ಅವರು ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಆರೋಪಿತ ಅಧಿಕಾರಿಯು ಕಚೇರಿಯ ಒಳಗೆ ಫಿರ್ಯಾದಿದಾರರಿಂದ ಲಂಚದ ಹಣ ಪಡೆಯುತ್ತಿದ್ದಾಗ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಅವರನ್ನು ರೆಡ್–ಹ್ಯಾಂಡ್ ಆಗಿ ದಸ್ತಗಿರಿ ಮಾಡಿದ್ದಾರೆ.

ಸಿರುಗುಪ್ಪದ 12ನೇ ವಾರ್ಡ್, ವಿಜಯ ವಿಠಲ ನಗರದ ನಿವಾಸಿಯಾದ ಕೆ.ಶ್ರೀನಿವಾಸರಾವ್ ಅವರು ತೆರಿಗೆ ಸಲಹೆಗಾರರು ಮತ್ತು ಅಕೌಂಟೆಂಟ್ ಆಗಿ ಕೆಲಸ ಮಾಡುತ್ತಿದ್ದಾರೆ.

ಸಿರುಗುಪ್ಪದ ಶ್ರೀ ಮಹಾಲಕ್ಷ್ಮಿ ಎಂಟರ್‌ಪ್ರೈಸಸ್ ಮಾಲೀಕರಾದ ಕೆ.ಮಲ್ಲಿಕಾರ್ಜುನ ಅವರಿಗೆ ಸಂಬಂಧಿಸಿದ ಹಳೆಯ ಜಿ.ಎಸ್.ಟಿ ಸಂಖ್ಯೆ (29ಬಿಜಿಸಿಪಿಎಂ8288ಡಿ1ಜೆಡ್0) ತಾಂತ್ರಿಕ ದೋಷದಿಂದ ಮೈಗ್ರೇಟ್ ಆಗಿರಲಿಲ್ಲ. ಈ ಹಳೆಯ ಜಿ.ಎಸ್.ಟಿ ಖಾತೆಯಲ್ಲಿದ್ದ ಇನ್‌ಪುಟ್ ಟ್ಯಾಕ್ಸ್ ಅನ್ನು ಹೊಸ ಜಿ.ಎಸ್.ಟಿ ಸಂಖ್ಯೆಗೆ (29ಬಿಜಿಸಿಪಿಎಂ8288ಡಿ2ಜೆಡ್‌ಜೆಡ್) ಸೇರಿಸಿಕೊಡುವಂತೆ ಶ್ರೀನಿವಾಸರಾವ್ ಅವರು ವಾಣಿಜ್ಯ ತೆರಿಗೆ ಇಲಾಖೆಗೆ ಅರ್ಜಿ ಸಲ್ಲಿಸಿದ್ದರು.

ಈ ಸರ್ಕಾರಿ ಕೆಲಸವನ್ನು ಮಾಡಿಕೊಡಲು ಬಳ್ಳಾರಿಯ ಎಲ್.ಜಿ.ಎಸ್.ಟಿ.ಓ 495ರ ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಕುಬಸದ ಅವರು ರೂ.90,000 ರೂಪಾಯಿಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಲಂಚ ನೀಡಲು ಇಚ್ಛಿಸದ ಶ್ರೀನಿವಾಸರಾವ್ ಅವರು ಈ ಕುರಿತು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ದೂರಿನ ಅನ್ವಯ ಅಪರಾಧ ಸಂಖ್ಯೆ: 08/2026, ಕಲಂ 7(ಎ) ಪಿಸಿ ಆಕ್ಟ್ 1988 (ತಿದ್ದುಪಡಿ ಕಾಯ್ದೆ–2018) ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

ಮಂಗಳವಾರ ಮಧ್ಯಾಹ್ನ ಸುಮಾರು 1.40 ಗಂಟೆಗೆ ಬಳ್ಳಾರಿ ನಗರದ ರಾಘವೇಂದ್ರ ಕಾಲೋನಿಯಲ್ಲಿರುವ ವಾಣಿಜ್ಯ ತೆರಿಗೆ ಇಲಾಖೆಯ ಕಚೇರಿಯ ಒಳಗಡೆ ಆರೋಪಿತ ಅಧಿಕಾರಿ ಮಲ್ಲಿಕಾರ್ಜುನ ಕುಬಸದ ಅವರು ಪಿರ್ಯಾದಿದಾರರಿಂದ 90,000 ರೂ. ಗಳ ಲಂಚದ ಹಣವನ್ನು ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಲಂಚದ ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದ್ದು, ಅಧಿಕಾರಿಯನ್ನು ಕಚೇರಿಯಲ್ಲಿಯೇ ದಸ್ತಗಿರಿ ಮಾಡಲಾಗಿದೆ.

ಈ ಯಶಸ್ವಿ ಕಾರ್ಯಾಚರಣೆಯು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ಅವರ ಮಾರ್ಗದರ್ಶನದಲ್ಲಿ ಹಾಗೂ ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಗುರಣ್ಣ ಎಸ್ ಹೆಬ್ಬಾಳ್ ಅವರ ನೇತೃತ್ವದಲ್ಲಿ ನಡೆದಿದೆ.

ತಂಡದಲ್ಲಿ ಪೊಲೀಸ್ ಉಪಾಧೀಕ್ಷಕ ಸಚಿನ್ ಎಸ್. ಚಲುವಾದಿ (ಕಲೋ, ಹೊಸಪೇಟೆ), ಪೊಲೀಸ್ ನಿರೀಕ್ಷಕ ಸುರೇಶ್ ಎಮ್. ಭಾವಿಮನಿ ಮತ್ತು ಸಿಬ್ಬಂದಿಗಳಾದ ಚಂದ್ರಶೇಖರ್, ವಸಂತಕುಮಾರ, ಅರವಿಂದ, ಅಂಜಿನಪ್ಪ, ಹನುಮಂತಪ್ಪ ಹಾಗೂ ಗೊಲ್ಲರ ದಾಸಪ್ಪ ಭಾಗವಹಿಸಿದ್ದರು.

# ವೃತ್ತಿ ತೆರಿಗೆ ಪಾವತಿದಾರರಿಗೆ ಆನ್‌ಲೈನ್ ಮೂಲಕವೇ ನೋಟಿಸ್ ಜಾರಿ ಮತ್ತು ಉತ್ತರ ಸಲ್ಲಿಕೆಗೆ ಅವಕಾಶ

ಬೆಂಗಳೂರು

ರಾಜ್ಯದ ವೃತ್ತಿ ತೆರಿಗೆ ಪಾವತಿದಾರರಿಗೆ ಮತ್ತಷ್ಟು ಸುಲಭ, ವೇಗ ಹಾಗೂ ಪರಿಣಾಮಕಾರಿ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ವಾಣಿಜ್ಯ ತೆರಿಗೆ ಇಲಾಖೆಯು ಮಹತ್ವದ ಕ್ರಮ ಕೈಗೊಂಡಿದೆ.

ಇಲಾಖೆಯು ತನ್ನ ಅಧಿಕೃತ ವೃತ್ತಿತೆರಿಗೆ ಜಾಲತಾಣವನ್ನು https://ptax.karnataka.gov.in/ 2026ರ ಜುಲೈ 1ರಿಂದ ಜಾರಿಗೆ ಬರುವಂತೆ ನವೀಕರಿಸಿದೆ ಎಂದು ವಾಣಿಜ್ಯ ತೆರಿಗೆಗಳ

ಆಯುಕ್ತರಾದ ವಿಪುಲ್ ಬನ್ಸಾಲ್ ಅವರು ತಿಳಿಸಿದ್ದಾರೆ.

ಕರ್ನಾಟಕ ವೃತ್ತಿಗಳು, ವ್ಯಾಪಾರಗಳು, ಆಜೀವಿಕೆಗಳು ಮತ್ತು ಉದ್ಯೋಗಗಳ ಮೇಲಿನ ತೆರಿಗೆ ನಿಯಮಗಳು 1976ರ ನಿಯಮ 27ರ ಅನ್ವಯ, ಇಲಾಖೆಯಿಂದ ಹೊರಡಿಸಲಾಗುವ ಎಲ್ಲಾ ನೋಟಿಸ್‌ಗಳು, ನಿರ್ಧಾರಗಳು, ಸಮಯಗಳು, ಆದೇಶಗಳು ಹಾಗೂ ಇತರೆ ಅಧಿಕೃತ ಸಂವಹನಗಳನ್ನು ಇನ್ನು ಮುಂದೆ ವೃತ್ತಿತೆರಿಗೆ ಜಾಲತಾಣದ (ಆನ್‌ಲೈನ್) ಮೂಲಕವೇ ನೇರವಾಗಿ ರವಾನಿಸಲಾಗುವುದು.

ದಾಖಲಾದ ವೃತ್ತಿತೆರಿಗೆ ಪಾವತಿದಾರರು ಇಲಾಖೆಯ ನೋಟಿಸ್‌ಗಳಿಗೆ ತಮ್ಮ ಉತ್ತರಗಳು, ಸಮಜಾಯಿಷಿಗಳು, ಆಕ್ಷೇಪಣೆಗಳು ಹಾಗೂ ಇತರೆ ಯಾವುದೇ ಪ್ರತಿಕ್ರಿಯೆಗಳನ್ನು ಕಚೇರಿಗೆ ಅಲೆದಾಟ ತಪ್ಪಿಸಲು ಜಾಲತಾಣದ ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸಲು ಹೊಸದಾಗಿ ಅವಕಾಶ ಕಲ್ಪಿಸಲಾಗಿದೆ.

ಎಲ್ಲಾ ದಾಖಲಾದ ವೃತ್ತಿತೆರಿಗೆ ಪಾವತಿದಾರರು ಇಲಾಖೆಯ ಪೋರ್ಟಲ್‌ನಲ್ಲಿ ಬರುವ ಸಂವಹನಗಳನ್ನು ನಿಯಮಿತವಾಗಿ ಪರಿಶೀಲಿಸಬೇಕು.

ಆನ್‌ಲೈನ್ ಸೌಲಭ್ಯದ ಸದುಪಯೋಗವನ್ನು ಪಡೆದುಕೊಂಡು, ಕಾಯ್ದೆ ಹಾಗೂ ನಿಯಮಗಳನ್ವಯ ಸಕಾಲದಲ್ಲಿ ಪ್ರತ್ಯುತ್ತರ ನೀಡಿ ಸಹಕರಿಸಬೇಕಾಗಿ ಕೋರಲಾಗಿದೆ.

ಈ ಹೊಸ ವ್ಯವಸ್ಥೆ ಹಾಗೂ ವೃತ್ತಿ ತೆರಿಗೆಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ತಮ್ಮ ವ್ಯಾಪ್ತಿಯ ವೃತ್ತಿತೆರಿಗೆ ಕಚೇರಿಯನ್ನು ಅಥವಾ ಇಲಾಖೆಯ ಉಚಿತ ಸಹಾಯವಾಣಿ

# ಕೃತಕ ಬುದ್ಧಿಮತ್ತೆ ಆಧಾರಿತ 'ಪ್ರಬುದ್ಧ ಆಡಳಿತ'ದತ್ತ ಕರ್ನಾಟಕ: ಸಚಿವ ಪ್ರಿಯಾಂಕ್ ಖರ್ಗೆ



ಬೆಂಗಳೂರು

ರಾಜ್ಯ ಸರ್ಕಾರ ಪ್ರಬುದ್ಧ ಇ–ಆಡಳಿತದ ಮುಂದಿನ ಹಂತವಾದ ಕೃತಕ ಬುದ್ಧಿಮತ್ತೆ ಆಧಾರಿತ ಆಡಳಿತ'ದತ್ತ ಹೆಜ್ಜೆ ಇಡುತ್ತಿದೆ. ಭವಿಷ್ಯದ ಅಗತ್ಯಗಳಿಗನುಗುಣವಾಗಿ ಎಐ ಕೌಶಲಗಳನ್ನು ಅಭಿವೃದ್ಧಿಪಡಿಸುವುದು ಹಾಗೂ ತಂತ್ರಜ್ಞಾನ ವಲಯದೊಂದಿಗೆ ಸಹ–ಸೃಷ್ಟಿ ಸಹಭಾಗಿತ್ವವನ್ನು ಹೊಂದುವುದಕ್ಕೆ ಸರ್ಕಾರ ಆದ್ಯತೆ ನೀಡಿದೆ ಎಂದು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಆಂಥ್ರೊಪಿಕ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ಐರಿನಾ ಘೋಷ್ ಅವರು ಸಚಿವರನ್ನು ಭೇಟಿ ಮಾಡಿ, ಕರ್ನಾಟಕದ ಎಐ ಮುನ್ನೋಟ ಹಾಗೂ ಜಾಗತಿಕ ಸಹಕಾರದ ಅವಕಾಶಗಳ ಕುರಿತು ಚರ್ಚಿಸಿದ ಸಂದರ್ಭದಲ್ಲಿ ಅವರು ಈ ವಿಷಯ ಹಂಚಿಕೊಂಡಿದ್ದಾರೆ.

ಎಐ ತಂತ್ರಜ್ಞಾನವನ್ನು ಬಳಸಿಕೊಂಡು ಹೆಚ್ಚು ಸ್ಪಂದನಶೀಲ, ದಕ್ಷ ಹಾಗೂ ನಾಗರಿಕ ಕೇಂದ್ರಿತ ವ್ಯವಸ್ಥೆಗಳನ್ನು ನಿರ್ಮಿಸುವ ಮೂಲಕ ಕರ್ನಾಟಕವನ್ನು ಡಿಜಿಟಲ್ ಆಡಳಿತದಲ್ಲಿ ಮುಂಚೂಣಿಗೆ ತರುವ ಕುರಿತು ಉಭಯ ನಾಯಕರು ಸಮಾಲೋಚನೆ ನಡೆಸಿದರು.

ಪ್ರಿಯಾಂಕ್ ಖರ್ಗೆ ಮಾತನಾಡಿ, ರಾಜ್ಯದ ಕೃತಕ ಬುದ್ಧಿಮತ್ತೆ ದೂರದೃಷ್ಟಿಯು ಅತ್ಯಾಧುನಿಕ ಸಾಮರ್ಥ್ಯಗಳ ವೃದ್ಧಿ, ನಮ್ಮ ನವೋದ್ಯಮ ಪರಿಸರದ ಬಲವರ್ಧನೆ ಹಾಗೂ ಸಾರ್ವಜನಿಕ ಸೇವೆಗಳನ್ನು ಸುಧಾರಿಸಲು ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದರ ಮೇಲೆ ಕೇಂದ್ರೀಕೃತವಾಗಿದೆ. ಆಂಥ್ರೊಪಿಕ್ ಸಂಸ್ಥೆಯೊಂದಿಗಿನ ಈ ಸಮಾಲೋಚನೆಯು ಕೌಶಲ ಅಭಿವೃದ್ಧಿ, ಸಂಶೋಧನೆ ಹಾಗೂ ಎಐ ಆಧಾರಿತ ಆಡಳಿತ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅರ್ಥಪೂರ್ಣ ಸಹಭಾಗಿತ್ವಕ್ಕೆ ದಾರಿ ಮಾಡಿಕೊಟ್ಟಿದೆ. ಇದು ದೀರ್ಘಾವಧಿಯಲ್ಲಿ ಸಾರ್ವಜನಿಕ ಹಿತಾಸಕ್ತಿ ಕಾಯುವ ಸುಸ್ಥಿರ ಮಾದರಿಗಳನ್ನು ರೂಪಿಸಲು ನೆರವಾಗಲಿದೆ ಎಂದು ಹೇಳಿದರು.

ದತ್ತಾಂಶ ಆಧಾರಿತ ಬುದ್ಧಿವಂತ ಆಡಳಿತ: ಆಧುನಿಕ ತಂತ್ರಜ್ಞಾನ ಮತ್ತು ಎಐ ಬಳಸಿ, ಲಭ್ಯವಿರುವ ನಿಖರವಾದ ದತ್ತಾಂಶಗಳ ಆಧಾರದ ಮೇಲೆ ಕ್ಷಿಪ್ರ ನಿರ್ಧಾರ ಕೈಗೊಳ್ಳುವ ಮತ್ತು ನಾಗರಿಕರಿಗೆ ತ್ವರಿತವಾಗಿ ಸೇವೆ ಒದಗಿಸುವ ವ್ಯವಸ್ಥೆ ರೂಪಿಸುವ ಕುರಿತು ಚರ್ಚೆ ನಡೆಸಲಾಗಿದೆ.

ನಾವೀನ್ಯತೆ ಪರಿಸರಕ್ಕೆ ಉತ್ತೇಜನ: ರಾಜ್ಯದಲ್ಲಿ ಕೃತಕ ಬುದ್ಧಿಮತ್ತೆ ಸಂಶೋಧನೆ, ನವೋದ್ಯಮ ಹಾಗೂ ಉದ್ಯಮಶೀಲತೆಯನ್ನು ಮತ್ತಷ್ಟು ಬಲಪಡಿಸಲು 'ಶ್ರೇಷ್ಠತಾ ಕೇಂದ್ರಗಳು' ಮತ್ತು ಇನ್‌ಕ್ಯುಬೇಟರ್‌ಗಳನ್ನು ಸ್ಥಾಪಿಸುವ ಸಾಧ್ಯತೆಗಳ ಪರಿಶೀಲನೆ ನಡೆಸಿದರು.

ಸಾರ್ವಜನಿಕ ಹಿತರಕ್ಷಣೆ ಮತ್ತು ದತ್ತಾಂಶ ಬಳಕೆ: ಸಾರ್ವಜನಿಕ ವಲಯದಲ್ಲಿ ಈಗಾಗಲೇ ಇರುವ ದತ್ತಾಂಶಗಳನ್ನು ಜನರ ಹಿತ ರಕ್ಷಣೆಗೆ ಮತ್ತು ನಾಗರಿಕ ಸೇವೆಗಳನ್ನು ಇನ್ನಷ್ಟು ಜನಸ್ನೇಹಿಯಾಗಿಸಲು ಎಐ ಮೂಲಕ ಮರುರೂಪಿಸಲು ಆದ್ಯತೆ ನೀಡಲಾಗಿದೆ.

ಡೀಪ್‌ಟೆಕ್ ಮತ್ತು ಸಹ–ಸೃಷ್ಟಿ ಸಹಯೋಗ: ಮಾರ್ಗದರ್ಶನ ಹಾಗೂ ಸಹ–ಸೃಷ್ಟಿ ಮಾದರಿಯ ಮೂಲಕ ರಾಜ್ಯದ ಡೀಪ್‌ಟೆಕ್ ನವೋದ್ಯಮಗಳು ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರಗಳ ನಡುವೆ ಬಲವಾದ ಸಹಯೋಗ ಏರ್ಪಡಿಸುವುದು.

ಸರ್ಕಾರ ಹಾಗೂ ಜಾಗತಿಕ ತಂತ್ರಜ್ಞಾನ ಕಂಪನಿಗಳು ಒಟ್ಟಾಗಿ ಭವಿಷ್ಯದ ಅಗತ್ಯಗಳಿಗೆ ತಕ್ಕಂತೆ ಹೊಸ ಉತ್ಪನ್ನ, ಸೇವೆ ಅಥವಾ ಪರಿಹಾರಗಳನ್ನು ಜಂಟಿಯಾಗಿ ರೂಪಿಸುವ ನಿಟ್ಟಿನಲ್ಲಿ ಈ ಸಭೆಯು ಮಹತ್ವದ ಮೈಲಿಗಲ್ಲಾಗಿದೆ. ಈ ಉನ್ನತ ಮಟ್ಟದ ಸಭೆಯಲ್ಲಿ ಕರ್ನಾಟಕ ನಾವೀನ್ಯತೆ ಹಾಗೂ ತಂತ್ರಜ್ಞಾನ ಸೊಸೈಟಿ ವ್ಯವಸ್ಥಾಪಕ ನಿರ್ದೇಶಕ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಸುರಕ್ಷತೆಗೆ ಬಂಟ್ವಾಳದ ಪೆರಾಜೆಯ ಖಾಸಗಿ ಶಾಲೆಯಲ್ಲಿ ಅತ್ಯಾಧುನಿಕ ಡಿಜಿಟಲ್ ವ್ಯವಸ್ಥೆ ಜಾರಿ

ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಮಾಣಿ ಪೆರಾಜೆಯ ಖಾಸಗಿ ಶಾಲೆ, ರಾಜ್ಯದಲ್ಲೇ ಮೊದಲ ಬಾರಿಗೆ ಮಕ್ಕಳ ಸುರಕ್ಷತೆಗಾಗಿ, ರೇಡಿಯೋ ಫ್ರೀಕ್ವೆನ್ಸಿ ಐಡೆಂಟಿಫಿಕೇಶನ್ – ಆರ್‌ಎಫ್‌ಐಡಿ ಆಧಾರಿತ, ಡಿಜಿಟಲ್ ವಿದ್ಯಾರ್ಥಿ ಸುರಕ್ಷತಾ ವ್ಯವಸ್ಥೆ ಜಾರಿಗೆ ತಂದಿದೆ.

ಈ ವ್ಯವಸ್ಥೆಯಡಿ, ವಿದ್ಯಾರ್ಥಿಗಳು ಶಾಲೆಗೆ ಪ್ರವೇಶಿಸುವಾಗ ಮತ್ತು ಶಾಲೆಯಿಂದ ನಿರ್ಗಮಿಸುವಾಗ ಪೋಷಕರ ಮೊಬೈಲ್ ಫೋನ್‌ಗೆ, ಎಸ್‌ಎಂಎಸ್ ರವಾನೆಯಾಗುತ್ತದೆ. ಇದರಿಂದ ಮಗು ಸುರಕ್ಷಿತವಾಗಿ ಶಾಲೆ ತಲುಪಿರುವ ಹಾಗೂ ಅಲ್ಲಿಂದ ನಿರ್ಗಮಿಸಿರುವ ಮಾಹಿತಿ, ಕ್ಷಣಾರ್ಧದಲ್ಲೇ ತಿಳಿಯುತ್ತದೆ.

ಇತ್ತೀಚಿನ ದಿನಗಳಲ್ಲಿ ಮಕ್ಕಳ ಸುರಕ್ಷತೆಗೆ ಅತಿ ಮುಖ್ಯ ಎನ್ನುವಂತಹ ಹಲವು ಘಟನೆಗಳು ನಡೆಯುತ್ತಿವೆ. ಅದರಲ್ಲಿಯೂ ಶಾಲೆಗೆ ತೆರಳುವ ಮಕ್ಕಳ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಬೇಕಾದಂತಹ ಪರಿಸ್ಥಿತಿ ಇದೆ. ಈ ಹಿನ್ನೆಲೆಯಲ್ಲಿ, ಬಂಟ್ವಾಳದ ಮಾಣಿ ಪೆರಾಜೆಯ ಖಾಸಗಿ ಶಾಲೆಯು, ಸಮಗ್ರ ಆರ್‌ಎಫ್‌ಐಡಿ ಆಧಾರಿತ ಡಿಜಿಟಲ್ ವಿದ್ಯಾರ್ಥಿ ಸುರಕ್ಷತಾ ವ್ಯವಸ್ಥೆ ಜಾರಿಗೊಳಿಸಿದೆ. ಶಾಲೆಯ ಪ್ರತಿ ವಿದ್ಯಾರ್ಥಿಗೂ, ಡಿಜಿಟಲ್ ಆರ್‌ಎಫ್‌ಐಡಿ ಗುರುತು ಚೀಟಿ ನೀಡಿದೆ.

ಇದರಿಂದ ವಿದ್ಯಾರ್ಥಿಗಳು ಶಾಲಾ ಪ್ರವೇಶ ದ್ವಾರದಲ್ಲಿರುವ, ಆರ್‌ಎಫ್‌ಐಡಿ ಟರ್ನ್ ಸ್ಟೈಲ್ ಗೇಟ್ ಮೂಲಕ ಒಳ ಪ್ರವೇಶಿಸುವಾಗ ಹಾಗೂ ಸಂಜೆ ಹೊರಬರುವಾಗ ತಮ್ಮ ಗುರುತಿನ ಚೀಟಿ ಸ್ಕ್ಯಾನ್ ಮಾಡಬೇಕಾಗುತ್ತದೆ. ಸ್ಕ್ಯಾನ್ ಆದ ಕೂಡಲೇ, ಮಗುವಿನ ಪೋಷಕರ ಮೊಬೈಲ್ ಫೋನ್‌ಗೆ ಎಸ್‌ಎಂಎಸ್ ಮತ್ತು ನೋಟಿಫಿಕೇಶನ್ ತಲುಪುವುದರಿಂದ, ಮಕ್ಕಳ ಸುರಕ್ಷತೆಯನ್ನು ಖಾತ್ರಿ ಪಡಿಸಲಾಗುತ್ತದೆ.

ಅದೇ ರೀತಿ ಶಾಲೆ ತನ್ನ ಸಾರಿಗೆ ವ್ಯವಸ್ಥೆಯನ್ನೂ ಕೂಡ ಸಂಪೂರ್ಣ ಡಿಜಿಟಲ್ ಮಾದರಿಗೆ ಪರಿವರ್ತಿಸಿದೆ. ಹೀಗಾಗಿ ವಿದ್ಯಾರ್ಥಿಗಳು ಶಾಲಾ ಬಸ್ ಏರುವಾಗ ಮತ್ತು ಇಳಿಯುವಾಗ, ಬಸ್ ನಲ್ಲಿರುವ ಆರ್‌ಎಫ್‌ಐಡಿ ರೀಡರ್ ನಲ್ಲಿ ಐಡೆಂಟಿಟಿ ಕಾರ್ಡ್ ಸ್ಕ್ಯಾನ್ ಮಾಡುವುದರಿಂದ, ಪೋಷಕರು ತಮ್ಮ ಮಗು ಯಾವ ಸಮಯದಲ್ಲಿ, ಯಾವ ಬಸ್‌ನಲ್ಲಿ ಪ್ರಯಾಣಿಸುತ್ತಿದೆ ಎನ್ನುವ ಮಾಹಿತಿಯನ್ನೂ ತಿಳಿದುಕೊಳ್ಳಬಹುದಾಗಿದೆ.

ಇತ್ತೀಚೆಗೆ ಹೈಕೋರ್ಟ್ ತನ್ನ ತೀರ್ಪಿನಲ್ಲಿ ವಿದ್ಯಾರ್ಥಿಗಳು ಶಾಲೆಯಿಂದ ಮನೆಗೆ ಸುರಕ್ಷಿತವಾಗಿ ತಲುಪುವವರೆಗೂ, ಅವರ ಸುರಕ್ಷತೆಯ ಹೊಣೆ, ಶಾಲಾ ಆಡಳಿತ ಮಂಡಳಿಯದ್ದಾಗಿರುತ್ತದೆ ಎಂದು ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿತ್ತು. ಈ ಹಿನ್ನೆಲೆಯಲ್ಲಿ, ಈ ಖಾಸಗಿ ಶಾಲೆ, ಆರ್‌ಎಫ್‌ಐಡಿ ಆಧಾರಿತ ಡಿಜಿಟಲ್ ಸುರಕ್ಷತಾ ವ್ಯವಸ್ಥೆ ಜಾರಿಗೊಳಿಸಿರುವುದು ಪೋಷಕರಿಗೆ ನಿರಾಳ ತಂದಿದೆ. ಈ ವ್ಯವಸ್ಥೆ ಇತರ ಶಾಲೆಗಳಿಗೂ ಮಾದರಿಯಾಗಿದೆ.

ಶಾಲಾ ಆಡಳಿತ ಮಂಡಳಿ ಅಧ್ಯಕ್ಷ ಪ್ರಹ್ಲಾದ ಜೆ. ಶೆಟ್ಟಿ ಮಾತನಾಡಿ, ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಶಾಲೆಯಲ್ಲಿ ಆರ್‌ಎಫ್‌ಐಡಿ ವ್ಯವಸ್ಥೆ ಜಾರಿಗೆ ತರಲಾಗಿದೆ. ಈ ವ್ಯವಸ್ಥೆಯು ಪೋಷಕರು ತಮ್ಮ ಮಕ್ಕಳ ಮೇಲೆ ನಿಗಾ ಇರಿಸಲು ನೆರವಾಗಿದೆ ಎಂದು ತಿಳಿಸಿದರು.

ಶಾಲಾ ಆಡಳಿತ ಮಂಡಳಿ ಕಾರ್ಯದರ್ಶಿ ಮಹೇಶ್ ಜೆ. ಶೆಟ್ಟಿ ಮಾತನಾಡಿ, ಕೇಂದ್ರ ಸರ್ಕಾರದ ಡಿಜಿಟಲ್ ಇಂಡಿಯಾದಿಂದ ಪ್ರೇರಿತಗೊಂಡು ಶಾಲೆಯಲ್ಲಿ ಆರ್‌ಎಫ್‌ಐಡಿ ವ್ಯವಸ್ಥೆಯನ್ನು ಅಳವಡಿಸಿ ಕೊಳ್ಳಲಾಗಿದೆ.

ಇದರಿಂದ ಮಕ್ಕಳನ್ನು ಶಾಲೆಗೆ ಕಳುಹಿಸಿದ ನಂತರ ಪೋಷಕರು ಮಕ್ಕಳ ಸುರಕ್ಷತೆಯನ್ನು ಖಚಿತ ಪಡಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಮುಖ್ಯ ಶಿಕ್ಷಕಿ ಸುಪ್ರಿಯಾ ಮಾಣಿ ಮಾತನಾಡಿ, ಇದು ಸ್ವಯಂಚಾಲಿತ ದೃಢೀಕರಣ ವ್ಯವಸ್ಥೆಯಾಗಿದ್ದು, ಇದರಿಂದ ಮಕ್ಕಳ ಸುರಕ್ಷತೆಯನ್ನು ಶಾಲೆಗಳೇ ಮಾಡುವಂತೆ ನ್ಯಾಯಾಲಯದ ಆದೇಶವನ್ನು ಸಹ ಪಾಲಿಸಲಾಗುತ್ತಿದೆ ಎಂದು ತಿಳಿಸಿದರು.

ವಿದ್ಯಾರ್ಥಿನಿ ದಿಶಾ ಡಿ. ನಾಯಕ್ ಮಾತನಾಡಿ, ಕಳೆದ ಒಂದೂವರೆ ವರ್ಷದಿಂದ ಶಾಲೆಯಲ್ಲಿ ಆರ್‌ಎಫ್‌ಐಡಿ ವ್ಯವಸ್ಥೆ ಇದ್ದು, ಶಾಲೆಗೆ ತಲುಪಿದಾಗ ಮತ್ತು ನಿರ್ಗಮಿಸಿದಾಗ, ತಮ್ಮ ಪೋಷಕರಿಗೆ ಮಾಹಿತಿ ರವಾನೆಯಾಗುತ್ತದೆ. ಇದಲ್ಲದೆ, ಹಾಜರಾತಿಯೂ ಡಿಜಿಟಲ್‌ನಲ್ಲಿಯೇ ಆಗುತ್ತದೆ ಎಂದರು.

# ಕಿದ್ವಾಯಿ ಆಸ್ಪತ್ರೆಯಲ್ಲಿ ವೈದ್ಯರಿಗೆ ಸನ್ಮಾನ

## ಲಯನ್ಸ್ 317ಎ ವತಿಯಿಂದ ಬೃಹತ್ ಸೇವಾ ಚಟುವಟಿಕೆ

ಬೆಂಗಳೂರು

ರಾಷ್ಟ್ರೀಯ ವೈದ್ಯರ ದಿನಾಚರಣೆ ಹಾಗೂ ಲಯನಿಸ್ಟಿಕ್ ವರ್ಷದ ಪ್ರಥಮ ದಿನದ ಅಂಗವಾಗಿ ಲಯನ್ಸ್ ಇಂಟರ್‌ನ್ಯಾಷನಲ್ ಜಿಲ್ಲೆ 317ಎ ವತಿಯಿಂದ ಕಿದ್ವಾಯಿ ಸ್ಮಾರಕ ಕ್ಯಾನ್ಸರ್ ಆಸ್ಪತ್ರೆಯಲ್ಲಿ ವೈದ್ಯರನ್ನು ಸನ್ಮಾನಿಸಿ, ರಕ್ತದಾನ ಸೇರಿದಂತೆ ವಿವಿಧ ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಕಿದ್ವಾಯಿ ಆಸ್ಪತ್ರೆಯ ನಿರ್ದೇಶಕ ಡಾ. ನವೀನ್, ನಿವಾಸಿ ವೈದ್ಯಾಧಿಕಾರಿ ಡಾ. ಕೃಷ್ಣಪ್ಪ ಸೇರಿದಂತೆ ಹಲವು ವೈದ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಲಯನ್ಸ್ ಇಂಟರ್ ನ್ಯಾಷನಲ್ ಜಿಲ್ಲೆ 317ಎ ರ ದ್ವಿತೀಯ ಉಪ ಜಿಲ್ಲಾ ಗವರ್ನರ್ ಲಯನ್ ಟಿ.ಎಸ್. ರಾಜನ್, ಜಿಲ್ಲಾ ಗವರ್ನರ್ ಲಯನ್ ಕೆ.ಎಸ್. ಈಶ್ವರನ್ ಅವರ



ಮಾರ್ಗದರ್ಶನದಲ್ಲಿ ಲಯನಿಸ್ಟಿಕ್ ವರ್ಷದ ಮೊದಲ ದಿನವೇ ಅರ್ಥಪೂರ್ಣ ಸೇವಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಿದ್ವಾಯಿ ಆಸ್ಪತ್ರೆಯ ರೋಗಿಗಳಿಗೆ ಆಹಾರ, ಉಣ್ಣೆಯ ಕಂಬಳಿ ಹಾಗೂ ಟೋಪಿಗಳ ವಿತರಣೆ, ವಿಜಯನಗರದ ಲಯನ್ಸ್ ಬ್ಲಡ್ ಸೆಂಟರ್ ಮೂಲಕ 100 ಯೂನಿಟ್ ರಕ್ತದಾನ ಹಾಗೂ ಕನಕಪುರದ ಲಯನ್ಸ್ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣೆ ಸೇರಿದಂತೆ ಹಲವು ಸೇವಾ ಕಾರ್ಯಕ್ರಮಗಳನ್ನು ನಡೆಸಲಾಯಿತು.

ಲಯನ್ಸ್ ಜಿಲ್ಲೆ 317ಎ ರಾಯಭಾರಿ ಲಯನ್ ದ್ವಾರಕಾನಾಥ್ ಮಾತನಾಡಿ, ವೈದ್ಯರ ಸೇವೆಯನ್ನು ಗೌರವಿಸುವ ಉದ್ದೇಶದಿಂದ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಸೇವಾ ಚಟುವಟಿಕೆಗಳೊಂದಿಗೆ ಆಚರಿಸಲಾಗಿದೆ ಎಂದು ಹೇಳಿದರು.

ಎಡಿಸಿಎಸ್ ಲಯನ್ ಎಸ್. ಮನೋಜ್ ಕುಮಾರ್ ಮಾತನಾಡಿ, ಸಮಾಜ ಸೇವೆಯ ಕಾರ್ಯಗಳು ಮುಂದಿನ ದಿನಗಳಲ್ಲಿಯೂ ನಿರಂತರವಾಗಿ ಮುಂದುವರಿಯಲಿವೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಲಯನ್ ಭಾರತಿ ಕೃಷ್ಣಮೂರ್ತಿ, ಲಯನ್ ರಮಣಿ ರಾಜನ್, ಲಯನ್ ಸೋಮಶೇಖರ್, ಲಯನ್ ಶಿವಪ್ರಭಾ, ಲಯನ್ ಶ್ರೀನಾಥ್, ಲಯನ್ ರಾಮಕೃಷ್ಣಪ್ಪ, ಲಯನ್ ಡಾ. ಸುಮಿತ್ರಾ ಗೌಡ, ಲಯನ್ ಡಾ. ಅನಿತಾ, ಲಯನ್ ಮಿಲನ್ ಜಾಧವ್, ಲಯನ್ ರಾಜ ನಂಜುಂಡಯ್ಯ ಸೇರಿದಂತೆ ಲಯನ್ಸ್ ಹಾಗೂ ಲಿಯೋ ಕ್ಲಬ್ ಪದಾಧಿಕಾರಿಗಳು, ಸದಸ್ಯರು, ವೈದ್ಯರು ಮತ್ತು ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

15/07/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಹಂಪಿ, ಮೈಸೂರು ಹಾಗೂ ಲಕ್ಕುಂಡಿ ತಾಣಗಳ ಅಭಿವೃದ್ಧಿಗೆ ಬೃಹತ್ ಯೋಜನೆ

### ಖಾಸಗಿ ಸಹಭಾಗಿತ್ವ ಹಾಗೂ ವಾಯು–ರೈಲು ಸಂಪರ್ಕ ಸುಧಾರಣೆಯೊಂದಿಗೆ ರಾಜ್ಯದ 50 ಪ್ರವಾಸಿ ತಾಣಗಳಿಗೆ ಕಾಯಕಲ್ಪ: ಸಚಿವ ಕೆ.ಜೆ.ಜಾರ್ಜ್

ವಿಜಯನಗರ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 50 ಜಾಗತಿಕ ಪ್ರವಾಸಿ ತಾಣಗಳ ಅಭಿವೃದ್ಧಿ ಯೋಜನೆಯಡಿ ಕರ್ನಾಟಕದ ಐತಿಹಾಸಿಕ ತಾಣಗಳಾದ ಹಂಪಿ, ಮೈಸೂರು ಮತ್ತು ಲಕ್ಕುಂಡಿ ಕ್ಷೇತ್ರಗಳನ್ನು ಜಾಗತಿಕ ಮಟ್ಟದ ಪ್ರವಾಸಿ ಕೇಂದ್ರಗಳನ್ನಾಗಿ ಪರಿವರ್ತಿಸಲು ರಾಜ್ಯ ಪ್ರವಾಸೋದ್ಯಮ ಇಲಾಖೆ ತೀವ್ರ ಸಿದ್ಧತೆ ನಡೆಸಿದೆ. ರಾಜ್ಯದ ಪ್ರವಾಸೋದ್ಯಮದ ಸರ್ವತೋಮುಖ ಬೆಳವಣಿಗೆಗೆ ಖಾಸಗಿ ಸಹಭಾಗಿತ್ವ ಅತ್ಯಗತ್ಯ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ನಗರದ ಹೊಸ ಮಲಪನಗುಡಿಯಲ್ಲಿನ ಹೆರಿಟೇಜ್ ರೆಸಾರ್ಟ್‌ನಲ್ಲಿ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್‌ಮೆಂಟ್ ಯೋಜನೆಯಡಿ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಕುರಿತು ರಾಜ್ಯ ಮಟ್ಟದ ಸಮಾಲೋಚನಾ ಕಾರ್ಯಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿ, ಜಾಗತಿಕ ಪ್ರವಾಸಿ ತಾಣಗಳ ಪಟ್ಟಿಗೆ ಕರ್ನಾಟಕದಿಂದ ಮೂರು ಪ್ರಮುಖ ಐತಿಹಾಸಿಕ ಮತ್ತು ಸಾಂಸ್ಕೃತಿಕ ಕೇಂದ್ರಗಳನ್ನು ಪ್ರಸ್ತಾಪಿಸಲಾಗಿದೆ.

ಯುನೆಸ್ಕೋ ಜಾಗತಿಕ ಪಾರಂಪರಿಕ ತಾಣವಾಗಿರುವುದರಿಂದ ಹಂಪಿಗೆ ಪ್ರಥಮ ಆದ್ಯತೆ ನೀಡಲಾಗಿದ್ದು, ಇದನ್ನು ಭಾರತದ ಪ್ರವಾಸೋದ್ಯಮದ ಪ್ರಮುಖ ಹೆಗ್ಗುರುತನ್ನಾಗಿ ರೂಪಿಸಲಾಗುವುದು ಎಂದರು.

ಈಗಾಗಲೇ ಸಾಂಸ್ಕೃತಿಕ ರಾಜಧಾನಿಯಾಗಿ ಚಿರಪರಿಚಿತವಿರುವ ಮೈಸೂರನ್ನು ಮತ್ತಷ್ಟು ಆಧುನಿಕ ಸೌಲಭ್ಯಗಳೊಂದಿಗೆ ಪ್ರವಾಸೋದ್ಯಮದ ಬೃಹತ್ ಹಬ್ ಆಗಿ ಬಲಪಡಿಸಲಾಗುವುದು. ಪ್ರಸ್ತುತ ಭಾರತೀಯ ಪುರಾತತ್ವ ಇಲಾಖೆಯಿಂದ ವ್ಯಾಪಕ ಉತ್ಖನನ ಕಾರ್ಯಗಳು ನಡೆಯುತ್ತಿದ್ದು, ಕಲ್ಯಾಣಿ ಚಾಲುಕ್ಯರ ಶೈಲಿಯ ಲಕ್ಕುಂಡಿ ತಾಣವನ್ನು



ಭವಿಷ್ಯದ ಪ್ರಮುಖ ಪ್ರವಾಸಿ ಆಕರ್ಷಣೆಯನ್ನಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದು. ಹಂಪಿ ಸೇರಿದಂತೆ ಪ್ರಮುಖ ಪಾರಂಪರಿಕ ತಾಣಗಳಲ್ಲಿ ಜಿಲ್ಲಾಡಳಿತ, ರಾಜ್ಯ ಪುರಾತತ್ವ ಇಲಾಖೆ ಮತ್ತು ಕೇಂದ್ರ ಪುರಾತತ್ವ ಸರ್ವೇಕ್ಷಣಾ ಇಲಾಖೆ ಗಳ ನಡುವಿನ ಆಡಳಿತಾತ್ಮಕ ವಿಳಂಬವನ್ನು ತಪ್ಪಿಸಲು, ಡೆಸ್ಟಿನೇಶನ್ ಮ್ಯಾನೇಜ್‌ಮೆಂಟ್ ಆರ್ಗನೈಸೇಶನ್ ರಚಿಸುವ ಕುರಿತು ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಲಾಗುತ್ತಿದೆ. ಇದು ಪ್ರವಾಸೋದ್ಯಮ ಉದ್ಯಮದ ಹೂಡಿಕೆದಾರರಿಗೆ ಹಾಗೂ ಪ್ರವಾಸಿಗರಿಗೆ ಎದುರಾಗುವ ಗೊಂದಲಗಳ ನಿವಾರಿಸಲಿದೆ.

ಪ್ರವಾಸಿಗರ ಸುಗಮ ಸಂಚಾರ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಒತ್ತು ನೀಡುವುದರ ಜತೆಗೆ ಹೊಸಪೇಟೆ, ಬಳ್ಳಾರಿ ಭಾಗದ ಜಿಂದಾಲ್ ವಿಮಾನ ನಿಲ್ದಾಣದ ರನ್‌ವೇ ವಿಸ್ತರಿಸಲು ಸೂಕ್ತ ಕ್ರಮ ವಹಿಸಲಾಗುವುದು. ಇದರೊಂದಿಗೆ, ದೇಶದ ಪ್ರಮುಖ ನಗರಗಳಿಂದ ಕರಾವಳಿ ಮತ್ತು ಉತ್ತರ ಕರ್ನಾಟಕದ ಐತಿಹಾಸಿಕ ತಾಣಗಳಿಗೆ ಸಂಪರ್ಕ ಕಲ್ಪಿಸುವ ರೈಲುಗಳ ಸಂಖ್ಯೆಯನ್ನು ಹೆಚ್ಚಿಸಲು ಕೇಂದ್ರ ರೈಲ್ವೆ ಸಚಿವಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

**ಖಾಸಗಿ ವಲಯದೊಂದಿಗೆ ಸಹಭಾಗಿತ್ವ:**

ಪ್ರವಾಸೋದ್ಯಮ ಕ್ಷೇತ್ರದಲ್ಲಿ ಕರ್ನಾಟಕವು ಜಗತ್ತಿನಲ್ಲೇ ಅತ್ಯುತ್ತಮ ಸಾಮರ್ಥ್ಯ ಹೊಂದಿದೆ. ಕೆಎಸ್‌ಟಿಡಿಸಿ ಮತ್ತು ಜಂಗಲ್ ಲಾಡ್ಜಸ್ ಸಂಸ್ಥೆಗಳು ಉತ್ತಮ ಕೆಲಸ ಮಾಡುತ್ತಿದ್ದರೂ, ಖಾಸಗಿ ಹೂಡಿಕೆದಾರರ ಸಕ್ರಿಯ ಪಾಲ್ಗೊಳ್ಳುವಿಕೆಯಿಲ್ಲದೆ ಪ್ರವಾಸೋದ್ಯಮದ ಕ್ರಿಯಾತ್ಮಕ ಬದಲಾವಣೆ ಸಾಧ್ಯವಿಲ್ಲ. ಸರ್ಕಾರ ಮತ್ತು ಖಾಸಗಿ ಪಾಲುದಾರರು ಒಟ್ಟಾಗಿ ಒಂದು ತಂಡವಾಗಿ ಕೆಲಸ ಮಾಡಿ ಕರ್ನಾಟಕದ ವರ್ಚಸ್ಸನ್ನು ಜಾಗತಿಕ ಮಟ್ಟದಲ್ಲಿ ಹೆಚ್ಚಿಸಬೇಕಿದೆ ಎಂದರು.

ಶಾಸಕ ಹೆಚ್.ಆರ್. ಗವಿಯಪ್ಪ ಮಾತನಾಡಿ, ಹಂಪಿಯ ಸುಮಾರು 1200ಕ್ಕೂ ಹೆಚ್ಚು ಸ್ಮಾರಕಗಳನ್ನು ಒಳಗೊಂಡಂತೆ ಪ್ರವಾಸಿಗರಿಗಾಗಿ ಸುಸಜ್ಜಿತವಾದ 15.4 ಕಿ.ಮೀ ಉದ್ದದ ಪ್ರದಕ್ಷಿಣಾ ಪಥ ನಿರ್ಮಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಹೆರಿಟೇಜ್ ವಾಕ್ ಮೂಲಕ ಪ್ರವಾಸಿಗರಿಗೆ ಹಂಪಿಯ ವೈಭವವನ್ನು ಹತ್ತಿರದಿಂದ ವೀಕ್ಷಿಸಲು ಅನುಕೂಲವಾಗಲಿದೆ.

ಹಂಪಿ ಸ್ಮಾರಕಗಳ ದೀರ್ಘಾವಧಿ ರಕ್ಷಣೆಗಾಗಿ ಭಾರತೀಯ ಪುರಾತತ್ವ ಸಮೀಕ್ಷೆ ಸಹಯೋಗದೊಂದಿಗೆ ವೈಜ್ಞಾನಿಕ ದಸ್ತಾವೇಜೀಕರಣ ಮತ್ತು ಡಿಜಿಟಲ್ ಪ್ರಿಸರ್ವೇಶನ್ ಯೋಜನೆಗೆ ಚಾಲನೆ ನೀಡಲು ಚಿಂತನೆ ನಡೆಸಲಾಗಿದೆ ಎಂದರು.

ಹಂಪಿ ಮತ್ತು ಬಳ್ಳಾರಿ ರೈಲ್ವೆ ನಿಲ್ದಾಣಗಳನ್ನು ಪಾರಂಪರಿಕ ನಿಲ್ದಾಣಗಳಾಗಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಹಂಪಿ ನಿಲ್ದಾಣಕ್ಕೆ ವಿಶ್ವಪ್ರಸಿದ್ಧ ವಿರೂಪಾಕ್ಷ ದೇವಸ್ಥಾನದ ಶೈಲಿಯ ಪಾರಂಪರಿಕ ನೋಟ ನೀಡಲು ಈಗಾಗಲೇ ಕ್ರಮ ವಹಿಸಲಾಗಿದೆ. ಕಮಲಾಪುರದ ಐತಿಹಾಸಿಕ ಕೆರೆಯ ಸೌಂದರ್ಯೀಕರಣಕ್ಕಾಗಿ ಕೆರೆಯ ಸುತ್ತಲೂ ಸಂಪೂರ್ಣವಾಗಿ ಒಂದು ಪ್ರವಾಸಿ ಸರ್ಕ್ಯೂಟ್ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಅದಷ್ಟೇ ಅಲ್ಲದೇ ಪ್ರವಾಸಿಗರಿಗೆ ಹಂಪಿಯ ಸಮಗ್ರ ಐತಿಹಾಸಿಕ ಮಾಹಿತಿ ನೀಡಲು ಅಂತಾರಾಷ್ಟ್ರೀಯ ಗುಣಮಟ್ಟದ ಇಂಟರ್‌ಪ್ರಿಟೇಷನ್ ಸೆಂಟರ್ ಹಾಗೂ ಪ್ರವಾಸೋದ್ಯಮ ಕ್ಷೇತ್ರಕ್ಕೆ ಉತ್ತೇಜನ ನೀಡಲು ಅಂತಾರಾಷ್ಟ್ರೀಯ ಪ್ರವಾಸೋದ್ಯಮ ಕಾಲೇಜು ಆರಂಭಿಸುವ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಮಾತನಾಡಿ, ಪ್ರವಾಸೋದ್ಯಮದ ಜಾಗತಿಕ ಗುಣಮಟ್ಟದಲ್ಲಿ ಕಾಂಬೋಡಿಯಾ ಅಥವಾ ಶ್ರೀಲಂಕಾದಂತಹ ದೇಶಗಳಿಗೆ ಹೋಲಿಸಿದರೆ ನಾವು ಹಿಂದುಳಿದಿದ್ದು, ಆಡಳಿತಾತ್ಮಕ ವ್ಯವಸ್ಥೆಯನ್ನು ಸುಧಾರಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳ ನಡುವಿನ ಸಮನ್ವಯ ಕೊರತೆಯಿಂದ ಕಡತಗಳು ವಿಳಂಬವಾಗುತ್ತಿದ್ದು, ಹೂಡಿಕೆದಾರರನ್ನು ಆಕರ್ಷಿಸಲು ತಕ್ಷಣವೇ ಸಿಂಗಲ್ ವಿಂಡೋ ಸಿಸ್ಟಮ್ ಜಾರಿಗೆ ತರಬೇಕು ಎಂದರು.

ಪ್ರಸ್ತುತ ಹಂಪಿಯ ಹೋಟೆಲ್ ಹಾಗೂ ಪ್ರವಾಸೋದ್ಯಮ ಉದ್ಯಮಗಳಲ್ಲಿ ಹೊರರಾಜ್ಯದವರೇ ಹೆಚ್ಚಾಗಿ ಕೆಲಸ ಮಾಡುತ್ತಿದ್ದು, ಸ್ಥಳೀಯ ಗ್ರಾಮೀಣ ಯುವಕರಿಗೆ ಉದ್ಯೋಗ ಸಿಗುವಂತಾಗಲು ಕೌಶಲ್ಯ ತರಬೇತಿ ಕೇಂದ್ರವನ್ನು ಆರಂಭಿಸಬೇಕು. ಹಂಪಿ, ಕಮಲಾಪುರ ಸೇರಿದಂತೆ ಸುತ್ತಮುತ್ತಲಿನ 30ಕ್ಕೂ ಹೆಚ್ಚು ಹಿಂದುಳಿದ ಹಳ್ಳಿಗಳಲ್ಲಿ ಬಯಲು ಶೌಚ ಮುಕ್ತ ಪರಿಸರ ನಿರ್ಮಾಣ, ಕುಡಿಯುವ ನೀರು ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಸುಧಾರಿಸಲು ಲಭ್ಯವಿರುವ ಅನುದಾನವನ್ನು ಜಿಲ್ಲಾಡಳಿತ ಹಾಗೂ ಸ್ಥಳೀಯ ಶಾಸಕರು ಜಂಟಿಯಾಗಿ ಸಮರ್ಪಕವಾಗಿ ಬಳಸಿಕೊಳ್ಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಆನಂದ್ ಸಿಂಗ್, ಪ್ರವಾಸೋದ್ಯಮ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕ್ ಚಂದ್ರ, ಪ್ರವಾಸೋದ್ಯಮ ಇಲಾಖೆ ಜಂಟಿ ಕಾರ್ಯದರ್ಶಿ ಸುವಾಸಿಶ್ ದಾಸ್, ಪ್ರವಾಸೋದ್ಯಮ ಇಲಾಖೆ ಆಯುಕ್ತ ಡಾ.ವಿ.ರಾಮ್ ಪ್ರಸಾತ್ ಮನೋಹರ್, ಅಪರ ಜಿಲ್ಲಾಧಿಕಾರಿ ಈ.ಬಾಲಕೃಷ್ಣ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಉಪವಿಭಾಗಾಧಿಕಾರಿ ಪಿ.ವಿವೇಕಾನಂದ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಪ್ರಭುಲಿಂಗ ಎಸ್. ತಳಕೇರಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಉದ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಮಧ್ಯಸ್ಥಿಕೆಯಲ್ಲಿ ಎಸ್ಐಆರ್ ಪ್ರಕ್ರಿಯೆ ನಡೆಯಲಿ: ಬಿ.ಶ್ರೀರಾಮುಲು ಮನವಿ

ಬಳ್ಳಾರಿ

ಕೇಂದ್ರದ ಚುನಾವಣಾ ಆಯೋಗ ಭಾರತದ ಹಿತದೃಷ್ಟಿಯಿಂದ ಎಸ್ಐಆರ್ ಪ್ರಕ್ರಿಯೆ ಜಾರಿಗೊಳಿಸಿದ್ದರೆ ರಾಜ್ಯ ಸರ್ಕಾರ ಎಸ್ಐಆರ್ ಪ್ರಕ್ರಿಯೆಯ ಪಾವಿತ್ರ್ಯತೆಯನ್ನು ಹಾಳು ಮಾಡುತ್ತಿದೆ. ಚುನಾವಣಾ ವ್ಯವಸ್ಥೆಯನ್ನು ದಿಕ್ಕುತಪ್ಪಿಸುವ ಕೆಲಸ ಮಾಡುತ್ತಿದ್ದು, ಪಶ್ಚಿಮ ಬಂಗಾಳ ರೀತಿಯಲ್ಲಿಯೇ ಕೇಂದ್ರ ಚುನಾವಣೆ ಆಯೋಗದ ಮಧ್ಯಸ್ಥಿಕೆ ವಹಿಸಬೇಕು. ರಾಜ್ಯದಲ್ಲಿ ಎಸ್ಐಆರ್ ಪ್ರಕ್ರಿಯೆ ನಡೆಯಬೇಕು ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಒತ್ತಾಯಿಸಿದರು.



ಇಲ್ಲಿನ ತಮ್ಮ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ದುರ್ಬಳಕೆ ಮಾಡಿಕೊಳ್ಳುತ್ತಿದೆ. ಇದನ್ನು ತಕ್ಷಣ ರದ್ದುಪಡಿಸಬೇಕು.

ಎಸ್ಐಆರ್ ಸಮೀಕ್ಷೆ ರಾಜ್ಯದಲ್ಲಿ ಪಾರದರ್ಶಕವಾಗಿ ನಡೆಯುತ್ತಿಲ್ಲ. ತನ್ನ ಮೂಗಿನ ನೇರಕ್ಕೆ ರಾಜ್ಯ ಸರಕಾರ ಎಸ್ಐಆರ್ ನಡೆಸುತ್ತಿದೆ. ಅಕ್ರಮ ವಲಸಿಗರು, ಕಳ್ಳ ಮತದಾರರನ್ನು ರಕ್ಷಿಸುವ ಕಾರ್ಯ ನಡೆಯುತ್ತಿದೆ. ಕೆಲ ಬಿಎಲ್‌ಒಗಳು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಪಾಲಿಸದೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸುವ ಬದಲು ಶಾದಿ ಮಹಲ್, ಮಸೀದಿ ಹಾಗೂ ಸಮುದಾಯ ಭವನಗಳಲ್ಲಿ ಕುಳಿತು ಕಾರ್ಯನಿರ್ವಹಿಸುತ್ತಿದ್ದಾರೆ.

ಈ ರೀತಿಯಲ್ಲಿ ನಡೆಸಿರುವ ಸಮೀಕ್ಷೆಯನ್ನು ಕೂಡಲೇ ರದ್ದುಪಡಿಸಿ, ನಿಯಮ ಉಲ್ಲಂಘಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಬಂಧಿಸಬೇಕು ಎಂದು ಆಗ್ರಹಿಸಿದರು.

ಅಕ್ರಮವಾಗಿ ದೇಶ ಪ್ರವೇಶಿಸಿರುವ ಬಾಂಗ್ಲಾದೇಶಿ ವಲಸಿಗರಿಗೆ ಗುರುತಿನ ಚೀಟಿ ಒದಗಿಸಲು ಸರ್ಕಾರ ಬೆಂಬಲ ನೀಡುತ್ತಿದೆ. ಇಂತಹ ಅಕ್ರಮಗಳು ದೇಶದ ಭದ್ರತೆಗೆ ಅಪಾಯಕಾರಿಯಾಗಿವೆ.

ಕಾಂಗ್ರೆಸ್ ಪಕ್ಷವು ಮತಬ್ಯಾಂಕ್ ರಾಜಕಾರಣಕ್ಕಾಗಿ ಇಂತಹ ನೀತಿಗಳನ್ನು ಅನುಸರಿಸುತ್ತಿದೆ. ಕಾಂಗ್ರೆಸ್ ಸರ್ಕಾರಕ್ಕೆ ದೇಶದ ಭದ್ರತೆಗಿಂತ ರಾಜಕಾರಣ ಮುಖ್ಯವಾಗಿದೆ ಎಂದು ಆರೋಪಿಸಿದರು.

2028ರಲ್ಲಿ ಮತ್ತೆ ಅಧಿಕಾರಕ್ಕೆ ಬರುತ್ತೇವೆ ಎಂಬುದು ಕಾಂಗ್ರೆಸ್ ನಾಯಕರ ಹಗಲು ಕನಸು ಎಂದು ಟೀಕಿಸಿದ ಶ್ರೀರಾಮುಲು ಅವರು, 2028ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುತ್ತದೆ ಎಂಬ ಹೇಳಿಕೆ ಹಾಸ್ಯಾಸ್ಪದ. ಅಕ್ರಮಗಳ ಮೂಲಕ ಚುನಾವಣಾ ಪ್ರಕ್ರಿಯೆಯನ್ನು ದಾರಿ ತಪ್ಪಿಸಿ ಅಧಿಕಾರಕ್ಕೆ ಬರಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

## ‘ಎ’ ಖಾತಾ ಬದಲಾವಣೆಗೆ ಸ್ಕೆಚ್ ಇಲ್ಲದೆಯೂ ಅರ್ಜಿ

ಬೆಂಗಳೂರು

ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಮಾಡಿಸಿಕೊಳ್ಳಲು ಬಯಸುತ್ತಿರುವ ಸಾವಿರಾರು ಆಸ್ತಿ ಮಾಲೀಕರಿಗೆ ರಾಜ್ಯ ಸರ್ಕಾರ ಮಹತ್ವದ ಸಡಿಲಿಕೆ ನೀಡಿದೆ. ಎ ಖಾತೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಸೈಟ್ ಸ್ಕೆಚ್ ಸಲ್ಲಿಸಬೇಕೆಂಬ ನಿಯಮದಲ್ಲಿ ಬದಲಾವಣೆ ಮಾಡಲಾಗಿದ್ದು, ಇನ್ನು ಮುಂದೆ ಸೈಟ್ ಸ್ಕೆಚ್ ಇಲ್ಲದಿದ್ದರೂ ಅಗತ್ಯ ದಾಖಲೆಗಳೊಂದಿಗೆ ಎ ಖಾತೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಕಂದಾಯ ವಿಭಾಗದ ವಿಶೇಷ ಆಯುಕ್ತ ಮನೀಷ್ ಮೌದ್ಗಿಲ್ ಈ ಕುರಿತು ಆದೇಶ ಹೊರಡಿಸಿದ್ದು, ಎ ಖಾತೆ ಅರ್ಜಿ ಪ್ರಕ್ರಿಯೆಯನ್ನು ಮತ್ತಷ್ಟು ಸರಳ ಹಾಗೂ ಜನಸ್ನೇಹಿಯಾಗಿ ರೂಪಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಇದುವರೆಗೆ ಎ ಖಾತೆಗೆ ಅರ್ಜಿ ಸಲ್ಲಿಸುವ ವೇಳೆ ಸೈಟ್ ಸ್ಕೆಚ್ ಕಡ್ಡಾಯವಾಗಿದ್ದ ಕಾರಣ ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದರು. ಕೆಲವೆಡೆ ಸ್ಕೆಚ್ ಸಿದ್ಧಪಡಿಸುವ ಹೆಸರಿನಲ್ಲಿ ಅನಗತ್ಯ ಹಣ ವಸೂಲಿ ಮಾಡುತ್ತಿರುವ ಬಗ್ಗೆ ದೂರುಗಳು ಸಹ ಬಂದಿದ್ದವು. ಈ ಹಿನ್ನೆಲೆಯಲ್ಲಿ ಅರ್ಜಿದಾರರಿಗೆ ಅನಗತ್ಯ ಆರ್ಥಿಕ ಹೊರೆ ತಪ್ಪಿಸುವ ಉದ್ದೇಶದಿಂದ ಸರ್ಕಾರ ನಿಯಮಗಳಲ್ಲಿ ಸಡಿಲಿಕೆ ತಂದಿದೆ.

ಹೊಸ ಆದೇಶದ ಪ್ರಕಾರ, ಜಿಬಿಎಯಲ್ಲಿ ನೋಂದಾಯಿತ ವಾಸ್ತುಶಿಲ್ಪಿಯಿಂದಲೇ ಸೈಟ್ ಸ್ಕೆಚ್ ಪಡೆಯಬೇಕೆಂಬ ಕಡ್ಡಾಯ ಇರುವುದಿಲ್ಲ. ನಿಗದಿತ ನಮೂನೆಯಲ್ಲಿ ಯಾವುದೇ




ಅರ್ಹ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿ ಸಿದ್ಧಪಡಿಸಿದ ಸ್ಕೆಚ್ ಅನ್ನು ಸಲ್ಲಿಸಬಹುದು.

ಒಂದು ವೇಳೆ ಸ್ಕೆಚ್‌ನಲ್ಲಿ ಸಣ್ಣಪುಟ್ಟ ತಾಂತ್ರಿಕ ಲೋಪಗಳಿದ್ದರೂ ಆಸ್ತಿಯ ವಿವರಗಳು, ದಾಖಲೆಗಳು ಹಾಗೂ ಗಡಿ ವಿವರಗಳು ಸ್ಪಷ್ಟವಾಗಿದ್ದರೆ ಅರ್ಜಿಯನ್ನು ತಿರಸ್ಕರಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಅರ್ಜಿದಾರರು ಸೈಟ್ ಸ್ಕೆಚ್ ಹೆಸರಿನಲ್ಲಿ ಮಧ್ಯವರ್ತಿಗಳಿಗೆ ಅಥವಾ ಖಾಸಗಿ ವ್ಯಕ್ತಿಗಳಿಗೆ ಹೆಚ್ಚುವರಿ ಹಣ ಪಾವತಿಸುವ ಅಗತ್ಯವಿಲ್ಲ. ಅಗತ್ಯ ದಾಖಲೆಗಳನ್ನು ಸರಿಯಾಗಿ ಸಲ್ಲಿಸಿದರೆ ಅರ್ಜಿಯನ್ನು ಪರಿಗಣಿಸಿ ಎ ಖಾತೆ ಪರಿವರ್ತನೆ ಪ್ರಕ್ರಿಯೆ ಮುಂದುವರಿಸಲಾಗುತ್ತದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಜಿಬಿಎ ವಿಶೇಷ ಆಯುಕ್ತ ಮನೀಷ್ ಮೌದ್ಗಿಲ್ ಮಾತನಾಡಿ, ಸೈಟ್ ಸ್ಕೆಚ್ ಪಡೆಯುವ ಪ್ರಕ್ರಿಯೆಯಲ್ಲಿ ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಹಲವು ದೂರುಗಳು ಬಂದಿದ್ದವು. ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದಲೇ ಈ ಆದೇಶ ಹೊರಡಿಸಲಾಗಿದೆ. ಅರ್ಜಿದಾರರು ಪಾರದರ್ಶಕವಾಗಿ ದಾಖಲೆಗಳನ್ನು ಸಲ್ಲಿಸಿದರೆ ಯಾವುದೇ ಅನಗತ್ಯ ವಿಳಂಬವಾಗುವುದಿಲ್ಲ ಎಂದು ಹೇಳಿದರು.

ಬೆಂಗಳೂರು ನಗರದಲ್ಲಿ ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆಗಾಗಿ ಸಾವಿರಾರು ಅರ್ಜಿಗಳು ಬಾಕಿ ಇರುವ ಹಿನ್ನೆಲೆಯಲ್ಲಿ ಸರ್ಕಾರದ ಈ ನಿರ್ಧಾರ ಮಹತ್ವ ಪಡೆದಿದೆ. ಹೊಸ ಆದೇಶದಿಂದ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಸುಲಭವಾಗಲಿದ್ದು, ಸಾರ್ವಜನಿಕರ ಸಮಯ ಹಾಗೂ ವೆಚ್ಚ ಎರಡೂ ಕಡಿಮೆಯಾಗುವ ನಿರೀಕ್ಷೆಯಿದೆ.

ಜೊತೆಗೆ ಎ ಖಾತೆ ಪರಿವರ್ತನೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹೆಚ್ಚುವುದರೊಂದಿಗೆ ಮಧ್ಯವರ್ತಿಗಳ ಹಾವಳಿಗೂ ಕಡಿವಾಣ ಬೀಳುವ ಸಾಧ್ಯತೆ ಇದೆ.

## ಅಕ್ಕ ಸಮ್ಮೇಳನಕ್ಕೆ ಸಿರಿಗೇರಿ ಎರ್ರಿಸ್ವಾಮಿರಿಗೆ ಆಹ್ವಾನ

ಬಳ್ಳಾರಿ



ಖ್ಯಾತ ಪತ್ರಕರ್ತರು, ಲೇಖಕರು ಮತ್ತು ಬರಹಗಾರರಾದ ಸಿರಿಗೇರಿ ಎರ್ರಿಸ್ವಾಮಿ ಅವರು ಇದೇ ಸೆ.4 ರಿಂದ 3 ದಿನಗಳವರೆಗೆ ಅಮೇರಿಕದಲ್ಲಿ ನಡೆಯಲಿರುವ ಅಕ್ಕ ಸಮ್ಮೇಳನಕ್ಕೆ ಆಹ್ವಾನಿತರಾಗಿದ್ದಾರೆ.

ಅಮೆರಿಕದ ಕನ್ನಡ ಕೂಟಗಳ ಸಂಘದ ಪರವಾಗಿ ಸೆಪ್ಟೆಂಬರ್ 4 ರಿಂದ 6 ರವರೆಗೆ ಅಮೆರಿಕದ ಐತಿಹಾಸಿಕ ನಗರ ಫಿಲಿಡೆಲ್ಫಿಯಾ, ಪೆನ್ಸಿಲ್ವೇನಿಯಾದಲ್ಲಿ 250 ವರ್ಷಗಳ ಸ್ವಾತಂತ್ರೋತ್ಸವಕ್ಕೆ ಹೊಂದಿಕೆಯಾಗುವಂತೆ ನಡೆಯಲಿರುವ ಅಕ್ಕ–2026 ವಿಶ್ವ ಕನ್ನಡ ಸಮ್ಮೇಳನದಲ್ಲಿ ಭಾಗವಹಿಸಲು ಸಿರಿಗೇರಿ ಜಚಿರ್ರಿಸ್ವಾಮಿ ಅವರು ತೆರಳಲಿದ್ದಾರೆ.

ಅಮೇರಿಕದ ‘ಅಕ್ಕ’ ಸಂಘಟನೆಯು ಹಲವು ದಶಕಗಳಿಂದ ವಿಶಿಷ್ಟ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕನ್ನಡದ ಘನತೆಯನ್ನು ಎತ್ತಿ ಹಿಡಿಯುತ್ತಿದೆ. ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು, ವ್ಯಾಪಾರ ವೇದಿಕೆ, ಮಹಿಳಾ ವೇದಿಕೆ, ಯುವ– ಆಧಾರಿತ ಚಟುವಟಿಕೆಗಳು ಮತ್ತು ನಿರಂತರ ವೈದ್ಯಕೀಯ ಶಿಕ್ಷಣ ಸೇರಿದಂತೆ ವ್ಯಾಪಕ ಶ್ರೇಣಿಯ ಚಟುವಟಿಕೆಗಳನ್ನು ನೀಡುವ ಸಂಘಟನೆ ಆಗಿದೆ. ಇದು ಕಲೆ, ಸಂಸ್ಕೃತಿ, ಅಮೇರಿಕದ ಹವಾಮಾನವನ್ನು ಅನುಭವಿಸಲು ಮತ್ತು ವಿವಿಧ ಹಂತಗಳ ಸಹ ಕನ್ನಡಿಗರನ್ನು ಭೇಟಿ ಮಾಡಲು ಉತ್ತಮ ಅವಕಾಶವನ್ನು ಒದಗಿಸುತ್ತದೆ. ಈ ವರ್ಷದ ಮೂರು ದಿನಗಳ ಕಾರ್ಯಕ್ರಮವು ಭಾರತ ಮತ್ತು ಉತ್ತರ ಅಮೆರಿಕಾದಾದ್ಯಂತದ ಸೆಲೆಬ್ರಿಟಿಗಳು ಮತ್ತು ಗಣ್ಯರು ಸೇರಿದಂತೆ 6,000ಕ್ಕೂ ಹೆಚ್ಚು ಸಂದರ್ಶಕರನ್ನು ಸೆಳೆಯುವ ನಿರೀಕ್ಷೆಯಿದೆ ಎಂದು ಅಕ್ಕ ಸಂಘಟನೆಯ ರೂವಾರಿಗಳು ತಿಳಿಸಿದ್ದಾರೆ.

ಎರ್ರಿಸ್ವಾಮಿ ಸಿರಿಗೇರಿ ಅವರು ಮೂಲತಃ ಪತ್ರಕರ್ತರಾಗಿದ್ದು ರಾಜ್ಯದ ವಿವಿಧ ಪತ್ರಿಕೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. 1998ರಲ್ಲಿ ಅನ್ನಪೂರ್ಣ ಪ್ರಕಾಶನ ಸ್ಥಾಪನೆ ಮಾಡಿದ್ದು 13 ಪುಸ್ತಕಗಳ

ಲೇಖಕರು, 106 ಪುಸ್ತಕಗಳ ಪ್ರಕಾಶಕರಾಗಿ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ. 2017 ರಲ್ಲಿ ರಂಗಸಂಗಮ ಕೃತಿಗೆ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಲೇಖಕರೆಂಬ ಹೆಗ್ಗಳಿಕೆ ಹೊಂದಿದ್ದಾರೆ. ನೂರಾರು ಸಾಂಸ್ಕೃತಿಕ ಕಾರ್ಯಕ್ರಮಗಳ ಸಂಘಟಕರಾಗಿ ಗಮನ ಸೆಳೆದಿದ್ದಾರೆ. 2019 ರಲ್ಲಿ ಅನ್ನಪೂರ್ಣ ಪ್ರಕಾಶನ ಸಿರಿಗೇರಿ ಸಂಸ್ಥೆಯಿಂದ ಪ್ರಕಟಿಸಿದ ನಮೋ ವೆಂಕಟೇಶ ಕೃತಿಗೆ ವಾರ್ತಾ ಇಲಾಖೆ ನೀಡುವ ರಾಜ್ಯ ಪ್ರಶಸ್ತಿಗೂ ಭಾಜನರಾಗಿದ್ದಾರೆ. ಕರ್ನಾಟಕ ರಾಜಕೀಯ ಅಕಾಡೆಮಿ (ರಿ) ಬೆಂಗಳೂರು ಹುಟ್ಟು ಹಾಕಿರುವ ಇವರು, ಬಳ್ಳಾರಿ ಜಿಲ್ಲೆಯ ಸಿರಿಗೇರಿ ಮತ್ತು ಸುತ್ತಮುತ್ತಲ ಗ್ರಾಮಗಳಿಗೆ ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ವಿವಿಧ ಕ್ಷೇತ್ರಗಳ ಸಾಧಕರನ್ನು ಆಹ್ವಾನಿಸಿ ಸಾಮಾಜಿಕ, ಆರ್ಥಿಕ, ರಾಜಕೀಯ, ಕಲೆ, ಸಂಗೀತ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪಸರಿಸುತ್ತಿದ್ದಾರೆ.

## ಜಿಬಿಎ ವ್ಯಾಪ್ತಿ ‘ಗ್ಯಾರಂಟಿ’ಗೆ ರೂ. 18,410 ಕೋಟಿ ರೂ. ವೆಚ್ಚ: ದಿನೇಶ್

ಬೆಂಗಳೂರು



‘ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ಸರ್ಕಾರ ರೂ. 18,410.46 ಕೋಟಿ ವೆಚ್ಚ ಮಾಡಿದೆ’ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ತಿಳಿಸಿದರು.

ಜಿಬಿಎ ವ್ಯಾಪ್ತಿಯ ಗ್ಯಾರಂಟಿ ಅನುಷ್ಠಾನ ಸಮಿತಿಯ ಸಭೆಯಲ್ಲಿ ಮಾತನಾಡಿದ ಅವರು, ‘ಗೃಹಲಕ್ಷ್ಮಿ ಯೋಜನೆಯಡಿ 8,86,422 ಮಹಿಳೆಯರಿಗೆ ಈವರೆಗೆ ರೂ. 4,964.40 ಕೋಟಿ ಸಂದಾಯ ಮಾಡಲಾಗಿದೆ. ಪ್ರತಿ ಫಲಾನುಭವಿಗೆ ವೈಯಕ್ತಿಕವಾಗಿ 30 ಕಂತುಗಳಲ್ಲಿ ತಲಾ ರೂ. 60 ಸಾವಿರವನ್ನು ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ’ ಎಂದರು.

‘ಗೃಹಜ್ಯೋತಿ ಯೋಜನೆಯಡಿ 38,18,902 ಮನೆಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ರೂ. 8,311.42 ಕೋಟಿಯನ್ನು ಸರ್ಕಾರ ಬೆಸ್ಕಾಂಗೆ ಪಾವತಿಸಿದೆ. ಶಕ್ತಿ ಯೋಜನೆಯಡಿ 235.23 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ರೂ. 3586.36 ಕೋಟಿ ಮೊತ್ತದ ಟಿಕೆಟ್ ಹಣವನ್ನು ಸಾರಿಗೆ ನಿಗಮಕ್ಕೆ ಸರ್ಕಾರ ಭರಿಸಿದೆ’ ಎಂದರು.

‘ಅನ್ನಭಾಗ್ಯ ಯೋಜನೆಯಡಿ ಫಲಾನುಭವಿಗಳಿಗೆ 5 ಕೆ.ಜಿ. ಹೆಚ್ಚುವರಿ ಅಕ್ಕಿ ಬದಲಿಗೆ ರೂ. 927.13 ಕೋಟಿಯನ್ನು ಡಿಬಿಟಿ ಮೂಲಕ ವರ್ಗಾಯಿಸಲಾಗಿದೆ. ಅಲ್ಲದೆ, 30,87,076 ಫಲಾನುಭವಿಗಳಿಗೆ ಆಹಾರ ಧಾನ್ಯವನ್ನು ಉಚಿತವಾಗಿ ನೀಡಲಾಗಿದ್ದು, ಅದಕ್ಕೆ ತಗುಲಿರುವ ಮೊತ್ತ ರೂ. 568.29 ಕೋಟಿ. ಯುವನಿಧಿ ಯೋಜನೆಯಡಿ 17,664 ನಿರುದ್ಯೋಗಿ ಯುವಕ–ಯುವತಿಯರಿಗೆ ರೂ. 52.86 ಕೋಟಿ ನೀಡಲಾಗಿದೆ’ ಎಂದು ಅಂಕಿ ಅಂಶಗಳ ಸಹಿತ ವಿವರಿಸಿದರು.

‘ಜಿಬಿಎ ವ್ಯಾಪ್ತಿಯ 28 ವಿಧಾನಸಭಾ ಕ್ಷೇತ್ರಗಳ 369 ವಾರ್ಡ್‌ಗಳಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಕರಪತ್ರ ವಿತರಿಸಿ ಜನರಿಗೆ ಮಾಹಿತಿ ತಲುಪಿಸಬೇಕು. ಪ್ರತಿ ವಾರ್ಡ್‌ನಲ್ಲಿ ಗ್ಯಾರಂಟಿ ಶಿಬಿರ, ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಮನೆ ಮನೆ ಅಭಿಯಾನ ಹಮ್ಮಿಕೊಳ್ಳಬೇಕು. ಮೃತರ ಬಗ್ಗೆ ಸರ್ವೆ ಕಾರ್ಯ ಕೈಗೊಳ್ಳಬೇಕು’ ಎಂದು ಸಭೆಯಲ್ಲಿ ಸಲಹೆ ನೀಡಲಾಯಿತು.

ಜಿಬಿಎ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕೃಷ್ಣಪ್ಪ ಸೇರಿದಂತೆ ಜಿಬಿಎ ವ್ಯಾಪ್ತಿ ಮತ್ತು ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಕೋಲಾರ ಜಿಲ್ಲೆಯ ಗ್ಯಾರಂಟಿ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಇದ್ದರು.

## ಖತಾರ್‌ನಲ್ಲಿ ನಟ ಶಿವರಾಜ್ ಹುಟ್ಟುಹಬ್ಬ ಆಚರಣೆ



ದೋಹಾ (ಕತಾರ್)

ಶಿವರಾಜ್ ಕುಮಾರ್ ಅವರು ಕಾತರಿಗೆ ಭೇಟಿ ನೀಡಿ ಒಂದು ದಶಕವಾಗಿದೆ. ಕರ್ನಾಟಕ ಸಂಘ ಕತಾರಿನ ವಾರ್ಷಿಕ ವಿಶೇಷ “ಕರ್ನಾಟಕ ರಾಜ್ಯೋತ್ಸವ” ಕಾರ್ಯಕ್ರಮಕ್ಕೆ ಮೊಟ್ಟ ಮೊದಲ ಬಾರಿಗೆ ತಮ್ಮ ಪಾದಾರ್ಪಣೆಯಿಂದ ಕತಾರಿನ ಕನ್ನಡ ಅಭಿಮಾನಿಗಳಿಗೆ ಹರುಷ ನೀಡಿದರು.

ನಂತರ ಲೀಡರ್ ಚಲನಚಿತ್ರೀಕರಣಕ್ಕೆ ಆಗಮಿಸಿ ದೋಹಾದಲ್ಲಿ ಮತ್ತೊಮ್ಮೆ ಕನ್ನಡದ ಹಿರಿಮೆಯನ್ನು ಮೆರೆದಿದ್ದರು.

ಸುಬ್ರಹ್ಮಣ್ಯ ಹೆಬ್ಬಾಗಿಲು ಅವರ ಜನ್ಮದಿನಕ್ಕೆ ಕಾತರಿನಲ್ಲಿರುವ ಅವರ ನಿವಾಸಕ್ಕೆ ಭೇಟಿ ನೀಡಿ ವಿಶೇಷ ಉಡುಗೊರೆಯಂತೆ ತಮ್ಮ ಉಪಸ್ಥಿತಿಯಲ್ಲಿ ಸುಬ್ರಮಣ್ಯ ಅವರಿಗೆ ಮಹದಾನಂದವನ್ನು ಹಂಚಿದರು. ಈ ಮೂಲಕ ತಮ್ಮ ಪ್ರೀತಿ, ವಿಶ್ವಾಸ. ಹಾಗೂ ಸರಳತೆಯನ್ನು ಶಿವಣ್ಣನವರು ಪ್ರತಿಬಿಂಬಿಸಿದರು.

ಅದೇ ಸುಬ್ರಹ್ಮಣ್ಯ ಹೆಬ್ಬಾಗಿಲು ಅವರು ಇಂದು ಕರ್ನಾಟಕ ಸಂಘ ಕತಾರಿನ ಅಧ್ಯಕ್ಷರಾಗಿ ಕನ್ನಡಿಗರ ಕಣ್ಮಣಿಯಾಗಿರುವ ‘ಹ್ಯಾಟ್ರಿಕ್ ಹೀರೋ’ ಡಾ. ಶಿವರಾಜ್ ಕುಮಾರ್ ಅವರ 64ನೇ ಜನ್ಮ ದಿನಾಚರಣೆಯ ಸಂಭ್ರಮಕ್ಕೆ ತಮ್ಮ ಅಭಿನಂದನೆಗಳನ್ನು ಸಲ್ಲಿಸುತ್ತ ಕಳೆದ ಒಂದು ದಶಕದ ಸವಿ ನೆನಪುಗಳನ್ನು ಮೆಲಕು ಹಾಕಿದರು.

ನಂತರದ ಕೆಲವು ವರ್ಷಗಳಲ್ಲಿ ಶಿವಣ್ಣನವರು ಹಲವು ಕಾರಣಗಳಿಂದ ತಮ್ಮ ಜನ್ಮ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲಿಲ್ಲ.

ಮಾತೃ ವಿಯೋಗ, ಪ್ರೀತಿಯ ತಮ್ಮನಾದ ಪುನೀತ್ ಅವರ ಅಕಾಲಿಕ ಅಗಲಿಕೆ, ತಮ್ಮ ಅನಾರೋಗ್ಯದ ಕಾರಣಗಳಿಂದಾಗಿ ಜನ್ಮದಿನಾಚರಣೆಯು ಅಷ್ಟು ಸಂತಸ ನೀಡುವಂತಿರಲಿಲ್ಲ.

ಈ ಸಂವತ್ಸರ ಕಾರ್ಮೋಡಗಳೆಲ್ಲ ಕಳೆದು ಮತ್ತೆ ತಮ್ಮ ಆರೋಗ್ಯದಲ್ಲಿ ಚೇತರಿಕೆ ಕಂಡು, ಎಂದಿನಂತೆ ಕನ್ನಡಿಗರಿಗೆ ಆನಂದ ಮಳೆಗರೆಯಲು ಶಿವಣ್ಣನವರು ತಮ್ಮ ಜನ್ಮ ದಿನಾಚರಣೆಯನ್ನು ಆಚರಿಸುತ್ತಿರುವುದು ಎಲ್ಲರಿಗೆ ಆನಂದದ ಸಮಾಚಾರ ಎಂದು ಸುಬ್ರಮಣ್ಯ ಅವರು ಹರ್ಷಿಸಿದ್ದಾರೆ.

## ಅಂತಾರಾಷ್ಟ್ರೀಯ ಪ್ಯಾರಿಸ್ ಫ್ಯಾಷನ್ ವೀಕ್‌ನಲ್ಲಿ ಭಾರತದ ಕರಕುಶಲತೆಯ ಚಿನ್ನದ ಲುಕ್‌ನಲ್ಲಿ ಮಿಂಚಿದ ಇಶಾ

ಮುಂಬೈ

ರಿಲಯನ್ಸ್ ರಿಟೇಲ್‌ನ ಕಾರ್ಯನಿರ್ವಾಹಕ ನಿರ್ದೇಶಕಿ ಇಶಾ ಅಂಬಾನಿ, ಪ್ರತಿಷ್ಠಿತ ಪ್ಯಾರಿಸ್ ಹಾಟ್ ಕೌಚರ್ ನಲ್ಲಿ ನಡೆದ ಮನೀಶ್ ಮಲ್ಹೋತ್ರಾ ಮತ್ತು ರಾಹುಲ್ ಮಿಶ್ರಾ ಅವರ ಅದ್ಭುತ ವಿನ್ಯಾಸ ಪ್ರಸ್ತುತಿಗಳಲ್ಲಿ ಇಶಾ ಅಂಬಾನಿ ವಿಶೇಷವಾಗಿ ಭಾಗವಹಿಸಿದ್ದರು. ಅವರ ಉಪಸ್ಥಿತಿಯನ್ನು ಅಂತಾರಾಷ್ಟ್ರೀಯ ಫ್ಯಾಷನ್ ವೇದಿಕೆಯಲ್ಲಿ ಭಾರತೀಯ ವಿನ್ಯಾಸಕರು ಮತ್ತು ಕುಶಲಕರ್ಮಿಗಳನ್ನು ಉತ್ತೇಜಿಸುವ ಅವರ ವಿಶಾಲ ದೃಷ್ಟಿಕೋನವನ್ನು ಸೂಚಿಸಿದೆ. ಈ ಮೂಲಕ ಅವರು ಪ್ಯಾರಿಸ್ ಫ್ಯಾಷನ್ ವೀಕ್‌ನಲ್ಲಿ ಭಾರತೀಯ ಫ್ಯಾಷನ್‌ನ ಪ್ರಮುಖ ಪ್ರತಿನಿಧಿಯಾಗಿ ಹೊರಹೊಮ್ಮಿದ್ದಾರೆ.

ಇಶಾ ಅವರು ಮನೀಶ್ ಮಲ್ಹೋತ್ರಾ ಅವರ ಆಟಮ್/ ವಿಂಟರ್ ಕಲೆಕ್ಷನ್ 2026 ಹಾಟ್ ಕೌಚರ್ ಪ್ರದರ್ಶನದಲ್ಲಿ ಭಾಗವಹಿಸಿದ್ದು, ಇದು ಅಧಿಕೃತ ಪ್ಯಾರಿಸ್



ಕೌಚರ್ ಕ್ಯಾಲೆಂಡರ್‌ನಲ್ಲಿ ಮಲ್ಹೋತ್ರ ಅವರ ಚೊಚ್ಚಲ ಪ್ರಸ್ತುತಿಯಾಗಿರುವುದು ವಿಶೇಷ. ಇದಕ್ಕಾಗಿ ಮುಂಬಯಿನಲ್ಲಿ 700 ಗಂಟೆಗಳಿಗೂ ಹೆಚ್ಚು ಅವಧಿಯಲ್ಲಿ ಅತ್ಯಂತ ಸೂಕ್ಷ್ಮಕಸೂತಿ ಮಾಡಿರುವ ಚಿನ್ನದ ವಿಶೇಷ ಗೌನ್ ಅನ್ನು ಇಶಾ ಅಂಬಾನಿ ಧರಿಸಿದ್ದರು.

ಮನೀಶ್ ಮಲ್ಹೋತ್ರಾ ಅವರು ಸ್ಟೈಲಿಸ್ಟ್ ಆಂಡ್ರ್ಯೂ ಮುಕಮಲ್ ಅವರ ಸಹಯೋಗದೊಂದಿಗೆ ಈ ಡಿಸೈನರ್ ಗೌನ್‌ಅನ್ನು ವಿಶೇಷವಾಗಿ ಇಶಾ ಅಂಬಾನಿಗಾಗಿ ವಿನ್ಯಾಸ ಗೊಳಿಸಿದ್ದಾರೆ.

ಇದರಲ್ಲಿ ಭಾರತದ ಸಾಂಪ್ರದಾಯಿಕ ‘ಜರಿ–ಜರ್ದೋಸಿ’ ಕರಕುಶಲತೆ ಹಾಗೂ ‘ಸಾಲಿ’ ಮತ್ತು ‘ತಾಬನ್’ ಎಂಬ ಎರಡು ಬಗೆಯ ಕಸೂತಿ ಕೆಲಸಗಳೊಂದಿಗೆ, ಕೈಯಿಂದ ಅಳವಡಿಸಲಾದ ಸ್ಫಟಿಕಗಳನ್ನು ಬಳಸಲಾಗಿದೆ. ‘ಮಾ’ (ತಾಯಿ) ಎಂಬ ಪರಿಕಲ್ಪನೆಯಿಂದ ಪ್ರೇರಿತವಾದ ಈ ವಿನ್ಯಾಸವನ್ನು ಅವರು ಪ್ರೀತಿ, ಶಕ್ತಿ ಮತ್ತು ಘನತೆಯ ಮೂಲಕ ಹಲವಾರು ಪೀಳಿಗೆಗಳನ್ನೇ ರೂಪಿಸಿದ ಮಹಿಳೆಯರಿಗೆ ಅರ್ಪಿಸಿದ್ದಾರೆ.

ಈ ಚಿನ್ನದ ಗೌನ್‌ಗೆ ಪೂರಕವಾಗಿ ಇಶಾ ಅಂಬಾನಿ ಅವರು ಲೋರೆನ್ ಶ್ವಾರ್ಟ್ಜ್ ಅವರ 50 ಕ್ಯಾರೆಟ್‌ನ ನ್ಯೂಡ್ ವಜ್ರದ ಕಿವಿಯೋಲೆಗಳು ಮತ್ತು 12 ಕ್ಯಾರೆಟ್‌ನ ಪಿಯರ್ ಆಕಾರದ ನ್ಯೂಡ್ ವಜ್ರದ ಉಂಗುರದೊಂದಿಗೆ ತಮ್ಮ ಲುಕ್ ಅನ್ನು ಪೂರ್ಣಗೊಳಿಸಿದ್ದರು. ಚಿನ್ನದ ಗೌನ್ ಮತ್ತು ವಜ್ರದ ಆಭರಣಗಳ ಈ ಸಂಯೋಜನೆಯು ಪ್ಯಾರಿಸ್‌ನ ಪ್ರತಿಷ್ಠಿತ ಫ್ಯಾಷನ್ ವೇದಿಕೆಯಲ್ಲಿ ಭಾರತೀಯ ಕರಕುಶಲತೆ ಮತ್ತು ಆಧುನಿಕ ವಿನ್ಯಾಸದ ಮಿಶ್ರಣವನ್ನು ಪ್ರದರ್ಶಿಸಿತು.

ಇಶಾ ಅಂಬಾನಿ ಅವರ ಪ್ಯಾರಿಸ್ ಫ್ಯಾಷನ್ ನಲ್ಲಿನ ಉಪಸ್ಥಿತಿಯನ್ನು ಭಾರತೀಯ ವಿನ್ಯಾಸಕರು, ಐಷಾರಾಮಿ ಬ್ರಾಂಡ್‌ಗಳು ಮತ್ತು ಕುಶಲಕರ್ಮಿಗಳನ್ನು ಪ್ರಮುಖ ಜಾಗತಿಕ ವೇದಿಕೆಗಳಿಗೆ ಕೊಂಡೊಯ್ಯುವ ಅವರ ದೂರದೃಷ್ಟಿಯನ್ನು ತೋರಿಸಿದೆ.

ರಿಲಯನ್ಸ್ ರಿಟೇಲ್‌ನಲ್ಲಿ ಅವರು ಭಾರತೀಯ ವಿನ್ಯಾಸ ಮತ್ತು ಸೃಜನಶೀಲ ಪ್ರತಿಭೆಗೆ ಜಾಗತಿಕ ಮನ್ನಣೆ ಸಿಗುವಂತಾಗಲು ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy